

# ಬೆಳಗಾವಿ ವರದಿ

ಪ್ರಧಾನ ಸಂಪಾದಕರು: ಸತೀಶ್.ಬಿ.ಜಿ
BELAGAVI VARADI KANNADA DAILY
ಕನ್ನಡ ದಿನಪತ್ರಿಕೆ 24
Read,Share and Follow - www.belagavivaradi.com
Vol-04 Issue: 256 ₹ ಬೆಲೆ: 4 Tuesday, 05, December,2023 newsbelagavi@gmail.com 9900332089 Regn,No:G-2/PMG/KA/NK/BM/139/2021-23

# ಬೆಳಗಾವಿಯಲ್ಲಿ ರಂಗೇರಿದ ವಿಧಾನಮಂಡಲ ಅಧಿವೇಶನ

## ವಿರೋಧಪಕ್ಷದ ಎಲ್ಲ ಪ್ರಶ್ನೆಗೆ ಸರ್ಕಾರ ಉತ್ತರಿಸಲಿದೆ: ಸಿಎಂ




ಬೆಳಗಾವಿ: ಬೆಳಗಾವಿಯಲ್ಲಿ ವಿಧಾನಮಂಡಲದ ಚಳಿಗಾಲದ ಅಧಿವೇಶನ ಪ್ರಾರಂಭವಾಗಲಿದ್ದು, ವಿರೋಧಪಕ್ಷದವರು ಕೇಳುವ ಪ್ರತಿಯೊಂದು ಪ್ರಶ್ನೆಗೂ ಉತ್ತರಿಸಲು ಸರ್ಕಾರ ಸಿದ್ಧವಿದೆ. ಈ ಅಧಿವೇಶನದಲ್ಲಿ ಉತ್ತರಕರ್ನಾಟಕದ ಸಮಸ್ಯೆಗಳತ್ತಲೂ ಗಮನಹರಿಸಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು.

ಅವರು ಸೋಮವಾರ ಬೆಳಗಾವಿಯ ವಿಮಾನ ನಿಲ್ದಾಣದಲ್ಲಿ ಮಾಧ್ಯಮದವರೊಂದಿಗೆ ಮಾತನಾಡಿದರು.

**ಗ್ಯಾರಂಟಿ ಯೋಜನೆಗಳೆಲ್ಲ ಬಡವರ ಕಾರ್ಯಕ್ರಮಗಳು :**

ಪಂಚರಾಜ್ಯ ಚುನಾವಣೆಯಲ್ಲಿ ಗ್ಯಾರಂಟಿ ಯೋಜನೆಗಳಿಂದ ಅಪೇಕ್ಷಿತ ಯಶಸ್ಸು ಸಾಧ್ಯವಾಗದಿರುವ ಬಗ್ಗೆ ಪತ್ರಕರ್ತರ ಪ್ರಶ್ನೆಗೆ ಉತ್ತರಿಸಿ, ತೆಲಂಗಾಣದಲ್ಲಿ ಕಾಂಗ್ರೆಸ್ ಬಹುಮತದೊಂದಿಗೆ ಗೆಲುವು ಸಾಧಿಸಿದೆ. ಮಧ್ಯಪ್ರದೇಶ ರಾಜ್ಯದಲ್ಲಿ ಗೆಲುವು ಸಾಧಿಸಿರುವ ಬಿಜೆಪಿಯವರೂ ಗ್ಯಾರಂಟಿ ಯೋಜನೆಗಳನ್ನು ಘೋಷಿಸಿದ್ದಾರೆ. ಕಾಂಗ್ರೆಸ್ ಸರ್ಕಾರ ಎಂದಿಗೂ ಚುನಾವಣೆಯಲ್ಲಿ ಗೆಲುವು ಸಾಧಿಸಲೆಂದು ಗ್ಯಾರಂಟಿ ಯೋಜನೆಗಳನ್ನು ಘೋಷಿಸುವುದಿಲ್ಲ. ಬಡಜನರಿಗೆ ಆರ್ಥಿಕವಾಗಿ, ಸಾಮಾಜಿಕವಾಗಿ ಶಕ್ತಿ ತುಂಬುವ ಪ್ರಾಮಾಣಿಕತೆಯಿಂದ ಇವುಗಳನ್ನು ಜಾರಿಗೊಳಿಸಲಾಗಿದೆ. ಗ್ಯಾರಂಟಿ ಯೋಜನೆಗಳೆಲ್ಲ ಬಡವರ ಕಾರ್ಯಕ್ರಮಗಳು ಎಂದರು.

**ವಿರೋಧಪಕ್ಷದವರಿಗೆ ಪ್ರಶ್ನಿಸುವ ನೈತಿಕತೆ ಇಲ್ಲ:**

ಈ ಬಾರಿ ವಿರೋಧಪಕ್ಷದವರು ಜಂಟಿಯಾಗಿ ಹೋರಾಟ ಕೈಗೊಳ್ಳಲಿದ್ದಾರೆ ಎಂಬುದಕ್ಕೆ ಪ್ರತಿಕ್ರಯಿಸುತ್ತಾ, ಸರ್ಕಾರ ರಚನೆಯಾಗಿ ಆರು ತಿಂಗಳು ಕಳೆದರೂ ಬಿಜೆಪಿಯವರಿಗೆ ವಿಪಕ್ಷ ನಾಯಕರನ್ನು ಆಯ್ಕೆ ಮಾಡಿರಲಿಲ್ಲ. ವಿರೋಧಪಕ್ಷದವರಿಗೆ ಸರ್ಕಾರವನ್ನು ಪ್ರಶ್ನಿಸುವ ಯಾವ ನೈತಿಕತೆಯೂ ಇಲ್ಲ. ಅವರು ಜಂಟಿಯಾಗಿ ಹೋರಾಟ ನಡೆಸಿದರೂ, ಅವರ ಎಲ್ಲ ಹೋರಾಟಗಳಿಗೆ ಸರ್ಕಾರ ಸಿದ್ಧವಿದೆ ಎಂದರು.



## ವಿಧಾನ ಪರಿಷತ್; ಅಗಲಿದ ಗಣ್ಯರಿಗೆ ಸಂತಾಪ



ಬೆಳಗಾವಿ: ಸುವರ್ಣ ಸೌಧ: ಕುಂದಾನಗರಿ ಬೆಳಗಾವಿಯ ಸುವರ್ಣಸೌಧದಲ್ಲಿ ಸೋಮವಾರ ವಿಧಾನ ಮಂಡಲದ ಚಳಿಗಾಲದ ಅಧಿವೇಶನ ಪ್ರಾರಂಭವಾಯಿತು. ಹಿರಿಯರ ಮನೆಯೆನಿಸಿರುವ ವಿಧಾನ ಪರಿಷತ್ತಿನಲ್ಲಿ ಅಗಲಿದ ಗಣ್ಯರಿಗೆ ಸಂತಾಪ ಸೂಚಿಸಲಾಯಿತು.

ಇತ್ತೀಚೆಗೆ ನಿಧನರಾದ ರಾಜ್ಯ ವಿಧಾನಮಂಡಲದ ಎರಡೂ ಸದನಗಳ ಹಾಗೂ ಸಂಸತ್ತಿನ ಉಭಯ ಸದನಗಳ ಮಾಜಿಸದಸ್ಯರು, ಮಾಜಿ ಸಚಿವರು, ವಿಧಾನಸಭೆಯ ಮಾಜಿ ಸಭಾಧ್ಯಕ್ಷರಾಗಿದ್ದ ಡಿ.ಬಿ.ಚಂದ್ರೇಗೌಡ, ವಿಧಾನ ಪರಿಷತ್ ಮಾಜಿ ಸದಸ್ಯ ಬಿ.ಎಸ್. ವಿಶ್ವನಾಥ, ಹಿರಿಯ ವಿಜ್ಞಾನಿ ಪ್ರೊ. ಎಂ.ಆರ್. ಸತ್ಯನಾರಾಯಣರಾವ್, ಹಿರಿಯ ವಿಜ್ಞಾನಿ ಡಾ.ವಿ.ಎಸ್. ಅರುಣಾಚಲಂ, ಖ್ಯಾತ ಸಂಖ್ಯಾಶಾಸ್ತ್ರಜ್ಞ ಡಾ: ಕಲ್ಯಂಪುಡಿ ರಾಧಾಕೃಷ್ಣರಾವ್, ಹಸಿರುಕ್ರಾಂತಿಯ ಹರಿಕಾರ ಡಾ.ಎಂ.ಎಸ್. ಸ್ವಾಮಿನಾಥನ್, ಹಿರಿಯ ರಂಗಭೂಮಿ ಹಾಗೂ ಚಲನಚಿತ್ರ ನಟಿ ಮಮತಾ ಗುಡೂರ್, ಹಿರಿಯ ಲೇಖಕಿ ಡಾ: ಕಮಲಾ ಹೆಮ್ಮಿಗೆ, ಹಿರಿಯ ಪತ್ರಕರ್ತ ಜಿ.ಎನ್. ರಂಗನಾಥ ರಾವ್, ಹಿರಿಯ ಹಿಂದೂಸ್ತಾನಿ ಗಾಯಕ ಪ್ರೊ. ಹನುಮಣ್ಣ ನಾಯಕ ದೊರೆ ಅವರಿಗೆ ಸಭಾಪತಿ ಬಸವರಾಜ ಹೊರಟ್ಟಿ ಅವರು ಸಂತಾಪ ಸೂಚನೆ ನಿರ್ಣಯ ಮಂಡಿಸಿದರು. ಸಭಾನಾಯಕ ಎನ್.ಎಸ್.ಬೋಸರಾಜ ಸಂತಾಪ ಸೂಚಿಸಿ ನಿರ್ಣಯ ಅನುಮೋದಿಸಿ ಅಗಲಿದ ಗಣ್ಯರ ಸಾಧನೆಗಳ ಮೇಲೆ ಬೆಳಕು ಚೆಲ್ಲಿದರು. ಆಡಳಿತ ಹಾಗೂ ವಿರೋಧ ಪಕ್ಷದ ಸದಸ್ಯರು ಮಾತನಾಡಿ ಗೌರವ ಸೂಚಿಸಿದರು.ಅಗಲಿದ ಗಣ್ಯರ ಗೌರವಾರ್ಥ ಒಂದು ನಿಮಿಷದ ಮೌನಾಚರಣೆ ಮಾಡಲಾಯಿತು.

## ರಾಯಚೂರು ಜಿಲ್ಲೆಗೆ 107 ಹೊಸ ಬಸ್‌ಗಳ ನೀಡಿಕೆ: ಸಾರಿಗೆ ಸಚಿವ ರಾಮಲಿಂಗಾರೆಡ್ಡಿ



ಬೆಳಗಾವಿ: ಸುವರ್ಣಸೌಧ: ರಾಯಚೂರು ಜಿಲ್ಲೆಯ 7 ಸಾರಿಗೆ ಘಟಕಗಳಿಗೆ 107 ಹೊಸ ಬಸ್‌ಗಳನ್ನು ಒದಗಿಸಲಾಗಿದ್ದು, ಅವಶ್ಯಕತೆಗನುಗುಣವಾಗಿ ಜಿಲ್ಲೆಗೆ ಇನ್ನೂ ಹೊಸಬಸ್‌ಗಳು ಒದಗಿಸಲು ಬದ್ಧ ಎಂದು ಸಾರಿಗೆ ಮತ್ತು ಮುಜರಾಯಿ ಸಚಿವರಾದ ರಾಮಲಿಂಗಾರೆಡ್ಡಿ ಅವರು ಹೇಳಿದರು.

ವಿಧಾನಸಭೆಯಲ್ಲಿ ಶಾಸಕ ಬಸವನಗೌಡ ದದ್ದಲ್ ಅವರು ಕೇಳಿದ ಚುಕ್ಕೆಗುರುತಿನ ಪ್ರಶ್ನೆಗೆ ಅವರು ಉತ್ತರಿಸಿ ಮಾತನಾಡಿದರು. ಪೂರ್ಣಕವಚ ನಿರ್ಮಿತ 250 ವೇಗದೂತ ಸಾರಿಗೆಗಳನ್ನು ಖರೀದಿಸಲು ಅನುಮೋದನೆ ನೀಡಲಾಗಿದೆ. ಪೂರ್ಣಕವಚ ನಿರ್ಮಿತ 93 ನಗರ ಸಾರಿಗೆ ಬಸ್‌ಗಳನ್ನು ಡಲ್ಟ್ ಆರ್ಥಿಕ ಸಹಾಯದಿಂದ ಖರೀದಿಸಲು ಮಂಜೂರಾತಿ ದೊರೆತಿದ್ದು, ಖರೀದಿ ಪ್ರಕ್ರಿಯೆ ಜಾರಿಯಲ್ಲಿದೆ ಎಂದು ಅವರು ಹೇಳಿದರು.

ಮುಂದಿನ ದಿನಗಳಲ್ಲಿ ಪೂರ್ಣಗೊಂಡ ಹೊಸಬಸ್ ಡಿಪೋ ಜೊತೆಗೆ ಇತರೆ ಘಟಕಗಳಿಗೆ ಅವಶ್ಯಕತೆಗನುಗುಣವಾಗಿ ಹೊಸ ಬಸ್‌ಗಳನ್ನು ಒದಗಿಸಲಾಗುವುದು ಎಂದು ಹೇಳಿದರು.ರಾಯಚೂರಿನಲ್ಲಿ ನೂತನ ಬಸ್‌ಘಟಕದ ಕಾಮಗಾರಿ ಪೂರ್ಣಗೊಂಡಿದ್ದು, ಶೀಘ್ರದಲ್ಲಿ ಉದ್ಘಾಟಿಸಿ ಕಾರ್ಯಾಚರಣೆ ಪ್ರಾರಂಭಿಸಲಾಗುವುದು ಎಂದು ಭರವಸೆ ನೀಡಿದ ಅವರು ರಾಯಚೂರು ಜಿಲ್ಲೆಯಲ್ಲಿ ಒಟ್ಟು 07 ಬಸ್‌ಘಟಕಗಳಿದ್ದು, 665 ಬಸ್‌ಗಳಿದ್ದು,ಅವುಗಳಲ್ಲಿ 654 ಬಸ್‌ಗಳು ಚಾಲನೆಯಲ್ಲಿವೆ ಎಂದು ಅವರು ತಿಳಿಸಿದರು.

## ರೈತರ ಕೃಷಿ ಪಂಪ್‌ಸೆಟ್‌ಗಳಿಗೆ ನಿತ್ಯ 7 ಗಂಟೆಗಳ ಕಾಲ ತ್ರಿಫೇಸ್ ವಿದ್ಯುತ್: ಸಚಿವ ಪ್ರಿಯಾಂಕ್ ಖರ್ಗೆ



ಬೆಳಗಾವಿ: ಸುವರ್ಣಸೌಧ: ರಾಜ್ಯದ ವಿದ್ಯುತ್ ಸರಬರಾಜು ಕಂಪನಿಗಳ ವ್ಯಾಪ್ತಿಯಲ್ಲಿ ಪ್ರಸ್ತುತ ರೈತರ ಕೃಷಿ ಪಂಪ್‌ಸೆಟ್‌ಗಳಿಗೆ ದಿನನಿತ್ಯ 7 ಗಂಟೆಗಳ ಕಾಲ ತ್ರಿಫೇಸ್ ವಿದ್ಯುತ್ ಸರಬರಾಜು ಮಾಡಲಾಗುತ್ತಿದೆ ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಪ್ರಿಯಾಂಕ್ ಖರ್ಗೆ ಅವರು ಹೇಳಿದರು.

ವಿಧಾನಪರಿಷತ್‌ನಲ್ಲಿ ಸದಸ್ಯ ಛಲವಾದಿ ನಾರಾಯಣಸ್ವಾಮಿ ಅವರು ಕೇಳಿದ ಪ್ರಶ್ನೆಗೆ ಇಂಧನ ಸಚಿವರ ಪರವಾಗಿ ಅವರು ಉತ್ತರಿಸಿದರು.

ರೈತರ ಪಂಪ್‌ಸೆಟ್‌ಗಳಿಗೆ 7 ಗಂಟೆಗಳ ಕಾಲ ತ್ರಿಫೇಸ್ ವಿದ್ಯುತ್ ಸರಬರಾಜು ಮಾಡಲಾಗುತ್ತಿದೆ. ರಾಜ್ಯದ ವಿವಿಧ ಭಾಗಗಳಲ್ಲಿನ ಬೇಡಿಕೆಗಳ ಹಿನ್ನೆಲೆಯಲ್ಲಿ ಭತ್ತ ಮತ್ತು ಕಬ್ಬು ಬೆಳೆಗಳ ಕಟಾವು ಪೂರ್ವ ಅವಧಿಯಲ್ಲಿ 7 ಗಂಟೆಗಳಿಗೂ ಹೆಚ್ಚಿನ ಅವಧಿಗೆ ವಿದ್ಯುತ್ ಸರಬರಾಜು ಮಾಡಲಾಗುತ್ತಿದೆ.

ಕೆಲವು ಪ್ರದೇಶ ಗಳಲ್ಲಿ ಸ್ಥಳೀಯ ಅವಶ್ಯಕತೆಗೆ ತಕ್ಕಂತೆ ಹಗಲಿನಲ್ಲಿ 4 ಗಂಟೆಗಳು ಹಾಗೂ ರಾತ್ರಿ ವೇಳೆ 3 ಗಂಟೆಗಳು ಸೇರಿ 7 ಗಂಟೆಗಳ ಕಾಲ ವಿದ್ಯುತ್ ಸರಬರಾಜು ಮಾಡಲಾಗುತ್ತಿದೆ.

ಈ ವರ್ಷ ಬರಗಾಲವಾಗಿರುವುದರಿಂದ ಕೃಷಿ ಪಂಪ್‌ಸೆಟ್‌ಗಳ ವಿದ್ಯುತ್ ಬಳಕೆ ಪ್ರಮಾಣ ದ್ವಿಗುಣವಾಗಿರುವುದರಿಂದ, ಲಭ್ಯ ಸಂಪನ್ಮೂಲಗಳಿಂದ ವಿದ್ಯುತ್ ಪಡೆದು ಸರಬರಾಜು ಮಾಡಲಾಗುತ್ತಿದೆ ಎಂದು ತಿಳಿಸಿದ ಸಚಿವ ಪ್ರಿಯಾಂಕ್ ಖರ್ಗೆ ಅವರು ಕೆಲವು ಸಮಯಗಳಲ್ಲಿ ತಾಂತ್ರಿಕ ಕಾರಣಗಳಿಂದ ವಿದ್ಯುತ್ ಲಭ್ಯತೆ/ ಉತ್ಪಾದನೆ ಕುಂಠಿತಗೊಂಡು ಸೀಮಿತ ಪ್ರಮಾಣದಲ್ಲಿ ವಿದ್ಯುತ್ ಸರಬರಾಜು ಮಾಡಿರುವುದನ್ನು ಇದೇ ಸಂದರ್ಭದಲ್ಲಿ ತಿಳಿಸಿದರು.

## ರೂ.40 ಕೋಟಿ ವೆಚ್ಚದಲ್ಲಿ 19.30ಲಕ್ಷ ಹದಿಹರೆಯದ ಹೆಣ್ಮಕ್ಕಳಿಗೆ ಸ್ಯಾನಿಟರಿ ನ್ಯಾಪ್‌ಕಿನ್ ಪ್ಯಾಡ್ ವಿತರಣೆಗೆ ಕ್ರಮ: ಸಚಿವ ದಿನೇಶ ಗುಂಡೂರಾವ್



ಬೆಳಗಾವಿ: ಸುವರ್ಣಸೌಧ: ರಾಜ್ಯದಲ್ಲಿ ಮುಟ್ಟು ಮತ್ತು ಮುಟ್ಟಿನ ಶುಚಿತ್ವದ ಕುರಿತು ಅರಿವು ಮೂಡಿಸುವ ನಿಟ್ಟಿನಲ್ಲಿ ಶುಚಿ ಕಾರ್ಯಕ್ರಮ ರೂಪಿಸಲಾಗಿದ್ದು, ಅದರಡಿ ವಿವಿಧ ಕಾರ್ಯಕ್ರಮಗಳನ್ನು ಕೈಗೆತ್ತಿಕೊಳ್ಳಲಾಗಿದೆ. 40 ಕೋಟಿ ರೂ. ವೆಚ್ಚದಲ್ಲಿ ಸರಕಾರಿ ಹಾಗೂ ಸರಕಾರಿ ಅನುದಾನಿತ ಶಾಲಾ/ಕಾಲೇಜುಗಳ 10 ರಿಂದ 18 ವಯೋಮಾನದ 19.30ಲಕ್ಷ ವಿದ್ಯಾರ್ಥಿನಿಯರಿಗೆ ಶಾಲೆ ಮತ್ತು ಹಾಸ್ಟೆಲ್‌ಗಳಲ್ಲಿ ಸ್ಯಾನಿಟರಿ ನ್ಯಾಪ್‌ಕಿನ್ ಪ್ಯಾಡ್ ವಿತರಣೆಗೆ ಕ್ರಮಕೈಗೊಳ್ಳಲಾಗುತ್ತಿದೆ ಎಂದು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವ ದಿನೇಶ ಗುಂಡೂರಾವ್ ಅವರು ಹೇಳಿದರು.

ವಿಧಾನಪರಿಷತ್‌ನಲ್ಲಿ ಸದಸ್ಯ ಕೆ.ಎ.ತಿಪ್ಪೇಸ್ವಾಮಿ ಅವರ ಪ್ರಶ್ನೆಗೆ ಅವರು ಉತ್ತರಿಸಿದರು.ಶುಚಿ ಕಾರ್ಯಕ್ರಮದಡಿ ಹದಿಹರೆಯದವರಲ್ಲಿ ಋತುಸ್ರಾವದ ಶುಚಿತ್ವ ಬಗ್ಗೆ ಅರಿವು ಮೂಡಿಸಲಾಗುತ್ತಿದೆ. ಹದಿಹರೆಯದವರಿಗೆ ಸ್ಯಾನಿಟರಿ ನ್ಯಾಪಕಿನ್ ಬಳಕೆ ಹಾಗೂ ಉಪಯೋಗಗಳ ಬಗ್ಗೆ ತಿಳಿವಳಿಕೆ ನೀಡಲಾಗುತ್ತಿದೆ. ಸಮುದಾಯ ಮತ್ತು ವಿಶೇಷವಾಗಿ ಹದಿಹರೆಯದವರಲ್ಲಿ ಋತುಸ್ರಾವ ನೈರ್ಮಲ್ಯದ ಕುರಿತು ದೃಷ್ಟಿಕೋನ ಬದಲಾಯಿಸಲಾಗುತ್ತಿದೆ. ಸ್ಯಾನಿಟರಿ ನ್ಯಾಪ್‌ಕಿನ್‌ಗಳನ್ನು ಒದಗಿಸುವುದರ ಮುಖಾಂತರ ಬಳಕೆಯನ್ನು ಪ್ರೋತ್ಸಾಹಿಸುವುದು ಹಾಗೂ ಮುಟ್ಟಿನ ವೈಜ್ಞಾನಿಕ ನಿರ್ವಹಣೆಯ ಕುರಿತು ಮಾರ್ಗದರ್ಶನ ನೀಡಲಾಗುತ್ತಿದೆ ಎಂದರು.

## ಆನೆ ಹಾವಳಿ ನಿಯಂತ್ರಣ ಸಿಬ್ಬಂದಿಗೆ ಹೆಚ್ಚಿನ ತರಬೇತಿ: ಸಚಿವ ಈಶ್ವರ ಖಂಡ್ರೆ



ಬೆಳಗಾವಿ: ಸುವರ್ಣಸೌಧ: ರಾಜ್ಯದಲ್ಲಿ ಈಗಾಗಲೇ ಏಳು ಆನೆ ಕಾರ್ಯಪಡೆ ತಂಡಗಳನ್ನು ರಚಿಸಲಾಗಿದ್ದು, ಆನೆ ಹಿಡಿಯಲು ನಿಯೋಜಿಸಿರುವ ಸಿಬ್ಬಂದಿಗಳಿಗೆ ಹೆಚ್ಚಿನ ತರಬೇತಿ ನೀಡಲಾಗುವುದ ಎಂದು ಅರಣ್ಯ ,ಜೈವಿಕ ಮತ್ತು ಪರಿಸರ ಸಚಿವ ಈಶ್ವರ ಬಿ ಖಂಡ್ರೆ ಹೇಳಿದರು.

ವಿಧಾನಪರಿಷತ್ತಿನ ಪ್ರಶ್ನೋತ್ತರ ಅವಧಿಯಲ್ಲಿ ಸದಸ್ಯೆ ಡಾ.ತೇಜಸ್ವಿನಿ ಗೌಡ ಅವರು, ಆನೆ ಹಾವಳಿ ಕುರಿತು ಕೇಳಿದ ಪ್ರಶ್ನೆಗೆ ಉತ್ತರಿಸಿದ ಸಚಿವರು, ಆನೆಗಳು ಜನವಸತಿ ಪ್ರದೇಶಕ್ಕೆ ಬರುವುದನ್ನು ತಡೆಯಲು ಅನೆ ಕಂದಕ ನಿರ್ಮಾಣ, ರೇಲ್ವೇ ಬ್ಯಾರಿಕೇಡ್‌ಗಳ ಅಳವಡಿಕೆಯನ್ನು ಮಾಡಲಾಗುವುದು ಎಂದರು.

## ಬೆಳಗಾವಿಯಲ್ಲಿ ವಿಜಯೇಂದ್ರಗೆ ಸಂಭ್ರಮದ ಸ್ವಾಗತ



ಬೆಳಗಾವಿ: ಚಳಿಗಾಲದ ಅಧಿವೇಶನದಲ್ಲಿ ಭಾಗವಹಿಸಲು ತೆರಳಿದ ಸಂದರ್ಭದಲ್ಲಿ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಅವರಿಗೆ ಕಾರ್ಯಕರ್ತರು ಮತ್ತು ಮುಖಂಡರು ಅದ್ದೂರಿ, ಸಂಭ್ರಮೋಲ್ಲಾಸದಿಂದ ಆತ್ಮೀಯ ಸ್ವಾಗತ ಕೋರಿದರು.

ವಿಮಾನ ನಿಲ್ದಾಣದಿಂದ ಬೃಹತ್ ರೋಡ್ ಶೋ ಮೂಲಕ ಪಕ್ಷದ ಮುಖಂಡರು ಹಾಗೂ ಕಾರ್ಯಕರ್ತರು ಪ್ರೀತಿಪೂರ್ವಕವಾಗಿ ಸ್ವಾಗತಿಸಿದರು. ಪಂಚರಾಜ್ಯಗಳ ಬಿಜೆಪಿ ದಿಗ್ವಿಜಯದ ಬೆನ್ನಲ್ಲೇ ಪಕ್ಷದ ಕಾರ್ಯಕರ್ತರಲ್ಲಿರುವ ವಿಶ್ವಾಸ ಹಾಗೂ ಉತ್ಸಾಹ ಇಮ್ಮಡಿಸಿದಂತಿತ್ತು. ಲೋಕಸಮರದಲ್ಲಿ ಪ್ರಚಂಡ ವಿಜಯ ಸಾಧಿಸುವ ನಿಟ್ಟಿನಲ್ಲಿ ಟೊಂಕಕಟ್ಟಿ ನಿಂತಂತೆ ಭಾಸವಾಯಿತು.

ಈ ಸಂದರ್ಭದಲ್ಲಿ ಪಕ್ಷದ ಜಿಲ್ಲಾಧ್ಯಕ್ಷ ಸಂಜಯ್ ಪಾಟೀಲ್, ಶಾಸಕ ಅಭಯ್ ಪಾಟೀಲ್, ಮಾಜಿ ಶಾಸಕ ಅನಿಲ್ ಬೆನಕೆ, ಮುಖಂಡ ಶಂಕರಗೌಡ ಪಾಟೀಲ್, ಪ್ರಧಾನ ಕಾರ್ಯದರ್ಶಿಗಳಾದ ಸುಭಾಶ್ ಪಾಟೀಲ್, ಸಂದೀಪ್ ದೇಶಪಾಂಡೆ ಸೇರಿದಂತೆ ಪಕ್ಷದ ಪದಾಧಿಕಾರಿಗಳು, ಮುಖಂಡರು ಹಾಗೂ ಕಾರ್ಯಕರ್ತರು ಉಪಸ್ಥಿತರಿದ್ದರು.

## ಕಲ್ಯಾಣ ಕರ್ನಾಟಕ ಶಿಕ್ಷಕರ ನೇಮಕಾತಿಗೆ ಕ್ರಮ: ಸಚಿವ ಮಧು ಬಂಗಾರಪ್ಪ



ಬೆಳಗಾವಿ: ಸುವರ್ಣಸೌಧ: ಕಲ್ಯಾಣ ಕರ್ನಾಟಕ ಭಾಗದಲ್ಲಿ ಶಾಲಾ ಶಿಕ್ಷಕರ ಕೊರತೆಯನ್ನು ತುಂಬುವುದರ ಜೊತೆಗೆ ಈ ಭಾಗದ ಶಾಲೆಗಳಿಗೆ ಅಗತ್ಯವಿರುವ ಹೆಚ್ಚಿನ ಮೂಲಭೂತ ಸೌಕರ್ಯಗಳನ್ನು ಆದ್ಯತೆಯಲ್ಲಿ ಒದಗಿಸಲಾಗುವುದು ಎಂದು ಶಾಲಾ ಶಿಕ್ಷಣ ಮತ್ತು ಸಕ್ಷರತಾ ಸಚಿವ ಎಸ್. ಮಧು ಬಂಗಾರಪ್ಪ ಹೇಳಿದರು.

ವಿಧಾನಪರಿಷತ್ತಿನ ಪ್ರಶ್ನೋತ್ತರ ಅವಧಿಯಲ್ಲಿ ಸದಸ್ಯರಾದ ಶಶೀಲ್ ನಮೋಶಿ ಅವರ ಚುಕ್ಕೆ ಗುರುತಿನ ಪ್ರಶ್ನೆಗೆ ಉತ್ತರಿಸಿದ ಸಚಿವರು, ಶಾಲಾ ಶಿಕ್ಷಣ ಆಯುಕ್ತಾಲಯದಲ್ಲಿ ಹಲವು ವರ್ಷಗಳಿಂದ ಬೀಡು ಬಿಟ್ಟಿರುವ ಸಿಬ್ಬಂದಿಗಳ ವರ್ಗಾವಣೆಗೆ ಸೂಕ್ತ ಕ್ರಮ ಕೈಗೊಳ್ಳಲಾಗುವುದು ಎಂದರು.

ರಾಜ್ಯದ ಪ್ರಾಥಮಿಕ ಪ್ರೌಢಶಾಲೆ ಮತ್ತು ಪದವಿ ಪೂರ್ವ ಕಾಲೇಜುಗಳಲ್ಲಿ ದೈಹಿಕ ಶಿಕ್ಷಣ ಶಿಕ್ಷಕರ ನೇಮಕ ಕುರಿತಂತೆ ಸದಸ್ಯ ಎಸ್.ವಿ. ಸಂಕನೂರ ಅವರ ಪ್ರಶ್ನೆಗೆ ಉತ್ತರಿಸಿದ ಸಚಿವ ಎಸ್. ಮಧು ಬಂಗಾರಪ್ಪ ಅವರು, ಪ್ರಾಥಮಿಕ ಶಾಲಾ ವಿಭಾಗದಲ್ಲಿ ಖಾಲಿ ಇರುವ 2120 ದೈಹಿಕ ಶಿಕ್ಷಕರು ಹಾಗೂ ಪ್ರೌಢಶಾಲಾ ವಿಭಾಗದಲ್ಲಿ 2500 ಹುದ್ದೆಗಳ ಭರ್ತಿ ಪ್ರಸ್ತಾವನೆಯು ಆರ್ಥಿಕ ಇಲಾಖೆಯ ಸಮಾಲೋಚನೆಯಲ್ಲಿದೆ. ಪದವಿ ಪೂರ್ವ ಕಾಲೇಜುಗಳಲ್ಲಿ ದೈಹಿಕ ಶಿಕ್ಷಕರನ್ನು ಆದಷ್ಟು ಶೀಘ್ರದಲ್ಲಿ ನೇಮಕ ಮಾಡಲಾಗುವುದು ಎಂದರು.

## ವಿಪಕ್ಷ ನಾಯಕ, ರಾಜ್ಯಾಧ್ಯಕ್ಷ ಬದಲಾಗುವವರೆಗೂ ಶಾಸಕಾಂಗ ಸಭೆಗೆ ಹೋಗಲ್ಲ: ಶಾಸಕ ಬಸನಗೌಡ ಪಾಟೀಲ್ ಯತ್ನಾಳ್



ಬೆಳಗಾವಿ: ಕರ್ನಾಟಕ ಬಿಜೆಪಿ ಅಧ್ಯಕ್ಷ ಹಾಗೂ ವಿರೋಧ ಪಕ್ಷದ ನಾಯಕನ ಆಯ್ಕೆಯಾಗಿದೆ. ಆದರೆ ಬಿಜೆಪಿ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಅವರ ಅಸಮಾಧಾನ ಮಾತ್ರ ಇನ್ನೂ ಕಡಿಮೆಯಾಗುತ್ತಿಲ್ಲ. ವಿಪಕ್ಷ ನಾಯಕ ಅಥವಾ ಬಿಜೆಪಿ ರಾಜ್ಯಾಧ್ಯಕ್ಷ ಸ್ಥಾನವನ್ನು ಉತ್ತರ ಕರ್ನಾಟಕದವರಿಗೆ ನೀಡಬೇಕೆಂದು ಯತ್ನಾಳ್ ಅವರ ಆಗ್ರಹವಾಗಿದ್ದು, ಉತ್ತರ ಕರ್ನಾಟಕಕ್ಕೆ ನ್ಯಾಯ ಕೊಡುವವರೆಗೂ ಬಿಜೆಪಿ ಶಾಸಕಾಂಗ ಸಭೆಗೆ ಹೋಗಲ್ಲ ಎಂದು ಖಡಕ್ ಆಗಿ ಹೇಳಿದ್ದಾರೆ.

ಬೆಳಗಾವಿಯಲ್ಲಿ ಮಾತನಾಡಿದ ಬಸನಗೌಡ ಪಾಟೀಲ್ ಯತ್ನಾಳ್, ಸದನದಲ್ಲಿ ಉತ್ತರ ಕರ್ನಾಟಕ ಭಾಗದ ಜನರ ಸಮಸ್ಯೆ ಬಗ್ಗೆ ಚರ್ಚೆ ಆಗಲಿ. ದಕ್ಷಿಣ ಕರ್ನಾಟಕಕ್ಕೆ ನ್ಯಾಯ ಕೊಟ್ರು, ಆ ಭಾಗದ ನಾಯಕರಿಗೆ ನಾವು ಗುಲಾಮರಲ್ಲ. ಉತ್ತರ ಕರ್ನಾಟಕಕ್ಕೆ ನ್ಯಾಯ ಕೊಡುವವರೆಗೂ ಬಿಎಲ್ಪಿ(ಬಿಜೆಪಿ ಶಾಸಕಾಂಗ) ಸಭೆಗೆ ಬರಲ್ಲ ಎಂದು ಖಂಡ ತುಂಡವಾಗಿ ಹೇಳಿದರು.

ರಾಜ್ಯಾಧ್ಯಕ್ಷ, ವಿರೋಧ ಪಕ್ಷದ ನಾಯಕನ ಬದಲಾವಣೆಗೆ ಪಟ್ಟು: ಬಹಳಷ್ಟು ಅನಕೂಲ ಇದ್ದವರಿಗೆ ರಾಜ್ಯಾಧ್ಯಕ್ಷ, ವಿರೋಧ ಪಕ್ಷದ ನಾಯಕನನ್ನು ಮಾಡುತ್ತಾರೆ. ರಾಜ್ಯದ ಜನರ ದೃಷ್ಟಿಯಲ್ಲಿ ನಾನು ಎಲ್ಲಾ ರೀತಿಯ ರಾಜ್ಯಾಧ್ಯಕ್ಷ ಹಾಗೂ ವಿರೋಧ ಪಕ್ಷದ ನಾಯಕ ಆಗಲು ಸಮರ್ಥನಾಗಿದ್ದೇನೆ. ಉತ್ತರ ಕರ್ನಾಟಕ ಭಾಗಕ್ಕೆ ರಾಜ್ಯಾಧ್ಯಕ್ಷ ಮತ್ತು ವಿರೋಧ ಪಕ್ಷದ ನಾಯಕ ಸ್ಥಾನ ಸಿಗಲೇಬೇಕು. ಅದಕ್ಕೆ ನಾನು ಯಾರ ಮುಲಾಜಿಗೂ ಹೆದರುವುದಿಲ್ಲ . ಉತ್ತರ ಕರ್ನಾಟಕಕ್ಕೆ ಅಪಮಾನ ಮಾಡಲಾಗಿದೆ. ರಾಜ್ಯಾಧ್ಯಕ್ಷ, ವಿರೋಧ ಪಕ್ಷದ ಸ್ಥಾನ ಬದಲಾಗುವವರೆಗೂ ನಾನು ಶಾಸಕಾಂಗ ಸಭೆಗೆ ಹೋಗುವುದಿಲ್ಲ ಎಂದು ಹೇಳಿದರು.

ನಾನು ರಾಜ್ಯಾಧ್ಯಕ್ಷನಾಗುವುದಕ್ಕೆ ಎಲ್ಲಾ ರೀತಿಯ ಅರ್ಹ ಇದೆ . ನಾನು ಒಬ್ಬ ಸಾಮಾನ್ಯ ಕಾರ್ಯಕರ್ತ, ನಾನು ಯಾವುದೇ ಭ್ರಷ್ಟಾಚಾರ ಮಾಡಿಲ್ಲ. ನಮ್ಮ ಅಪ್ಪ ಮುಖ್ಯಮಂತ್ರಿಯಲ್ಲ. ನಾನು ಯಾವುದೇ ಸರ್ಕಾರಿ ಭೂಮಿ ಲೂಟಿ ಮಾಡಿಲ್ಲ. ನಂದು ಎಲ್ಲವೂ ಕುಲಂಕುಲ್ಲ ಇದೆ. ಉತ್ತರ ಕರ್ನಾಟಕಕ್ಕೆ ಅನ್ಯಾಯ ಆಗಿದೆ. ಉತ್ತರ ಕರ್ನಾಟಕದ ಎಮ್‌ಎಲ್‌ಎಗಳು, ಎಂಪಿಗಳು ನಿಮಗೆ ಬೇಕು. ಆದರೆ ರಾಜ್ಯಾಧ್ಯಕ್ಷ ವಿರೋಧ ಪಕ್ಷದ ನಾಯಕ ಆ ಹಳೆ ಮೈಸೂರು ಬಾಗದವರು ಆಗಬೇಕು ಎಂದು ಸ್ವಪಕ್ಷದ ವಿರುದ್ಧ ಗುಡುಗಿದರು.

ಮುಖ್ಯಮಂತ್ರಿ ಹಳೆ ಮೈಸೂರು ಭಾಗ, ಉಪಮುಖ್ಯಮಂತ್ರಿಯ ಹಳೆ ಮೈಸೂರು ಭಾಗ, ವಿರೋಧ ಪಕ್ಷದ ನಾಯಕ ಹಳೆ ಮೈಸೂರು ಭಾಗ, ಬಿಜೆಪಿ ವಿರೋಧ ಪಕ್ಷದ ನಾಯಕ ಮತ್ತು ರಾಜ್ಯಾಧ್ಯಕ್ಷ ಹಳೆ ಮೈಸೂರು ಭಾಗ ಮತ್ತು ಬೆಂಗಳೂರಿನವರು. ನಾವೇನು ಉತ್ತರ ಕರ್ನಾಟಕದವರು ಗಂಟೆ ಹೊಡಿಬೇಕಾ? ನಮಗೆ ನ್ಯಾಯ ಸಿಗುವವರೆಗೂ ಯಾವುದೇ ಹೋರಾಟಕ್ಕೂ ನಾನು ಸಿದ್ಧ. ಯಾವ ಸ್ಥಾನವನ್ನು ತ್ಯಾಗವನ್ನು ಬೇಕಾದರೂ ಮಾಡುತ್ತೇನೆ ಎಂದು ಪರೋಕ್ಷವಾಗಿ ಶಾಸಕ ಸ್ಥಾನಕ್ಕೆ ರಾಜೀನಾಮೆ ನೀಡಲು ರೆಡಿ ಎನ್ನುವ ಅರ್ಥದಲ್ಲಿ ಹೇಳಿದರು.

## ಗದಗ-ಹರಪನಹಳ್ಳಿ ರೈಲ್ವೆ ಮಾರ್ಗಕ್ಕೆ ಆಗ್ರಹಿಸಿ ಪ್ರತಿಭಟನೆ



ಬೆಳಗಾವಿ: ಗದಗ-ಹರಪನಹಳ್ಳಿ ರೈಲ್ವೆ ಮಾರ್ಗಕ್ಕೆ ಆಗ್ರಹಿಸಿ ಮುಂಡರಗಿ ತಾಲೂಕು ಸಾರ್ವಜನಿಕ ಹೋರಾಟ ವೇದಿಕೆ ವತಿಯಿಂದ ಸೋಮವಾರ ಸಮೀಪದ ಸುವರ್ಣ ಗಾರ್ಡ್‌ನ ಬಳಿ ನಿರ್ಮಿಸಲಾದ ಟೆಂಟ್ ನಲ್ಲಿ ಪ್ರತಿಭಟನೆ ನಡೆಸಲಾಯಿತು.

ಪ್ರತಿಭಟನೆಯಲ್ಲಿ ಹೋರಾಟ ವೇದಿಕೆ ಸಂಘಟಿಕರು ಮಾತನಾಡಿ, ಗದಗ-ಹರಪನಹಳ್ಳಿ ರೈಲ್ವೆ ಮಾರ್ಗವು ಬೆಂಗಳೂರು ರಾಜಧಾನಿಯವರೆಗೂ ಮುಂದುವರೆಯುವ ರೈಲ್ವೆ ಯೋಜನೆಯನ್ನು ಜಾರಿಗೆ ತರುವುದರಲ್ಲಿ ರಾಜಕೀಯ ನಾಯಕರು ಮಲತಾಯಿ ಧೋರಣೆ ಮಾಡುತ್ತಿರುವದರಿಂದ ಗದಗ ಜಿಲ್ಲೆಯ ಮುಂಡರಗಿಗೆ ವಿಜಯನಗರ ಜಿಲ್ಲೆಯ ಹೂವಿನಹಡಗಲಿಗೆ ಅನ್ಯಾಯವಾಗುತ್ತಿದೆ ಎಂದು ಆಕ್ರೋಶ ವ್ಯಕ್ತ ಪಡಿಸಿದರು.

ಮುಖ್ಯವಾಗಿ ಬಿಜಾಪುರ-ಬಾಗಲಕೋಟ-ಬದಾಮಿ-ಗದಗ ಪ್ರವಾಸಿ ತಾಣಗಳಾದ ಮಹಾಕೂಟ ಪಟ್ಟದಕಲ್ಲು, ಶಿವಯೋಗಿ ಮಂದಿರ, ಗೋಕಾಕ ಪಾಲ್ಸ್, ಬಿಜಾಪೂರದ ಗೊಲಗುಂಬಜ, ಲಕ್ಕುಂಡಿಯ ಅತ್ತಿಮಬ್ಬೆ, ಗದಗನ ವೀರನಾರಾಯಣ ದೇವಸ್ಥಾನ ಹಾಗೂ ಕಪ್ಪತ ಹಿಲ್ಸ್, ಗದಗ, ಮುಂಡರಗಿ ಹಾಗೂ ಹೂವಿನ ಹಡಗಲಿ ಬೃಹತ ವಾಣಿಜ್ಯ ಪಟ್ಟಣಗಳಾಗಿದ್ದು, ಅದರಲ್ಲೂ ಮುಂಡರಗಿ ತಾಲೂಕ ಗಂಗಾಪೂರ ಗ್ರಾಮದ ವಿಜಯನಗರ ಶುಗರ್ಸ್ ಪ್ರಾರಂಭವಾಗಿದೆ.ಇದರಿಂದ ಗದಗ-ಹರಪನಹಳ್ಳಿ ರೈಲ್ವೆ ಮಾರ್ಗವು ಬೆಂಗಳೂರು ರಾಜಧಾನಿಯವರೆಗೂ ಮುಂದುವರೆಯುವ ರೈಲ್ವೆ ಯೋಜನೆಯನ್ನು ಜಾರಿಗೆ ತಂದರೆ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ದಾರ್ಮಿಕ ಅಲ್ಪಸಂಖ್ಯಾತರು, ಕಟ್ಟಡ ಕಾರ್ಮಿಕರು, ದಿನಗೂಲಿ ಕಾರ್ಮಿಕರು, ಬಿದಿ ಬದಿ ವ್ಯಾಪಾರಸ್ಥರು, ಅಸಂಘಟಿತ ಕಾರ್ಮಿಕರಿಗೆ ಸಾಕಷ್ಟು ಅನೂಕುಲವಾಗಲಿದೆ ಎಂದು ತಿಳಿಸಿದರು.

News

# ಮೋದಿಯವರ ನಾಯಕತ್ವದಲ್ಲಿ ಬಿಜೆಪಿಯ ಬಿರುಗಾಳಿಯು ಮೂರು ರಾಜ್ಯಗಳಲ್ಲಿ ಕಾಂಗ್ರೆಸ್‌ನ್ ನಾಮಾಶೇಷ

ಮಧ್ಯಪ್ರದೇಶ, ಛತ್ತೀಸ್ಗಢ ಮತ್ತು ರಾಜಸ್ಥಾನ ವಿಧಾನಸಭೆ ಚುನಾವಣೆಯ ಫಲಿತಾಂಶ ಭಾನುವಾರ ಪ್ರಕಟವಾಗಿದೆ. ಈ ಸಂದರ್ಭದಲ್ಲಿ ಮಾತನಾಡಿದ, ಬಿಜೆಪಿಯ ಹಿರಿಯ ನಾಯಕ ಮತ್ತು ಕೇಂದ್ರ ಗೃಹ ಮತ್ತು ಸಹಕಾರ ಸಚಿವ ಶ್ರೀ ಅಮಿತ್ ಶಾ ಅವರು, "ಪ್ರಧಾನಿ ನರೇಂದ್ರ ಮೋದಿ ಅವರ ನಾಯಕತ್ವದಲ್ಲಿ, ಭಾರತೀಯ ಜನತಾ ಪಕ್ಷವು ಮಧ್ಯಪ್ರದೇಶ, ಛತ್ತೀಸ್ಗಢ ಮತ್ತು ರಾಜಸ್ಥಾನದಲ್ಲಿ ಕಾಂಗ್ರೆಸ್ನ್ನು ನಿರ್ಣಾಯಕವಾಗಿ ಸೋಲಿಸಿದೆ" ಎಂದು ಹೇಳಿದರು.

"ಕಳೆದ ಒಂಬತ್ತು ವರ್ಷಗಳಲ್ಲಿ ಮೋದಿ ಸರ್ಕಾರದ ಸಾಧನೆಗಳ ಮೂಲಕ ಮೋದಿಯವರು ಮಾತ್ರ ಜನರ ಹೃದಯದಲ್ಲಿ ನೆಲೆಸಿದ್ದಾರೆ. ಇಂದಿನ ಚುನಾವಣಾ ಫಲಿತಾಂಶಗಳು ತುಷ್ಟೀಕರಣ ಮತ್ತು ಜಾತಿ ಆಧಾರಿತ ರಾಜಕಾರಣದ ಯುಗ ಅಂತ್ಯಗೊಂಡಿದೆ ಎಂಬುದನ್ನು ಸಾಬೀತುಪಡಿಸುತ್ತದೆ. ಹೊಸ ಭಾರತವು ಕಾರ್ಯಕ್ಷಮತೆಯ ರಾಜಕೀಯವನ್ನು ಆಧರಿಸಿ ಮತ ಚಲಾಯಿಸುತ್ತದೆ.

ತಮ್ಮ ಅಪಾರ ಬೆಂಬಲಕ್ಕಾಗಿ ಮಧ್ಯಪ್ರದೇಶ, ಛತ್ತೀಸ್ಗಢ ಮತ್ತು ರಾಜಸ್ಥಾನದ ಜನರಿಗೆ ಕೃತಜ್ಞತೆಯನ್ನು ವ್ಯಕ್ತಪಡಿಸಿದ ಶಾ, ಬಿಜೆಪಿಯ ಅಭೂತಪೂರ್ವ ವಿಜಯಕ್ಕಾಗಿ ಪ್ರಧಾನಿ ನರೇಂದ್ರ ಮೋದಿಯವರನ್ನು ಅಭಿನಂದಿಸಿದರು. ರಾಜಸ್ಥಾನದ ಜನತೆಗೆ ಹಾಗೂ ಪಕ್ಷದ ಕಾರ್ಯಕರ್ತರಿಗೆ ಶ್ಲಾಘನೆಗಳನ್ನು ಸಲ್ಲಿಸಿದ ಅವರು, "ಮೋದಿಯವರ ನೇತೃತ್ವದ ಬಿಜೆಪಿಗೆ ಭವ್ಯವಾದ ವಿಜಯವನ್ನು ದಯಪಾಲಿಸಿದ ರಾಜಸ್ಥಾನದ ಜನತೆಗೆ ಮತ್ತು ಪಕ್ಷದ ಕಾರ್ಯಕರ್ತರಿಗೆ ನಾನು ಅಭಿನಂದಿಸುತ್ತೇನೆ. ಈ ವಿಜಯವು ಮೋದಿಯವರ ನಾಯಕತ್ವದ ಮೇಲೆ ಜನರ ಅಚಲ ನಂಬಿಕೆಯನ್ನು ಪ್ರತಿಬಿಂಬಿಸುತ್ತದೆ."



ಶ್ರೀ ನರೇಂದ್ರ ಮೋದಿ ನೇತೃತ್ವದ ಡಬಲ್ ಇಂಜಿನ್ ಸರ್ಕಾರದ ಕಲ್ಯಾಣ ನೀತಿಗಳು ಮತ್ತು ಉಪಕ್ರಮಗಳು ಮಧ್ಯಪ್ರದೇಶದ ಗಣನೀಯ ವಿಜಯಕ್ಕೆ ಕಾರಣವಾಗಿವೆ ಎಂದು ಶ್ರೀಯುತ ಅಮಿತ್ ಶಾ ಹೇಳಿದರು. "ಈ ವಿಜಯವು ಪ್ರಾಥಮಿಕವಾಗಿ ಉತ್ತಮ ಆಡಳಿತಕ್ಕೆ ಸಾರ್ವಜನಿಕರ ಅನುಮೋದನೆಯ ಫಲಿತಾಂಶವಾಗಿದೆ" ಎಂದರು.

ಇದಲ್ಲದೆ, ಬಿಜೆಪಿಯ ಯಶಸ್ಸಿಗೆ ಛತ್ತೀಸ್ಗಢದ ಜನತೆಗೆ ಧನ್ಯವಾದ ಅರ್ಪಿಸಿದ ಶಾ, "ಛತ್ತೀಸ್ಗಢದ ಬುಡಕಟ್ಟು, ಬಡ ಮತ್ತು ರೈತ ಸಮುದಾಯಗಳು ಬಿಜೆಪಿಗೆ ಗಮನಾರ್ಹ ಬಹುಮತವನ್ನು ನೀಡಿದ್ದು, ಪ್ರಧಾನಮಂತ್ರಿ ಶ್ರೀ ನರೇಂದ್ರ ಮೋದಿ ಅವರಲ್ಲಿ ತಮ್ಮ ನಂಬಿಕೆಯನ್ನು ವ್ಯಕ್ತಪಡಿಸಿದ್ದಾರೆ" ಎಂದು ಹೇಳಿದರು.

ತೆಲಂಗಾಣ ಜನತೆಯ ಉತ್ಸಾಹದ ಬೆಂಬಲಕ್ಕಾಗಿ ಕೃತಜ್ಞತೆಗಳನ್ನು ವ್ಯಕ್ತಪಡಿಸಿದ ಕೇಂದ್ರ ಗೃಹ ಸಚಿವರು, "ಪ್ರಧಾನಿ ಶ್ರೀ ನರೇಂದ್ರ ಮೋದಿ ಅವರ ನಾಯಕತ್ವದಲ್ಲಿ ಬಿಜೆಪಿ ತೆಲಂಗಾಣದ ಅಭಿವೃದ್ಧಿಗೆ ಕೆಲಸ ಮಾಡುವುದನ್ನು ಮುಂದುವರಿಸುತ್ತದೆ. ಜನರ ಸಹಕಾರದೊಂದಿಗೆ ನಾವು ನಿಸ್ಸಂದೇಹವಾಗಿ ತೆಲಂಗಾಣವನ್ನು ಸಮೃದ್ಧ ರಾಜ್ಯವನ್ನಾಗಿ ಮಾಡುತ್ತೇವೆ ಎಂದರು.

ಈ ಎಲ್ಲಾ ರಾಜ್ಯಗಳ ಮತದಾರರು ಭಾರತೀಯ ಜನತಾ ಪಕ್ಷಕ್ಕೆ ತಮ್ಮ ಆಶೀರ್ವಾದವನ್ನು ಧಾರೆಯೆರೆದಿದ್ದಕ್ಕಾಗಿ ಶ್ರೀ ಅಮಿತ್ ಶಾ ಅವರು ಹೃತ್ಪೂರ್ವಕ ಕೃತಜ್ಞತೆಗಳನ್ನು ವ್ಯಕ್ತಪಡಿಸಿದರು. ಮೋದಿ ಸರ್ಕಾರ ಜಾರಿಗೊಳಿಸಿದ ಕಲ್ಯಾಣ ಖಾತರಿಗಳು ಮತ್ತು ಸಾರ್ವಜನಿಕ ಯೋಜನೆಗಳಲ್ಲಿ ಸಾರ್ವಜನಿಕರು ಸಂಪೂರ್ಣ ನಂಬಿಕೆಯನ್ನು ಪ್ರದರ್ಶಿಸಿದ್ದಾರೆ ಎಂದರು. ಭಾರತದ ಜನರು ಉತ್ತಮ ಆಡಳಿತ ಮತ್ತು ಅಭಿವೃದ್ಧಿಯ ರಾಜಕೀಯದಲ್ಲಿ ಮಾತ್ರ ವಿಶ್ವಾಸ ಹೊಂದಿದ್ದಾರೆ.

ರಾಜಸ್ಥಾನ, ಮಧ್ಯಪ್ರದೇಶ ಮತ್ತು ಛತ್ತೀಸ್ಗಢದ ವಿಧಾನಸಭಾ ಚುನಾವಣೆಗಳಲ್ಲಿ ಬಿಜೆಪಿಯ ಗಣನೀಯ ಬಹುಮತದ ಬಗ್ಗೆ, ಶ್ರೀಯುತ ಶಾ ಅವರು ಪಕ್ಷದ ಕಾರ್ಯಕರ್ತರು ಮತ್ತು ಮೂರು ರಾಜ್ಯಗಳ ಜನರಿಗೆ ವಿಶೇಷ ಧನ್ಯವಾದಗಳನ್ನು ಅರ್ಪಿಸಿದರು.



ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಸುವರ್ಣಸೌಧದ ಶಾಶ್ವತ ವಿದ್ಯುತ್ ಅಲಂಕಾರವನ್ನು ಉದ್ಘಾಟಿಸಿದರು. ವಿಧಾನಸಭಾಧ್ಯಕ್ಷರಾದ ಯು.ಟಿ.ಖಾದರ್, ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ, ಬೆಳಗಾವಿ ಜಿಲ್ಲಾ ಉಸ್ತುವಾರಿ ಸಚಿವರಾದ ಸತೀಶ್ ಜಾರಕಿಹೊಳಿ, ಮಕ್ಕಳ ಕಲ್ಯಾಣ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್, ಸಮಾಜ ಕಲ್ಯಾಣ ಸಚಿವ ಹೆಚ್.ಸಿ.ಮಹದೇವಪ್ಪ ಸೇರಿ ಹಲವು ಸಚಿವರು ಮತ್ತು ಎಲ್ಲಾ ಶಾಸಕರು ಈ ಸಂದರ್ಭಕ್ಕೆ ಸಾಕ್ಷಿಯಾದರು.

## ಸಚಿವ ಜಮೀರ್ ಅಹ್ಮದ್ ಹೇಳಿಕೆ ವಿಚಾರ: ಪ್ರತಿಭಟನೆ ಮುಂದೂಡಿದ ಬಿಜೆಪಿ



ಬೆಳಗಾವಿ: ವಿಧಾನಸಭೆಯ ಸ್ಪೀಕರ್ ಕುರಿತಾಗಿ ಸಚಿವ ಜಯಮೀರ್ ಅಹಮದ್ ಅವರು ತೆಲಂಗಾಣದ ಚುನಾವಣಾ ಪ್ರಚಾರದ ವೇಳೆ ಹೇಳಿಕೆ ನೀಡಿರುವ ವಿಚಾರವಾಗಿ ಸೋಮವಾರ ನಡೆಯುವ ವಿಧಾನ ಮಾಡಲ ಅಧಿವೇಶನದಲ್ಲಿ ಬಿಜೆಪಿ ಪ್ರತಿಭಟನೆ ನಡೆಸಲು ನಿರ್ಧರಿಸಿತ್ತು. ಆದರೆ ಸಭಾಪತಿಯವರ ಸಲಹೆ ಮೇರೆಗೆ ಪ್ರತಿಭಟನೆ ಮುಂದೂಡಿದೆ.

ವಿಧಾನಸಭೆ ಸ್ಪೀಕರ್ ಕುರಿತು ಸಚಿವ ಜಮೀರ್ ಅಹ್ಮದ್ ಹೇಳಿಕೆ ವಿಚಾರವಾಗಿ ಸಚಿವರ ಹೇಳಿಕೆಯನ್ನ ವಿರೋಧಿಸಿ ಇಂದು ವಿಧಾನ ಮಂಡಲ ಅಧಿವೇಶನದಲ್ಲಿ ಪ್ರತಿಭಟನೆಗೆ ವಿಪಕ್ಷ ಬಿಜೆಪಿ ನಿರ್ಧರಿಸಿತ್ತು. ಅಧಿವೇಶನದ ವೇಳೆ ಪ್ರತಿಭಟನೆ ಮಾಡದಂತೆ ಸಭಾಪತಿ ಹೊರಟಿ ಸಲಹೆ ನೀಡಿದ್ದಾರೆ.

ವಿಧಾನಪರಿಷತ್ ಸಭಾಪತಿ ಸಲಹೆ ನೀಡಿದ ಹಿನ್ನೆಲೆಯಲ್ಲಿ ಬಿಜೆಪಿ ಧರಣಿಯನ್ನು ಮುಂದೂಡಿದೆ. ತೆಲಂಗಾಣ ಚುನಾವಣಾ ಪ್ರಚಾರದಲ್ಲಿ ಸಚಿವ ಜಮೀರ್ ಅಹ್ಮದ್ ಸಭಾಪತಿ ಕುರಿತಂತೆ ಬಿಜೆಪಿಯ ನಾಯಕರು ಇದೀಗ ವಿಧಾನಸಭೆಯ ಸ್ಪೀಕರ್ಗೆ ಸಲಾಂ ಹೊಡೆಯುತ್ತಾರೆ ಇದು ಕಾಂಗ್ರೆಸ್ನ ತಾಕತ್ತು ಎಂದು ಹೇಳಿಕೆ ನೀಡಿದ್ದರು. ಇದಕ್ಕೆ ವಿಪಕ್ಷ ಬಿಜೆಪಿ ತೀವ್ರ ವಿರೋಧ ವ್ಯಕ್ತಪಡಿಸಿತ್ತು.

## ಜಾರಕಿಹೊಳಿ ಆಪ್ತನಿಗೆ ಚೂರಿ ಇರಿತ; ಸಚಿವೆ ಲಕ್ಷ್ಮೀ ಹೆಬ್ಬಾಳಕರ ಸಹೋದರ ಹಟ್ಟಿಹೊಳಿ ಮೇಲೆ ಆರೋಪ



ಬೆಳಗಾವಿ: ಬೆಳಗಾವಿ ಜಿಲ್ಲಾ ಬಿಜೆಪಿ ಎಸ್ ಸಿ ಮೋರ್ಚಾ ಕಾರ್ಯಕರ್ತ ಹಾಗು ಗೋಕಾಕ ಶಾಸಕ ರಮೇಶ ಜಾರಕಿಹೊಳಿ ಅವರ ಆಪ್ತ ಪೃಥ್ವಿ ಸಿಂಗ್ ಅವರಿಗೆ ಚಾಕುವಿನಿಂದ ಇರಿಯಲಾಗಿದೆ.

ಬೆಳಗಾವಿ ಇಲ್ಲಿನ ಖಾಸಗಿ ಆಸ್ಪತ್ರೆಗೆ ದಾಖಲಾಗಿರುವ ಪೃಥ್ವಿ ಸಿಂಗ್ ಅವರು ವಿಡಿಯೋ ಹೇಳಿಕೆ ಬಿಡುಗಡೆ ಮಾಡಿದ್ದು, "ತಮ್ಮ ಮೇಲಾದ ಹಲ್ಲೆಗೆ ಸಚಿವೆ ಲಕ್ಷ್ಮಿ ಹೆಬ್ಬಾಳ್ಕರ್ ಸಹೋದರ ವಿಧಾನ ಪರಿಷತ್ ಸದಸ್ಯ ಚನ್ನರಾಜ ಹಟ್ಟಿಹೊಳಿ ಕಾರಣ" ಎಂದು ಆರೋಪಿಸಿದ್ದಾರೆ. 55 ವರ್ಷದ ಪೃಥ್ವಿಸಿಂಗ್ ಅವರ ಎಡಗೈ ಮತ್ತು ಕುತ್ತಿಗಿಗೆ ಗಾಯಗಳಾಗಿವೆ.

ಆದರೆ ಸಚಿವೆ ಲಕ್ಷ್ಮಿ ಹೆಬ್ಬಾಳಕರ ಆರೋಪ ನಿರಾಕರಿಸಿ, ಪೊಲೀಸರು ತನಿಖೆ ಮಾಡಲಿ ಎಂದು ತಿಳಿಸಿದ್ದಾರೆ. ಪೃಥ್ವಿಸಿಂಗ್ ಅವರ ಬಳಿಯಿಂದ ಒಂದು ದಾಖಲೆ ಪತ್ರ ಪಡೆಯಲು ತಮ್ಮ ಕಡೆಯ ಒಂದಿಬ್ಬರು ಹಿಂಡಲಗಾ ಸಮೀಪದ ಜಯನಗರದಲ್ಲಿ ಅವರ ನಿವಾಸಕ್ಕೆ ತೆರಳಿದ್ದರು.

ಆಗ ಅವರು ಕೇಸರಿ ಬಣ್ಣದ ಟಿ ಶರ್ಟ ಧರಿಸಿದ್ದರು. ಆದರೆ ಈಗ ಚಾಕುವಿನಿಂದ ಇರಿಯಲಾಗಿದೆ ಎಂದು ವಿಡಿಯೋ ರೆಕಾರ್ಡಿಂಗ್ ಬಿಡುಗಡೆ ಮಾಡಿರುವ ವಿಡಿಯೋದಲ್ಲಿ ಅವರು ಧರಿಸಿಕೊಂಡಿದ್ದು ಬಿಳಿ ಬಣ್ಣದ ಶರ್ಟ. ಇದೆಲ್ಲ ಸಿಸಿಟಿವಿ ದೃಶ್ಯದಲ್ಲಿ ದಾಖಲಾಗಿದೆ ಎಂದು ಸಚಿವೆ ಲಕ್ಷ್ಮಿ ತಿಳಿಸಿದ್ದಾರೆ. ಕೆಎಲ್ಇ ಆಸ್ಪತ್ರೆಯ ತುರ್ತು ಚಿಕಿತ್ಸಾ ಘಟಕದಲ್ಲಿ ದಾಖಲಾಗಿರುವ ಪೃಥ್ವಿಸಿಂಗ್ ಅವರನ್ನು ಬಿಜೆಪಿ ಅಧ್ಯಕ್ಷ, ಶಾಸಕ ವಿಜಯೇಂದ್ರ ಸೇರಿದಂತೆ ಬಿಜೆಪಿ ಶಾಸಕರು ಹೋಗಿದ್ದರು.

## ಜನವರಿ 23 ರಂದು ಪಿ.ಎಸ್.ಐ ನೇಮಕಾತಿಗೆ ಮರುಪರೀಕ್ಷೆ: ಗೃಹ ಸಚಿವ ಡಾ.ಜಿ.ಪರಮೇಶ್ವರ

ಬೆಳಗಾವಿ: ಸುವರ್ಣಸೌಧ: ಡಿ.23 ರಂದು ನಡೆಯಬೇಕಿದ್ದ 545 ಪಿ.ಎಸ್.ಐ ನೇಮಕಾತಿಯ ಮರು ಪರೀಕ್ಷೆಯನ್ನು ಜ.23 ರಂದು ನಡೆಸಲಾಗುವುದು ಎಂದು ಗೃಹ ಸಚಿವ ಡಾ.ಜಿ.ಪರಮೇಶ್ವರ ಹೇಳಿದರು.

ಸೋಮವಾರ ಬೆಳಗಾವಿ ಅಧಿವೇಶನದ ಶೂನ್ಯ ವೇಳೆಯಲ್ಲಿ ಶಾಸಕ ಬಸವನಗೌಡ ಯತ್ನಾಳ 545 ಪಿ.ಎಸ್.ಐ ನೇಮಕಾತಿ ಮರುಪರೀಕ್ಷೆ ಕುರಿತು ಪ್ರಸ್ತಾಪಿಸಿದ ವಿಷಯದ ಮೇಲೆ ಉತ್ತರಿಸಿ ಅವರು ಮಾತನಾಡಿದರು.

ದಿನಾಂಕ 3.10.2021 ರಂದು 545 ಪಿ.ಎಸ್.ಐ ನೇಮಕಾತಿಗೆ ಸರ್ಕಾರದಿಂದ ಅಧಿಸೂಚನೆ ಹೊರಡಿಸಲಾಗಿತ್ತು. ಲಿಖಿತ ಪರೀಕ್ಷೆಯಲ್ಲಿ ಬ್ಲೂಟೂತ್ ಬಳಕೆ ಹಾಗೂ ಓ.ಎಂ.ಆರ್ ತಿದ್ದುಪಡಿಯಂತಹ ಅಕ್ರಮ ಬೆಳಕಿಗೆ ಬಂದಿದ್ದರಿಂದ, ಹಿಂದಿನ ಸರ್ಕಾರ ಮರುಪರೀಕ್ಷೆ ಆದೇಶಿಸಿತ್ತು. ಇದನ್ನು ಪ್ರಶ್ನಿಸಿ ಕೆಲ ಅಭ್ಯರ್ಥಿಗಳು ಉಚ್ಚ ನ್ಯಾಯಾಲಯದ ಮೊರೆ ಹೋಗಿದ್ದರು. ಸಂಪೂರ್ಣ ವಿಚಾರಣೆ ಬಳಿಕ ಉಚ್ಚ ನ್ಯಾಯಾಲಯವು ದಿನಾಂಕ 10.11.2023 ರಂದು ಮರುಪರೀಕ್ಷೆ ಸಮ್ಮತಿಸಿ ನೀಡಿ ಆದೇಶಿಸಿದೆ. ನ್ಯಾಯಾಲಯದ ಆದೇಶದಂತೆ ಪೊಲೀಸ್ ಇಲಾಖೆ ಬದಲಿಗೆ ಕರ್ನಾಟಕ ಪರೀಕ್ಷಾ ಪ್ರಾಧಿಕಾರದಿಂದ ಲಿಖಿತ ಪರೀಕ್ಷೆಯನ್ನು ನಡೆಸಲು ಸರ್ಕಾರ ತೀರ್ಮಾನ ಕೈಗೊಂಡಿದೆ.



ಈ ಬೆಳವಣಿಗೆಗಳ ನಡುವೆ ಸರ್ಕಾರ 403 ಪಿ.ಎಸ್.ಐ ನೇಮಕಾತಿ ಹೊಸ ಅಧಿಸೂಚನೆ ಹೊರಡಿಸಿದೆ. 600 ಪಿ.ಎಸ್.ಐ ಗಳ ನೇಮಕಾತಿಗೆ ಹಣಕಾಸು ಇಲಾಖೆ ಅನುಮೋದನೆ ನೀಡಿದೆ.

ಈ ಎಲ್ಲಾ ಪಿ.ಎಸ್.ಐ ನೇಮಕಾತಿಗಳ ನಡುವೆ ಜೇಷ್ಠತೆ ಗೊಂದಲ ಉಂಟಾಗಬಾರದು ಎನ್ನುವ ಕಾರಣಕ್ಕೆ 545 ಪಿ.ಎಸ್.ಐ ಗಳ ನೇಮಕಾತಿಯನ್ನು ಡಿ.23 ಕ್ಕೆ ನಡೆಸಲು ಸಿದ್ಧತೆ ಮಾಡಲಾಗಿತ್ತು. ಒಟ್ಟು 54301 ಅಭ್ಯರ್ಥಿಗಳು ಪರೀಕ್ಷೆ ಬರೆಯಲಿದ್ದಾರೆ. ಪರೀಕ್ಷಾ ಅಕ್ರಮ ತಡೆಗಟ್ಟುವ ಹಿನ್ನಲೆಯಲ್ಲಿ ಬೆಂಗಳೂರಿನಲ್ಲಿ ಮಾತ್ರ ಪರೀಕ್ಷೆ ನಡೆಸಲಾಗುತ್ತಿದೆ ಎಂದರು.

ಈ ಉತ್ತರಕ್ಕೆ ಸದನದ ಎಲ್ಲಾ ಸದಸ್ಯರು ಒಕ್ಕೊರಲಿನಿಂದ ಆಕ್ಷೇಪಿಸಿ, ಲಿಖಿತ ಪರೀಕ್ಷೆಗೆ ಒಂದು ತಿಂಗಳ ಅವಕಾಶ ನೀಡಿರುವುದು ಪ್ರತಿಭಾಂತ ವಿದ್ಯಾರ್ಥಿಗಳಿಗೆ ತೊಂದರೆಯಾಗುತ್ತದೆ. ಆದ್ದರಿಂದ ಲಿಖಿತ ಪರೀಕ್ಷೆ ಮುಂದೂಡಬೇಕು ಎಂದು ಗೃಹ ಸಚಿವರಲ್ಲಿ ಕೋರಿದರು.

ಇದಕ್ಕೆ ಸ್ಪಂದಿಸಿದ ಗೃಹ ಸಚಿವ ಡಾ.ಜಿ.ಪರಮೇಶ್ವರ್ ಡಿ.23 ರ ಬದಲಿಗೆ ಮುಂದಿನ ತಿಂಗಳು ಜ. 23 ನೇಮಕಾತಿ ಮರು ಪರೀಕ್ಷೆಯನ್ನು ನಡೆಸಲು ಒಪ್ಪಿದರು. ರಾಜ್ಯದಲ್ಲಿ ಸುಮಾರು 1500 ಹೆಚ್ಚು ಪಿ.ಎಸ್.ಐ ಹುದ್ದೆಗಳು ಖಾಲಿಯಿವೆ. ಇದರಿಂದ ಕಾನೂನು ಸುವ್ಯವಸ್ಥೆ ಕಾಪಾಡುವಲ್ಲಿ ತೊಂದರೆ ಉಂಟಾಗುತ್ತಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯನವರ ಅನುಮತಿ ಪಡೆದು 450 ಎ.ಎಸ್.ಐ ಗಳಿಗೆ ನಿಯಮ 32ರ ಅಡಿ ಪಿ.ಎಸ್.ಐ ಪ್ರಭಾರೆಯನ್ನು ನೀಡಲಾಗಿದೆ ಎಂದರು.

ಪರೀಕ್ಷಾ ಅಕ್ರಮವನ್ನು ಸರ್ಕಾರ ಗಂಭೀರವಾಗಿ ಪರಿಗಣಿಸಿದೆ. ನೇಮಕಾತಿ ಹಗರಣದಲ್ಲಿ ಯಾರೇ ಭಾಗಿಯಾಗಿದ್ದರು ರಕ್ಷಿಸುವ ಪ್ರಮೇಯವಿಲ್ಲ. ವಿರೋಧ ಪಕ್ಷದ ಸದಸ್ಯರ ಮನದ ಇಚ್ಛೆಯಂತೆ ಅಕ್ರಮದಲ್ಲಿ ಭಾಗಿಯಾದವರಿಗೆ ತಕ್ಕ ಶಿಕ್ಷೆ ಆಗಲಿದೆ ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯಿತ್ ರಾಜ್ ಸಚಿವ ಪ್ರಿಯಾಂಕ್ ಖರ್ಗೆ ಶಾಸಕ ಬಸವನಗೌಡ ಯತ್ನಾಳ್ ಅವರ ಪ್ರಶ್ನೆಗೆ ಉತ್ತರಿಸಿದರು.



## ಭವಾನಿ ರೇವಣ್ಣ ಕಾರಿಗೆ ಬೈಕ್ ಡಿಕ್ಕಿ

ಹಾಸನ: ಮಾಜಿ ಸಚಿವ ಹೆಚ್‌ಡಿ ರೇವಣ್ಣ ಪತ್ನಿ ಹಾಗೂ ಜಿಪಂ ಮಾಜಿ ಸದಸ್ಯೆ ಭವಾನಿ ರೇವಣ್ಣ ಅವರ ಕಾರಿಗೆ ಬೈಕ್ ಡಿಕ್ಕಿ ಹೊಡೆದಿರುವ ಘಟನೆ ಮೈಸೂರು ಜಿಲ್ಲೆಯ ಸಾಲಿಗ್ರಾಮ ಬಳಿ ನಡೆದಿದೆ.

ಭವಾನಿ ರೇವಣ್ಣ ಅವರು ಪ್ರಯಾಣಿಸುತ್ತಿದ್ದ ಕಾರಿಗೆ ಬೈಕ್‌ವೊಂದು ಡಿಕ್ಕಿ ಹೊಡೆದಿದೆ. ಇದರಿಂದ ರೊಚ್ಚಿಗೆದ್ದ ಭವಾನಿ ರೇವಣ್ಣ ಅವರು ಬೈಕ್ ಸವಾರನಿಗೆ ಹಿಗ್ಗಾಮುಗ್ಗ ಜಾಡಿಸಿದ್ದಾರೆ. ಕಾರಿನ ಬೋರ್ಡ್‌ಗೆ ಡ್ಯಾಮೇಜ್ ಆಗಿದೆ ಎಂದು ಕ್ಲಾಸ್ ತೆಗೆದುಕೊಂಡಿರುವ ಘಟನೆ ನಡೆದಿದೆ. ಈ ದೃಶ್ಯದ ವೀಡಿಯೋ ವೈರಲ್ ಆಗಿದೆ. ರಸ್ತೆಗಿಳಿದು ಬೈಕ್ ಸವಾರನನ್ನು ಭವಾನಿ ರೇವಣ್ಣ ತರಾಟೆಗೆ ತೆಗೆದುಕೊಂಡಿದ್ದಾರೆ. ಅಷ್ಟು ದೂರದಿಂದ ಟೈರ್ ಉಜ್ಜಿಕೊಂಡು ಕಂಟ್ರೋಲ್ ಮಾಡಿದ್ದೀವಿ. ಬೈಕ್ ಓಡ್ಸೋಕೆ ಇತಿಮಿತಿ ಇಲ್ವಾ? ನಿನಗೆ ರೈಟ್ ಸೈಡ್ ಬರೋಕೆ ರೂಲ್ಸ್ ಎಲ್ಲಿದೆ? ಲೆಫ್ಟ್ ಸೈಡ್ ಬರಬೇಕು ನೀನು ಎಂದು ಕ್ಲಾಸ್ ತೆಗೆದುಕೊಂಡಿದ್ದಾರೆ.

## 'ಪೋಡಿ' ಕಂದಾಯ ಇಲಾಖೆಯ ಟಾಪ್ 3 ಸಮಸ್ಯೆಗಳಲ್ಲೊಂದು; ಜನರಿಗೆ ತೊಂದರೆ ಆಗ್ತಾ ಇರುವುದು ಸತ್ಯ ಪೋಡಿ ಸಮಸ್ಯೆ ಇತ್ಯರ್ಥಕ್ಕೆ 2 ತಿಂಗಳಲ್ಲಿ ಯೋಜನೆ: ಕಂದಾಯ ಸಚಿವ ಕೃಷ್ಣಭೈರೇಗೌಡ



ಬೆಳಗಾವಿ: ಸುವರ್ಣ ಸೌಧ: ಪೋಡಿ ಎಂಬುದು ಕಂದಾಯ ಇಲಾಖೆಯ ಟಾಪ್ 3 ಸವ ುಸ್ಯೆಗಳಲ್ಲೊಂದಾಗಿದ್ದು,ಇದರಿಂ ದ ಜನರಿಗೆ ತೊಂದರೆ ಆಗ್ತಾ ಇರುವುದು ಗಮನಕ್ಕಿದೆ; ಇತ್ತೀಚೆಗೆ ಮುಖ್ಯಮಂತ್ರಿಗಳು ಜನತಾದರ್ಶನ ನಡೆಸಿದ ಸಂದರ್ಭದಲ್ಲಿಯೂ ಇದೇ ತರಹದ ದೂರುಗಳು ಬಂದಿದೆ. ಇದನ್ನು ವ್ಯವಸ್ಥಿತವಾಗಿ ಬಗೆಹರಿಸುವ ನಿಟ್ಟಿನಲ್ಲಿ 2 ತಿಂಗಳಲ್ಲಿ ಒಂದು ಯೋಜನೆ ರೂಪಿಸಲಾಗುವುದು ಎಂದು ಕಂದಾಯ ಸಚಿವ ಕೃಷ್ಣಭೈರೇಗೌಡ ಅವರು ಹೇಳಿದರು.

ವಿಧಾನಸಭೆಯಲ್ಲಿ ಸದಸ್ಯ ಅಶ್ವತ್‌ನಾರಾಯಣ ಅವರ ಚುಕ್ಕೆಗುರುತಿನ ಪ್ರಶ್ನೆಗೆ ಉತ್ತರಿಸಿದರು. ಪೋಡಿ ಸಮಸ್ಯೆಯನ್ನು ಅರ್ಥಮಾಡಿಕೊಂಡೇ ಈ ಹಿಂದಿನ ನಮ್ಮ ಸರಕಾರ 2015ರಲ್ಲಿ ಪೋಡಿ ಮುಕ್ತ ಯೋಜನೆ ಅನುಷ್ಠಾನಕ್ಕೆ ತಂದಿತ್ತು; ಅದರ ಮೂಲಕ ಆಯ್ದ ಗ್ರಾಮಗಳ ಬಹುಮಾಲೀಕತ್ವದ ಖಾಸಗಿ/ಹಿಡುವಳಿ ಜಮೀನುಗಳನ್ನು ಅಳತೆಗೆ ಒಳಪಡಿಸಿ ಏಕಮಾಲೀಕತ್ವಕ್ಕೆ ಪರಿವರ್ತಿಸುವ ಉದ್ದೇಶದಿಂದ ರಾಜ್ಯದ ನಗರ ಪ್ರದೇಶದ ವಿಧಾನಸಭಾ ಕ್ಷೇತ್ರಗಳನ್ನು ಹೊರತುಪಡಿಸಿ ಉಳಿದ 174 ವಿಧಾನಸಭಾ ಕ್ಷೇತ್ರಗಳಲ್ಲಿ ಪ್ರಾರಂಭಿಸಲಾಗಿದೆ. ಪೋಡಿ ಮುಕ್ತ ಅಭಿಯಾನದ ಅಡಿ 16630 ಗ್ರಾಮಗಳನ್ನು ತೆಗೆದುಕೊಳ್ಳಲಾಗಿದೆ. ಇನ್ನೂ 14 ಸಾವಿರ ಗ್ರಾಮಗಳು ಉಳಿದಿವೆ ಎಂದರು. ಕಳೆದ 4 ವರ್ಷಗಳಿಂದ ಈ ಯೋಜನೆ ಅತ್ಯಂತ ಕುಂಠಿತವಾಗಿ ಸಾಗುತ್ತಿದೆ ಎಂದರು.

ಪೋಡಿ ಸಮಸ್ಯೆಗಳಲ್ಲಿ ಶೇ.70ರಷ್ಟು ಬಗೆಹರಿಸಬಹುದು;ಇನ್ನೂ 30ರಷ್ಟು ಆಮೇಲೆ ಮಾಡೋಣ ಅಂತ ನಿರ್ಧರಿಸಿದ್ದು 2 ತಿಂಗಳಲ್ಲಿ ಇದನ್ನು ಯಾವ ರೀತಿ ಮಾಡಬೇಕು ಎನ್ನುವುದಕ್ಕೆ ಸ್ಪಷ್ಟವಾಗಿ ಪ್ಲಾನ್ ಹಾಕಿಕೊಳ್ಳಲಾಗುವುದು. 3ರಿಂದ 4 ವರ್ಷಗಳ ಕಾಲಮಿತಿ ಹಾಕಿಕೊಂಡು ಈ ಸಮಸ್ಯೆ ಬಗೆಹರಿಸಲು ಪ್ರಾಮಾಣಿಕ ಪ್ರಯತ್ನ ಮಾಡಲಾಗುವುದು ಎಂದರು.

*1800 ಪರವಾನಿಗೆ ಭೂಮಾಪಕರ ನೇಮಕ: ಪೋಡಿ ಮುಕ್ತ ಅಭಿಯಾನ ಸಮರ್ಪಕವಾಗಿ ಅನುಷ್ಠಾನಗೊಳಿಸುವ ನಿಟ್ಟಿನಲ್ಲಿ ಸಿಬ್ಬಂದಿಗಳ ಕೊರತೆ ಇರುವುದು ಗಮನಕ್ಕಿದ್ದು, 1800 ಪರವಾನಿಗೆ ಭೂಮಾಪಕರನ್ನು ತೆಗೆದುಕೊಳ್ಳಲಾಗಿದೆ;ಈಗ ಅವರಿಗೆ ತರಬೇತಿ ನೀಡಲಾಗುತ್ತಿದ್ದು,ಜನವರಿಯಲ್ಲಿ ಅವರಿಗೆ ಈ ಕಾರ್ಯಗಳನ್ನು ವಹಿಸಲಾಗುವುದು ಎಂದು ಕಂದಾಯ ಸಚಿವ ಕೃಷ್ಣಭೈರೇಗೌಡ ಅವರು ಹೇಳಿದರು.

ಯಾವ್ಯಾವ ಜಿಲ್ಲೆಗಳಲ್ಲಿ ಎಷ್ಟೆಷ್ಟು ಪೋಡಿ ಬಾಕಿ ಇವೆ ಎಂಬುದರ ಆಧಾರದ ಮೇಲೆ ಪರವಾನಿಗೆ ಭೂಮಾಪಕರನ್ನು ಆಯಾ ಜಿಲ್ಲೆಗಳಿಗೆ ಹಂಚಿಕೆ ಮಾಡಲಾಗುವುದು ಎಂದು ತಿಳಿಸಿದ ಅವರು 364 ಭೂಮಾಪಕರು ಮತ್ತು 28 ಎಡಿಎಲ್‌ಆರ್‌ಗಳನ್ನು ನೇಮಕ ಪ್ರಕ್ರಿಯೆ ಆರಂಭಿಸಲಾಗಿದೆ ಎಂದರು.

## 2030 ರೊಳಗೆ ಅಪೌಷ್ಠಿಕತೆ ಗಣನೀಯ ಪ್ರಮಾಣದಲ್ಲಿ ನಿಯಂತ್ರಣ: ಸಚಿವ ದಿನೇಶ್ ಗುಂಡೂರಾವ್



ಬೆಳಗಾವಿ: ಸುವರ್ಣ ಸೌಧ: ಮಹಿಳೆಯರು ಮತ್ತು ಮಕ್ಕಳಲ್ಲಿರುವ ರಕ್ತಹೀನತೆ(ಅನೀಮಿಂಯಾ)ವನ್ನು 2030 ರೊಳಗೆ ಸಂಪೂರ್ಣವಾಗಿ ನಿವಾರಿಸಲಾಗುವುದು ಎಂದು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವ ದಿನೇಶ್ ಗುಂಡೂರಾವ್ ಹೇಳಿದರು.

ವಿಧಾನಪರಿಷತ್ತಿನ ಶೂನ್ಯ ವೇಳೆಯಲ್ಲಿ ಸದಸ್ಯ ನಾಗರಾಜ್ ಅವರು ವಿಷಯ ಪ್ರಸ್ತಾಪಿಸಿ, ರಕ್ತಹೀನತೆ ಮತ್ತು ಅಪೌಷ್ಠಿಕತೆಯಿಂದ ಮಹಿಳೆಯರು ಮತ್ತು ಮಕ್ಕಳು ಬಳಲುತ್ತಿರುವ ಸಮಸ್ಯೆಗಳ ಕುರಿತು ಪ್ರಸ್ತಾಪಿಸಿದ ವಿಷಯಕ್ಕೆ ಪ್ರತಿಕ್ರಿಯಿಸಿದ ಸಚಿವರು, ರಾಜ್ಯದಲ್ಲಿ ಅನೀಮಿಯಾದಿಂದ ಬಳಲುತ್ತಿರುವ ಮಹಿಳೆಯರು ಮತ್ತು ಹದಿಹರೆಯದವರ ಸಂಖ್ಯೆ ಸುಮಾರು 2 ಕೋಟಿ ಎಂದು ಗುರುತಿಸಲಾಗಿದೆ, ಇದರ ನಿವಾರಣೆಗೆ 185 ಕೋಟಿ ರೂ ವೆಚ್ಚದಲ್ಲಿ ಕಾರ್ಯಕ್ರಮ ರೂಪಿಸಲಾಗುತ್ತಿದ್ದು, 2030 ರ ವೇಳೆಗೆ ರಜ್ಯದಲ್ಲಿ ಈ ಪ್ರಮಾಣದಲ್ಲಿ ಗಣನೀಯವಾಗಿ ಕಡಿಮೆಗೊಳಿಸುವ ಗುರಿ ಹೊಂದಲಾಗಿದೆ ಎಂದರು.

ರಾಜ್ಯದಲ್ಲಿ ಇತ್ತೀಚೆಗೆ ಬೆಳಕಿಗೆ ಬಂದ ಭ್ರೂಣ ಹತ್ಯೆ ಕುರಿತಂತೆ ಸದಸ್ಯ ಯು.ಬಿ.ವೆಂಕಟೇಶ್ ಪ್ರಸ್ತಾಪಿಸಿದರು. ಈ ಪ್ರಕರಣವನ್ನು ಈಗಾಗಲೇ ಸಿಓಡಿ ತನಿಖೆಗೆ ಆದೇಶಿಸಿದ್ದು, ಇದರಲ್ಲಿ ಭಾಗಿಯಾದ ಎಲ್ಲರ ವಿರುದ್ಧ ಅತ್ಯಂತ ಕಠಿಣ ಕ್ರಮ ಕೈಗೊಳ್ಳಲಾಗುವುದು ಎಂದರು.

### ಬರಪೀಡಿತ ತಾಲೂಕುಗಳ ಪಟ್ಟಿಯಲ್ಲಿಲ್ಲ ಚಿಕ್ಕಮಗಳೂರು; ಮಾನದಂಡಗಳ ಮೌಲ್ಯಮಾಪನ: ಸಚಿವರ ಭರವಸೆ

ಬೆಳಗಾವಿ: ಸುವರ್ಣ ಸೌಧ: ಅರೆಮಲೆನಾಡು ಪ್ರದೇಶವಾಗಿರುವ ಚಿಕ್ಕಮಗಳೂರು ತಾಲೂಕು ಬರಪೀಡಿತ ತಾಲೂಕುಗಳ ಪಟ್ಟಿಯಿಲ್ಲ; ಮಲೆನಾಡು ಪ್ರದೇಶದಲ್ಲಿರುವ ಅನೇಕ ತಾಲೂಕುಗಳು ಬರಪೀಡಿತ ತಾಲೂಕುಗಳ ಪಟ್ಟಿಯಲ್ಲಿವೆ;ನಮ್ಮ ತಾಲೂಕಿನ ಜನರು,ರೈತ ಮುಖಂಡರು,ರೈತರು ನಮ್ಮನ್ನು ಪ್ರಶ್ನಿಸುತ್ತಿದ್ದಾರೆ ಎಂಬ ಸ್ಥಳೀಯ ಶಾಸಕ ತಮ್ಮಯ್ಯ ಎಚ್.ಡಿ ಅವರ ಪ್ರಶ್ನೆಗೆ ಉತ್ತರಿಸಿದ ಕಂದಾಯ ಸಚಿವ ಕೃಷ್ಣಭೈರೇಗೌಡ ಕೇಂದ್ರ ಸರಕಾರದ ನಿಗದಿಪಡಿಸಿದ ಮಾನದಂಡದಡಿ ಬರಪೀಡಿತ ತಾಲೂಕುಗಳನ್ನು ಘೋಷಿಸಲಾಗುತ್ತದೆ. ಅದರ ವ್ಯಾಪ್ತಿಯೊಳಗೆ ಈ ತಾಲೂಕು ಬರದಿರುವ ಕಾರಣ ಹೊರಗಿಡಲಾಗಿದೆ ಎಂದರು.

ಹಿಂಗಾರು ಬರ ತಾಲೂಕುಗಳ ಘೋಷಣೆ ಸಂದರ್ಭದಲ್ಲಿ ಪರಿಶೀಲಿಸಲಾಗುವುದು. ಸದಸ್ಯರ ಮನವಿಯನ್ನು ಪರಿಗಣಿಸಿ ಈಗಿರುವ ಮಾನದಂಡಗಳಡಿ ಮತ್ತೊಮ್ಮೆ ಪರಿಶೀಲನೆ ನಡೆಸಲಾಗುವುದು ಎಂದರು. ಬರ ಘೋಷಣೆಗೆ ಸಂಬಂಧಿಸಿದಂತೆ ಈಗಿರುವ ಮಾನದಂಡಗಳು ಸರಿಯಾಗಿಲ್ಲ;ಅವುಗಳು ಪರಿಷ್ಕೃತವಾಗಬೇಕು ಎಂದು ಕೇಂದ್ರ ಸರಕಾರಕ್ಕೆ ಮುಖ್ಯಮಂತ್ರಿಗಳು ಜೂನ್ ತಿಂಗಳಲ್ಲಿಯೇ ಪತ್ರ ಬರೆದಿದ್ದಾರೆ;ಇಂದಿಗೂ ಅಲ್ಲಿಂದ ಉತ್ತರ ಬಂದಿಲ್ಲ ಎಂದು ಅವರು ಸದನಕ್ಕೆ ಮಾಹಿತಿ ನೀಡಿದರು.

## ಅನುದಾನಿತ ಶಾಲಾ ಕಾಲೇಜುಗಳಲ್ಲಿನ ಹುದ್ದೆಗಳ ಭರ್ತಿಗೆ ಕ್ರಮ: ಸಚಿವ ಮಧು ಬಂಗಾರಪ್ಪ

ಬೆಳಗಾವಿ: ಸುವರ್ಣ ಸೌಧ: ರಾಜ್ಯದಲ್ಲಿ 2016 ಜನವರಿಯಿಂದ ಇದುವರೆಗೆ ಅನುದಾನಿತ ಪ್ರಾಥಮಿಕ, ಪ್ರೌಢ ಹಾಗೂ ಪದವಿ ಪೂರ್ವ ಕಾಲೇಜುಗಳಲ್ಲಿ ನಿವೃತ್ತಿ, ರಾಜೀನಾಮೆ ಇತರೆ ಕಾರಣಗಳಿಂದ ಖಾಲಿ ಇರುವ ಭೋದಕ ಮತ್ತು ಭೋದಕೇತರ ಹುದ್ದೆಗಳ ಭರ್ತಿಗೆ ಶೀಘ್ರದಲ್ಲಿ ಕ್ರಮ ಕೈಗೊಳ್ಳಲಾಗುವುದು ಎಂದು ಶಾಲಾ ಶಿಕ್ಷಣ ಮತ್ತು ಸಕ್ಷರತಾ ಸಚಿವ ಮಧು ಬಂಗಾರಪ್ಪ ಹೇಳಿದರು. ವಿಧಾನಪರಿಷತ್ ನಲ್ಲಿ ನಿಯಮ 330 ರಡಿ ಸದಸ್ಯರಾದ ಮಧು ಜಿ ಮಾದೇಗೌಡ, ಮರಿ ತಿಬ್ಬೇಗೌಡ, ಎಸ್. ಎಲ್. ಭೋಜೇಗೌಡ ಹಾಗೂ ಶಶಿಲ್ ಜಿ ನಮೋಶಿ ಅವರು ಮಂಡಿಸಿದ್ದ ವಿಷಯಕ್ಕೆ ಉತ್ತರಿಸಿ ಮಾತನಾಡಿದರು,

ರಾಜ್ಯದ ಖಾಸಗಿ ಅನುದಾನಿತ ಪ್ರೌಢಶಾಲೆಗಳಲ್ಲಿ 1 ನೇ ಜನವರಿ 2016 ರಿಂದ 31 ನೇ ಡಿಸೆಂಬರ್ 2020 ರ ವರೆಗೆ ನಿವೃತ್ತಿ, ಮರಣ, ರಾಜೀನಾಮೆ ಇನ್ನಿತರೆ ಕಾರಣಗಳಿಂದ ಖಾಲಿಯಾಗಿರುವ 4521 ಭೋಧಕ ಹುದ್ದೆಗಳನ್ನು ಹಾಗೂ ಪದವಿ ಪೂರ್ವ ಕಾಲೇಜುಗಳಲ್ಲಿ ಬಾಕಿ ಇರುವ 267 ಭೋಧಕ ಹುದ್ದೆಗಳನ್ನು ಭರ್ತಿ ಮಾಡಲು ಸಹಮತಿ ನೀಡುವಂತೆ ಕೋರಿ ಆರ್ಥಿಕ ಇಲಾಖೆಗೆ ಪ್ರಸ್ತಾವನೆ ಸಲ್ಲಿಸಲಾಗಿದೆ ಎಂದರು.

## ಬೆಳಗಾವಿ: ವಿಶೇಷ ಚೇತನ ಶಿಕ್ಷಕರಿಗೆ ವೇತನ ನೀಡುವಂತೆ ಒತ್ತಾಯ

ಬೆಳಗಾವಿ: ವಿವಿಧ ಬೇಡಿಕೆ ಈಡೇರಿಕೆಗೆ ಆಗ್ರಹಿಸಿ ಸೋಮವಾರ ಸುವರ್ಣ ಗಾಡ್9ನ ಬಳಿ ನಿರ್ಮಿಸಲಾದ ಟೆಂಟ್ ನಲ್ಲಿ ವಿಶೇಷಚೇತನರ ಶಾಲೆಗಳ ಶಿಕ್ಷಕರ ಹಾಗೂ ಶಿಕ್ಷಕೇತರರ ರಾಜ್ಯ ಘಟಕದ ಪದಾಧಿಕಾರಿಗಳು ಪ್ರತಿಭಟನೆ ನಡೆಸಿದರು.

ರಾಜ್ಯದಲ್ಲಿ, ಸರಕಾರಿ ಶಾಲೆಗಳು, 1982 ರ ಅನುದಾನ ನೀತಿಸಂಹಿತೆಯಲ್ಲಿ ನಡೆಯುತ್ತಿರುವ 34 ಶಾಲೆಗಳು, 2010–11 ರಲ್ಲಿ ಜಾರಿಗೊಳಿಸಿದ ಶಿತು ಕೇಂದ್ರಿಕೃತ ಯೋಜನೆಯಡಿ ಕಾರ್ಯನಿರ್ವಹಿಸುತ್ತಿರುವ 136 ಶಾಲೆಗಳಲ್ಲಿ ನಾವು ಕೆಲಸ ನಿರ್ವಹಿಸುತ್ತಿದ್ದೇವೆ ಎಂದು ಮನವಿಯಲ್ಲಿ ತಿಳಿದಿದ್ದಾರೆ.

ಸರಕಾರಿ ಮತ್ತು ಅನುದಾನ ನೀತಿ ಸಂಹಿತೆಯಡಿಯಲ್ಲಿ ನಡೆಯುತ್ತಿರುವ ಶಾಲೆಗಳಲ್ಲಿ ವಿಶೇಷ ತರಬೇತಿ ಪಡೆದ ಶಿಕ್ಷಕರೇ ಕಾರ್ಯನಿರ್ವಹಿಸುತ್ತಿದ್ದು ಅವರಿಗೆ ಸೇವಾ ಭದ್ರತೆ ವೇತನ ಕೊಡುತ್ತಿದ್ದು, ಶಿಶುಕೇಂದ್ರಿಕೃತ ಯೋಜನೆಯಡಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ವಿಶೇಷ ಶಾಲಾ ಶಿಕ್ಷಕರು, ಶಿಕ್ಷಕೇತರರಿಗೆ ಯಾವುದೇ ಭದ್ರತೆ ಇಲ್ಲ. ಜೀವನ ನಡೆಸಲು ಸಾಕಾಗುವಷ್ಟು ವೇತನವಿಲ್ಲ ಎಂದು ದೂರಿದರು.



ಕಳೆದ ದಶಕಗಳಿಂದಲೂ ಸೇವೆ ಸಲ್ಲಿಸುತ್ತಾ ಬಂದಿದ್ದರು ಸರಕಾರದ ಈ ತಾರತಮ್ಯ, ಕರ್ನಾಟಕ ರಾಜ್ಯದಲ್ಲಿ ವಿಶೇಷ ಶಾಲೆಗಳು ಸುಮಾರು 40 ರಿಂದ 45 ವರ್ಷಗಳಿಂದ ವಿಶೇಷ ಮಕ್ಕಳಿಗಾಗಿ ಸೇವೆ ಸಲ್ಲಿಸುತ್ತಾ ಬಂದಿರುತ್ತವೆ. ಶಾಲೆಗಳಿಗೆ ಬೇಕಾಗುವ ಮೂಲ ಸೌಕರ್ಯಗಳು, ಮಕ್ಕಳಿಗೆ ಬೇಕಾಗುವಂತಹ ಹೊಸ ಹೊಸ ಅವಿಸ್ತಾರವಾದ ಕಲಿಕಾ ಸಾಮಗ್ರಿಗಳು ತಂತ್ರಜ್ಞಾನ ಬಳಕೆಯ ಕಲಿಕಾ ಸೌಲಭ್ಯ ದೊರೆಯುತ್ತಿಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿದ್ದಾರೆ.

ಸರಕಾರದ ನಡೆಯಿಂದ ವಿಶೇಷ ಮಕ್ಕಳನ್ನು ಈ ದಿನಮಾನದಲ್ಲಿ ಸಮಾಜದ ಮುಖ್ಯವಾಹಿನಿಗೆ ತರುವುದು ತುಂಬಾ ಕಷ್ಟದ ಕೆಲಸವಾಗಿದೆ. ಅಲ್ಲದೇ ವಿಶೇಷ ವಿಶೇಷ ಶಾಲಾ ಶಿಕ್ಷಕರಾಗಲು ಹಿಂದೆ ಸರಿಯುತ್ತಿದ್ದಾರೆ. ಕಾರಣ ಇಲ್ಲಿ ಕೆಲಸ ಮಾಡುವವರಿಗೆ ಯಾವುದೇ ರೀತಿಯ ಭದ್ರತೆ ಇಲ್ಲ ಮತ್ತು ಇರುವ ಸಂಬಳದಲ್ಲಿ ಈ ಹೊತ್ತಿನ ದಿನಮಾನದ ಖರ್ಚು ನಿರ್ವಹಣೆ ಮಾಡುವುದು ಕಷ್ಟಕರವಾಗಿದೆ ಎಂದು ತಿಳಿಸಿದ್ದಾರೆ.

ಪ್ರತಿಭಟನೆಯಲ್ಲಿ ವಿಶೇಷಚೇತನರ ಶಾಲೆಗಳ ಶಿಕ್ಷಕರ ಹಾಗೂ ಶಿಕ್ಷಕೇತರರ ರಾಜ್ಯ ಘಟಕದ ಪದಾಧಿಕಾರಿಗಳು ಭಾಗವಹಿಸಿದ್ದರು.

ಈ ಸಂದರ್ಭದಲ್ಲಿ ಅಧ್ಯಕ್ಷರು ಲಿಂಗರಾಜ ತಳಬಾಳ, ಬಾಹುಬಲಿ ಸಂಗನ್ನವರ, ಎಚ್ ಎಸ್ ಜಾಗದಾರ, ಶಾಂತಾ ಜಾಧವ, ಶಿವು ಕಾಟೆ, ಪಂಕಜ ಕದಂ, ಬಸವರಾಜ ಕೊರೆನ್ನವರ, ಶಿಲ್ಪಾ, ರಿತಾ, ಸಂತೋಷ ದೇಶಪಾಂಡೆ, ಬಾಗವಾನ್, ಹಾಗೂ ಇತರರು ಇದ್ದರು.

## PUBLIC NOTICE

Be it known to the public at large that, my client Iranna Shivanand Kudachi of Gokak is intending to purchase the Property comprised in residential open plot No. 13,14,15 bears gram panchayat no 1014/1 swatin no 150400300400122905, measuring East West 12.192 Mtrs AND North-South 17.9832 Mtrs in all measuring 219.250000Sq Mtrs (as per Gram Panchayat Records) from out of R.S. No. 69 situated at new Vaibhav Nagar, Kangrali B.K Belagavi from MR SHOUKAT ALI S/O ARSHAD ALI SAYYED However If anybody has got any objection of title of whatsoever nature they shall bring it to the notice of the undersigned within 7 days from the date of this publication. If objections are not received within stipulated period the further transaction will be completed and thereafter no claims will be entertained.

Date: 04-12-2023
Place: Belagavi

SD/-
Shreekant s Patil
Advocate. plot no.199
Doordarshan nagar Belagavi
M no: 9448110925

# ವಿವಿಧ ಬೇಡಿಕೆ ಈಡೇರಿಕೆಗೆ ಆಗ್ರಹಿಸಿ ರೈತರಿಂದ ಪ್ರತಿಭಟನೆ; ರೈತರ ಸಮಸ್ಯೆಗಳಿಗೆ ಸಚಿವ ಎಚ್ .ಸಿ .ಮಹಾದೇವಪ್ಪ ಸ್ಪಂದನೆ


ಬೆಳಗಾವಿ: ವಿವಿಧ ಬೇಡಿಕೆ ಈಡೇರಿಕೆಗೆ ಆಗ್ರಹಿಸಿ ಕರ್ನಾಟಕ ರಾಜ್ಯ ರೈತ ಹಾಗೂ ಹಸಿರು ಸೇನೆಯ ಸಂಘದ ರಾಜ್ಯಾಧ್ಯಕ್ಷ ಕೋಡಿಹಳ್ಳಿ ಚಂದ್ರಶೇಖರ ನೇತೃತ್ವದಲ್ಲಿ ಸೋಮವಾರ ನೂರಾರು ಸಂಖ್ಯೆಯಲ್ಲಿ ರೈತರು ಸುವರ್ಣವಿಧಾನಸೌಧದ ಬಳಿ ಬೃಹತ್ ಪ್ರತಿಭಟನೆ ನಡೆಸಿದರು.

ಪ್ರತಿಭಟನೆಯಲ್ಲಿ ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ ಸಂಘದ ರಾಜ್ಯಾಧ್ಯಕ್ಷ ಕೋಡಿಹಳ್ಳಿ ಚಂದ್ರಶೇಖರ ಮಾತನಾಡಿ, ಸರಕಾರ ಬೆಳಗಾವಿಯಲ್ಲಿ ಚಳಿಗಾಲ ಅಧಿವೇಶನ ನಡೆಸುತ್ತಿದೆ. ಈ ಹಿಂದಿನ ಬಿಜೆಪಿ ಸರಕಾರದ ಅವಧಿಯಲ್ಲಿ ಕೃಷಿ ಕಾಯ್ದೆಯನ್ನು ಜಾರಿಗೆ ತಂದಿತ್ತು. ಆಗ ವಿಪಕ್ಷದಲ್ಲಿದ್ದ ಕಾಂಗ್ರೆಸ್ ನಮ್ಮ ಸರಕಾರ ರಾಜ್ಯದಲ್ಲಿ ಅಧಿಕಾರಕ್ಕೆ ಬಂದರೆ ಕೃಷಿ ಮಸೂದೆ ಕಾಯ್ದೆಯನ್ನು ಹಿಂಪಡೆಯುವುದಾಗಿ ಹೇಳಿ ಈಗ ರೈತರ ದಿಕ್ಕು ತಪ್ಪಿಸುವ ಹುನ್ನಾರ ನಡೆಸಿದ್ದಾರೆ.

ಪೊಲೀಸರ ಮೂಲಕ ನಮ್ಮನ್ನು ಬಂಧಿಸುವ ಹುನ್ನಾರ ನಡೆಸಿದರೆ ಯಾವುದೇ ಕಾರಣಕ್ಕೂ ಸುಮ್ಮನೆ ಇರುವುದಿಲ್ಲ ಎಂದು ಎಚ್ಚರಿಸಿದರು. ಕಾಂಗ್ರೆಸ್ ಸರಕಾರ ಬಿಜೆಪಿ ಸರಕಾರ ಜಾರಿಗೆ ತಂದ ಕೃಷಿ ಮಸೂದೆ ಕಾಯ್ದೆಯನ್ನು ಅಂಗೀಕಾರಗೊಳಿಸಲು ಕಾಂಗ್ರೆಸ್ ಸರಕಾರ ಸಹಕಾರ ಮಾಡುತ್ತಿದೆ ಎನ್ನುವ ಅನುಮಾನ ಕಾಡುತ್ತಿದೆ ಎಂದರು.

ಸಿಎಂ ಸಿದ್ದರಾಮಯ್ಯನವರು ಕೃಷಿಯಲ್ಲಿ ಹೆಚ್ಚಿನ ತೆರಿಗೆ ಸಂಗ್ರಹವಾಗುತ್ತಿದೆ ಎಂದುಕೊಂಡು ಈ ಕಾಯ್ದೆಯನ್ನು ಹಿಂಪಡೆಯಲು ಸಾಧ್ಯವಾಗುತ್ತಿಲ್ಲವೆ ಎಂದು ಪ್ರಶ್ನಿಸಿದರು.

ರಾಜ್ಯ ರೈತರಿಗೆ ಅನುಕೂಲವಾಗುವ ನಿಟ್ಟಿನಲ್ಲಿ ಸರಕಾರ ಹೈನುಗಾರಿಕೆಯ ಹಾಲಿನ ಉತ್ಪಾನದಲ್ಲಿ 2 ರೂ. ಪ್ರೋತ್ಸಾಹ ಧನ ಘೋಷಣೆ ಮಾಡಿ, ಜಾನುವಾರುಗಳ ಹಿಂಡಿ ಖರೀದಿಯಲ್ಲಿ ನಾಲ್ಕು ರೂ. ಹೆಚ್ಚಳ ಮಾಡಿದ್ದಾರೆ. ರೈತರು ಬದುಕಬೇಕೋ ಬೇಡವೋ ಒಂದು ಕಡೆ ಕೊಟ್ಟು ಇನ್ನೊಂದು ಕಡೆ ಕಿತ್ತುಕೊಳ್ಳುವ ಪರಿಸ್ಥಿತಿ ಕಾಂಗ್ರೆಸ್ ಸರಕಾರ ಮಾಡುತ್ತಿದೆ ಎಂದು ಆಪಾದಿಸಿದರು.



ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದು ಆರು ತಿಂಗಳೇ ಉರುಳಿದೆ. ದುರಂತ ಎಂದರೆ ಚುನಾವಣೆ ವೇಳೆ ಕೊಟ್ಟ ಮಾತಿನಂತೆ ನಡೆಯದಿರುವ ಸರ್ಕಾರದ ನಡೆ ಖಂಡನೀಯ ಎಂದರು. ಸಿಎಂ ಸಿದ್ದರಾಮಯ್ಯ ನೇತೃತ್ವದ ಕಾಂಗ್ರೆಸ್ ಸರ್ಕಾರ ರೈತರನ್ನು ಸಂಪೂರ್ಣವಾಗಿ ಕಡೆಗಣಿಸಿದೆ. ರಾಜ್ಯದಲ್ಲಿ ಬರಗಾಲ ತಾಂಡವವಾಡುತ್ತಿದೆ. ಈ ಸಮಯದಲ್ಲಿ ರೈತರ ನೆರವಿಗೆ ಧಾವಿಸಬೇಕಾದ ಸರ್ಕಾರ ರೈತರನ್ನು ನಿರ್ಲಕ್ಷ್ಯ ಮಾಡಿದೆ ಎಂದ ಅವರು, ಬೆಳೆವಿಮೆ ಕೊಡಿಸುವ ದಿಕ್ಕಿನಲ್ಲಿ ಯಾವುದೇ ಕಾರ್ಯಕ್ರಮ ನೀಡಿಲ್ಲ. ಬೆಳೆ ರಕ್ಷಣೆ ಯೋಜನೆಗಳಿಲ್ಲ. ಆದರೆ, ಪಂಚರಾಜ್ಯಗಳ ಚುನಾವಣೆ ಇವರಿಗೆ ಮುಖ್ಯವಾಗಿದೆ ಎಂದು ಹರಿಹಾಯ್ದರು.

**ಕೃಷಿ ಕಾಯ್ದೆ ವಾಪಸ್ ಪಡೆಯಲಿ:** ಬಿಜೆಪಿ ಸರ್ಕಾರ ಜಾರಿಗೆ ತಂದಿದ್ದ ಕೃಷಿ ಕಾಯ್ದೆಗಳನ್ನು ರದ್ದು ಮಾಡುವುದಾಗಿ ಹೇಳಿ, ಈ ವೇಳೆ, ಅಂದು ವಿಪಕ್ಷದಲ್ಲಿದ್ದ ಕಾಂಗ್ರೆಸ್ ಪಕ್ಷವರು ರೈತರ ಜೊತೆ ಹೋರಾಟಕ್ಕೆ ಬಂದು ಬೆಂಬಲ ನೀಡಿದ್ದರು. ಕಾಯ್ದೆಯಿಂದ ರೈತರಿಗೆ ಅನ್ಯಾಯವಾಗಲಿದೆ ಎಂದಿದ್ದರು. ಇದೀಗ ಕಾಂಗ್ರೆಸ್ ಆಡಳಿತಕ್ಕೆ ಬಂದಿದೆ. ಆದರೆ, ರೈತರಿಗೆ ನೆರವಾಗುವ ರೀತಿ ನಡೆದುಕೊಳ್ಳುತ್ತಿಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿದರು.

**ಬೇಡಿಕೆಗಳು:** ಕೃಷಿ ಕಾಯ್ದೆ ವಾಪಸ್ ಪಡೆಯಬೇಕು, ಬರಗಾಲದ ತುರ್ತು ಕಾರ್ಯಕ್ರಮಗಳು ಜಾರಿಗೆ ತರಬೇಕು. ಸೆಪ್ಟೆಂಬರ್ 22ರ ವಿದ್ಯುತ್ ಕಾಯ್ದೆ ವಾಪಸ್ ಪಡೆಯಬೇಕು. ಕಬ್ಬಿಗೆ ಎಪಿಆರ್ಪಿ ಜೊತೆ ಎಸ್ಎಪಿ ನೀಡಬೇಕು.

ರಾಜ್ಯದ ಕಬ್ಬಿನ ಇಳುವರಿಗೆ ಒಂದು ಕಾರ್ಖಾನೆಯಲ್ಲಿ ಒಂದೊಂದು ಧಾರಣೆ ನಿಲ್ಲಿಸಬೇಕು. ಬಗರ್ ಹುಕುಂ ಸಾಗುವಳಿ ತಕ್ಷಣವೇ ಜಾರಿ ಮಾಡಬೇಕು. ಮಹದಾಯಿ ಹಾಗೂ ಮೇಕೆದಾಟು ಕಾರ್ಯವನ್ನು ಶೀಘ್ರವೇ ಕೈಗೊಳ್ಳಬೇಕು. ರೈತರ ಕೃಷಿ ಪಂಪ್ ಸೆಟ್ಗಳಿಗೆ ಅಕ್ರಮ ಸಕ್ರಮದಡಿ ನೀಡುತ್ತಿದ್ದ ಟ್ರಾನ್ಸ್ ಫಾರಂ, ಕಂಬ, ವೈರ್ ಇತರೆ ಉಪಕರಣಗಳು ನೀಡುವುದನ್ನು ಸರ್ಕಾರ ರದ್ದುಗೊಳಿಸಿದೆ. ಈ ಎಲ್ಲ ಬೇಡಿಕೆಗಳನ್ನು ಈಡೇರಿಸುವಂತೆ ಒತ್ತಾಯಿಸಿದರು.

**ಪ್ರತಿಭಟನಾ ಸ್ಥಳಕ್ಕೆ ಸಚಿವ ಎಚ್.ಸಿ .ಮಹಾದೇವಪ್ಪ ಭೇಟಿ:** ನೂರಾರು ಸಂಖ್ಯೆಯಲ್ಲಿ ರೈತರು ನಡೆಸುತ್ತಿದ್ದ ಪ್ರತಿಭಟನಾ ಸ್ಥಳಕ್ಕೆ ಸಚಿವ ಎಚ್ .ಸಿ .ಮಹಾದೇವಪ್ಪ ಭೇಟಿ ನೀಡಿದರು. ಈ ವೇಳೆ ರೈತ ಮುಖಂಡರು ರೈತರಿಗಾಗುವ ಅನ್ಯಾಯ ಹಾಗೂ ವಿವಿಧ ಬೇಡಿಕೆ ಈಡೇರಿಸುವಂತೆ ಸಚಿವರಿಗೆ ಮನವಿ ಮಾಡಿಕೊಂಡರು. ಈ ವೇಳೆ ಸಚಿವ ಎಚ್ .ಸಿ .ಮಹಾದೇವಪ್ಪ ಮಾತನಾಡಿ, ರೈತರಿಗೆ ಮಾರಕವಾಗಿರುವ ಯೋಜನೆಗಳನ್ನು ಸಿಎಂ ಸಿದ್ದರಾಮಯ್ಯನವರ ಗಮನಕ್ಕೆ ತರಲಾಗುವುದು. ರೈತರ ಬೇಡಿಕೆಯಲ್ಲಿ ಸರ್ಕಾರದಿಂದ ಯಾವುದೇ ಸರಿಪಡಿಸಬೇಕೆಂದರ ಬಗ್ಗೆ ಸಾಧಕ–ಭಾದಕಗಳ ಪರೀಶಿಲನೆ ನಡೆಸಿ, ಅನೂಕುಲ ಮಾಡಿಕೊಡಲಾವುದು ಎಂದು ಪ್ರತಿಭಟನಾ ಸ್ಥಳದಲ್ಲೆ ಜಮಾವನೆಗೊಂಡ ರೈತರಿಗೆ ಭರವಸೆ ನೀಡಿದರು.

# ಬೆಳಗಾವಿ: ವಕೀಲನ ಮೇಲೆ ಹಲ್ಲೆ ಖಂಡಿಸಿ ಬೃಹತ್ ಪ್ರತಿಭಟನೆ

ಬೆಳಗಾವಿ: ಚಿಕ್ಕಮಗಳೂರಿನ ವಕೀಲ ಪ್ರೀತಮ್ ಎಂಬವರ ಮೇಲೆ ಪೊಲೀಸರು ನಡೆಸಿದ್ದಾರೆ ಎನ್ನಲಾದ ಮಾರಣಾಂತಿಕ ಹಲ್ಲೆ ಖಂಡಿಸಿ ಬೆಳಗಾವಿಯ ನ್ಯಾಯವಾದಿಗಳು ನಗರದ ರಾಣಿ ಚನ್ನಮ್ಮ ವೃತ್ತದಲ್ಲಿ ಪ್ರತಿಭಟನೆ ನಡೆಸಿದರು.

ಚನ್ನಮ್ಮನ ವೃತ್ತದ ಬಳಿ ನೂರಾರು ಸಂಖ್ಯೆಯಲ್ಲಿ ಆಗಮಿಸಿದ ವಕೀಲರು ಮಾನವ ಸರಪಳಿ ನಿರ್ಮಿಸಿ 1 ಗಂಟೆಗಳ ಕಾಲ ರಸ್ತೆ ತಡೆದು ನಡೆಸಿ ಪೊಲೀಸರ ಹಾಗೂ ಸರ್ಕಾರದ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದರು.

ಪ್ರತಿಭಟನೆಯಲ್ಲಿ ನ್ಯಾಯವಾದಿಗಳು ಮಾತನಾಡಿ, ಯುವ ವಕೀಲರ ಮೇಲೆ ನಡೆದ ಹಲ್ಲೆ ಖಂಡನೀಯ, ವಕೀಲರು ಸಮಾಜದ ಅಭಿರಕ್ಷಕರು, ಇವರನ್ನೇ ಪೊಲೀಸ್ ಇಲಾಖೆಯವರು ಹೀಗೆ ನಡೆಸಿಕೊಂಡರೆ, ಇನ್ನು ಸಾಮಾನ್ಯ ಜನರ ಗತಿ ಏನು ಎಂದು ಪ್ರಶ್ನಿಸಿದರು. ಪ್ರಕರಣ ದಾಖಲಾದರೂ ಕೂಡ ಆರೋಪಿಗಳನ್ನು ಬಂಧಿಸದೇ ಇರುವುದು ಸರಿಯಲ್ಲ ಎಂದರು.

ಘಟನೆಯ ಗಂಭೀರತೆ ಅರಿತ ರಾಜ್ಯ ಸರ್ಕಾರ ಆರೋಪಿಗಳನ್ನು ಸೇವೆಯಿಂದ ಅಮಾನತು ಮಾಡಿದೆ. ಆದರೆ ಇನ್ನೂ ಕೂಡ ಅರೋಪಿಗಳ ಬಂಧನವಾಗಿಲ್ಲ, ತಕ್ಷಣ



ತಪ್ಪಿತಸ್ಥರನ್ನು ಬಂಧಿಸಿ ಕಾನೂನು ಕ್ರಮ ಕೈಗೊಳ್ಳಬೇಕು ಎನ್ನುವುದು ರಾಜ್ಯದ ವಕೀಲರ ಆಗ್ರಹವಾಗಿದೆ ಎಂದರು.

ಶೀಘ್ರವೇ ಸರ್ಕಾರ ವಕೀಲರಿಗಾಗಿ ವಕೀಲರ ರಕ್ಷಣಾ ಕಾಯಿದೆ ಜಾರಿಗೆ ತರಬೇಕು. ಅಲ್ಲದೆ ಚಿಕ್ಕಮಗಳೂರು ನಗರ ಪೊಲೀಸರು ಕ್ಷುಲ್ಲಕ ಕಾರಣಕ್ಕೆ ವಕೀಲನ ಮೇಲೆ ಮನಬಂದಂತೆ ಹಲ್ಲೆ ನಡೆಸಿರುವ ಕ್ರಮ ಸರಿಯಲ್ಲ. ಆದ್ದರಿಂದ ಹಲ್ಲೆ ನಡೆಸಿದ ಪೊಲೀಸರ ವಿರುದ್ಧ ಕಾನೂನು ಕ್ರಮಕೈಗೊಳ್ಳಬೇಕು ಎಂದು ಪ್ರತಿಭಟನಾಕಾರರು ಒತ್ತಾಯಿಸಿದರು.

ಈ ಸಂದರ್ಭದಲ್ಲಿ ನ್ಯಾಯವಾದಿಗಳಾದ ಸುರೇಂದ್ರ ಉಗಾರೆ, ಆರ್.ಪಿ. ಪಾಟೀಲ, ಅನಂತ ಮಾಂಜ್ರೆಕರ , ಬಾಲಕೃಷ್ಣ ಕಾಂಬಳೆ, ವಿನೋದ ಪಾಟೀಲ್, ಹೆಗ್ಗನ್ನವರ, ಮಲ್ಲಾಪೂರೆ, ಸುಮೀತ, ಮಂಗಳಾ ಹಿರೇಮಠ, ರಮೇಶ ದೇಶಪಾಂಡೆ, ಪ್ರಶಾಂತ ಪಾಟೀಲ್, ಸಚೀನ ಶಿವನ್ನವರ, ದನ್ಯಕುಮಾರ ಪಾಟೀಲ್ ಹಾಗೂ ಪೂಜಾ ಸವದತ್ತಿ ಸೇರಿದಂತೆ ಇನ್ನಿತರರು ನ್ಯಾಯವಾದಿಗಳು ಉಪಸ್ಥಿತರಿದ್ದರು.

**ಟ್ರಾಫಿಕ್ ಸಮಸ್ಯೆಗೆ ಜನರ ಆಕ್ರೋಶ:** ಬೆಳಗಾವಿಯಲ್ಲಿ ಚಳಿಗಾಲದ ಅಧಿವೇಶನದ ನಡೆಯುತ್ತಿರುವುದರಿಂದ ಸರಕಾರದ ಸಚಿವರು, ವಿಪಕ್ಷ ನಾಯಕರು ಹಾಗೂ ಕಾಂಗ್ರೆಸ್, ಬಿಜೆಪಿ ರಾಜ್ಯಾಧ್ಯಕ್ಷರು ತೆರಳು ಮಾರ್ಗದಲ್ಲಿ ಝೀರೋ ಟ್ರಾಫಿಕ್ ವ್ಯವಸ್ಥೆಯಿಂದ ಹಿಡಿಶಾಪ ಹಾಕಿದ್ದ ಜನರಿಗೆ ವಕೀಲರ ಪ್ರತಿಭಟನೆಯಿಂದಲೂ ಚನ್ನಮ್ಮ ವೃತ್ತದಲ್ಲಿ ಕಿರಿಕಿರಿಯಾಯಿತು.

ಕಾನೂನು ಪಾಠ ಹೇಳುವ ವಕೀಲರೇ ಸಾರ್ವಜನಿಕರ ಎದುರು ಈ ರೀತಿ ನಡೆದುಕೊಳ್ಳುವುದು ಎಷ್ಟು ಸರಿ ಎಂದು ಸಾರ್ವಜನಿಕರು ವಕೀಲರ ನಡೆಗೆ ಆಕ್ರೋಶ ವ್ಯಕ್ತಪಡಿಸಿದರು. ಅಲ್ಲಲ್ಲಿ ದ್ವಿಚಕ್ರ ವಾಹನಕಾರು ಹಾಗೂ ಸಾರ್ವಜನಿಕರ ಜೊತೆ ವಕೀಲರ ವಾಗ್ವಾದವು ನಡೆದವು.

# ಕೈಗಾರಿಕಾ ವಸ್ತು ಪ್ರದರ್ಶನ ಹಾಗೂ ಫಲ ಪುಷ್ಪ ಪ್ರದರ್ಶನ

ಬೆಳಗಾವಿ: ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಗ್ರಾಮೀಣ ಮತ್ತು ಸಣ್ಣ ಉದ್ಯಮ ಇಲಾಖೆ ಮತ್ತು ತೋಟಗಾರಿಕೆ ಇಲಾಖೆ ಬೆಳಗಾವಿ ರವರ ಸಂಯುಕ್ತ ಆಶ್ರಯದಲ್ಲಿ 2023–24 ನೇ ಸಾಲಿನ ಕೈಗಾರಿಕಾ ವಸ್ತು ಪ್ರದರ್ಶನವನ್ನು ಡಿ.08 ರಿಂದ ಡಿ.10 2023 ರ ವರೆಗೆ ನಗರದ ಹ್ಯೂಮ್ ಪಾರ್ಕ, ಕ್ಲಬ್ ರೋಡ ಇಲ್ಲಿ ವಿಜೃಂಭಣೆಯಿಂದ ಆಯೋಜನೆ ಮಾಡಲಾಗಿದೆ.

ಸಣ್ಣ ಕೈಗಾರಿಕೆ ಹಾಗೂ ಸಾರ್ವಜನಿಕ ಉದ್ಯಮೆ ಸಚಿವರಾದ ಶರಣಬಸಪ್ಪ ದರ್ಶನಾಪೂರ ಅವರು ಕೈಗಾರಿಕಾ ವಸ್ತು ಪ್ರದರ್ಶನ ಉದ್ಘಾಟಿಸಲಿದ್ದಾರೆ. ತೋಟಗಾರಿಕೆ ಹಾಗೂ ಗಣಿ ಮತ್ತು ಭೂ ವಿಜ್ಞಾನ ಸಚಿವರಾದ ಎಸ್. ಎಸ್. ಮಲ್ಲಿಕಾರ್ಜುನ ಅವರು ಫಲ–ಪುಷ್ಪ ಪ್ರದರ್ಶನದ ಉದ್ಘಾಟಿಸಲಿದ್ದಾರೆ.


ಲೋಕೋಪಯೋಗಿ ಸಚಿವರಾದ ಸತೀಶ ಲ. ಜಾರಕಿಹೊಳಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲಿಕರಣ ಸಚಿವರಾದ ಲಕ್ಷ್ಮೀ ಆರ್. ಹೆಬ್ಬಾಳಕರ ಆವರು ಘಣ ಉಪಸಿತರಿರಲಿದ್ದಾರೆ. ಶಾಸಕರಾದ ಆಸೀಫ್ (ರಾಜು) ಸೇಠ್ ಅವರು ಅಧ್ಯಕ್ಷತೆ ವಹಿಸಲಿದ್ದಾರೆ.

ಕೈಗಾರಿಕಾ ವಸ್ತು ಪ್ರದರ್ಶನದಲ್ಲಿ ಜಿಲ್ಲೆಯಲ್ಲಿ ತಯಾರಿಸಲಾಗುವ ಗೃಹ ಕೈಗಾರಿಕೆ ಹಾಗೂ ಕರಕುಶಲ ವಸ್ತುಗಳು, ಕೈಮಗ್ಗದ ವಸ್ತ್ರಗಳು, ಖಾದಿ ಗ್ರಾಮೋದ್ಯೋಗ ಮತ್ತು ಇನ್ನಿತರ ವಸ್ತುಗಳ ಪ್ರದರ್ಶನ ಹಾಗೂ ಮಾರಾಟ ಮೇಳ ಮತ್ತು ಫಲ–ಪುಷ್ಪ ಪ್ರದರ್ಶನ ಏರ್ಪಡಿಸಲಾಗಿದೆ.

ಶಾಲಾ ಮಕ್ಕಳ ಸಾಂಸ್ಕೃತಿಕ ಕಾರ್ಯಕ್ರಮ, ಮಕ್ಕಳಿಗೆ ಗ್ರಾಮೀಣ ಕ್ರೀಡೆ ಹಾಗೂ ತರಬೇತಿ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ಸಾರ್ವಜನಿಕರಿಗೆ ವೀಕ್ಷಿಸಲು ಉಚಿತ ಅವಕಾಶ ಕಲ್ಪಿಸಲಾಗಿದೆ. ಸಾರ್ವಜನಿಕರು ಸದರಿ ಕಾರ್ಯಕ್ರಮದ ಸದುಪಯೋಗ ಪಡಿಸಿಕೊಳ್ಳಬಹುದಾಗಿದೆ.

ಮಳಿಗೆಗಾಗಿ ಅರ್ಜಿ ಸಲ್ಲಿಸಲು ಇಚ್ಛಿಸುವವರು ಮೋಬೈಲ ಸಂಖ್ಯೆ 9448989942/9448866919 ಗೆ ಸಂರ್ಕಿಸಬಹುದು ಎಂದು ಜಿಲ್ಲಾ ಕೈಗಾರಿಕಾ ಕೇಂದ್ರದ ಉಪ ನಿರ್ದೇಶಕರು (ಖಾಗ್ರಾ) ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# 8 ಬಾರಿ ಮೈಸೂರು ದಸರಾ ಅಂಬಾರಿ ಹೊತ್ತಿದ್ದ ಅರ್ಜುನ ಸಾವು: ಒಂಟಿಸಲಗದ ಜೊತೆ ಕಾದಾಡಿ ಪ್ರಾಣಬಿಟ್ಟ ಆನೆ



ಹಾಸನ: ವಿಶ್ವವಿಖ್ಯಾತ ಮೈಸೂರು ದಸರಾದಲ್ಲಿ ಬರೋಬ್ಬರಿ 8 ಬಾರಿ ಅಂಬಾರಿ ಹೊತ್ತಿದ್ದ ಅರ್ಜುನ ಆನೆ ಸಾವಿಗೀಡಾಗಿದೆ. ರೆಡಿಯೋ ಕಾಲರ್ ಅಳವಡಿಕೆ ಕಾರ್ಯಾಚರಣೆ ವೇಳೆ, ಒಂಟಿ ಸಲಗವೊಂದು ಹೊಟ್ಟೆಗೆ ತಿವಿದಿದ್ದರಿಂದ ಸಾಕಾನೆ ಅರ್ಜುನ ಮೃತಪಟ್ಟಿದೆ.

ಹಾಸನ ಜಿಲ್ಲೆ ಸಕಲೇಶಪುರ ತಾಲ್ಲೂಕಿನ ಯಸಳೂರು ಬಳಿ ಕಾಡಾನೆ ಸೆರೆ ಹಿಡಿದು ಸ್ಥಳಾಂತರ ಮಾಡುವ ಕಾರ್ಯಾಚರಣೆ ನಡೆಯುತ್ತಿತ್ತು. ಈ ವೇಳೆ ಕಾಡಾನೆಗೆ ಅರವಳಿಕೆ ಚುಚ್ಚುಮದ್ದು ನೀಡುವ ಕಾರ್ಯಾಚರಣೆ ವೇಳೆ ಅರ್ಜುನನ ಮೇಲೆ ಒಂಟಿಸಲಗ ದಾಳಿ ಮಾಡಿದೆ. ಈ ಘಟನೆಯಲ್ಲಿ ಅರ್ಜುನ ಆನೆ ಮೃತಪಟ್ಟಿದೆ ಎಂದು ಮೂಲಗಳು ತಿಳಿಸಿವೆ.

ಕಾರ್ಯಾಚರಣೆ ವೇಳೆ ಒಂಟಿಸಲಗ ದಾಳಿ ಮಾಡುತ್ತಿದ್ದಂತೆ ಉಳಿದ ಮೂರು ಸಾಕಾನೆಗಳು ಓಡಿ ಹೋಗಿವೆ. ಕೊನೆಗೆ ಒಂಟಿಸಲಗದ ಜೊತೆ ಅರ್ಜುನ ಆನೆಯು ಒಂಟಿಯಾಗಿ ಹೋರಾಟ ನಡೆಸಿದೆ. ಈ ಕಾಳಗ ಆರಂಭವಾಗುತ್ತಿದ್ದಂತೆ ಅರ್ಜುನನ ಮೇಲಿನಿಂದ ಮಾವುತ ಇಳಿದು ಓಡಿದ್ದಾರೆ. ಅರ್ಜುನ ಸಾವನ್ನಪ್ಪಿದ್ದಾನೆ. ಘಟನಾ ಸ್ಥಳಕ್ಕೆ ಅರಣ್ಯ ಇಲಾಖೆ ಅಧಿಕಾರಿಗಳು ಭೇಟಿ ನೀಡಿ ಪರಿಶೀಲನೆ ನಡೆಸುತ್ತಿದ್ದಾರೆ.

22 ವರ್ಷಗಳ ಕಾಲ ದಸರಾದಲ್ಲಿ ಭಾಗವಹಿಸಿದ್ದ ಸಾಕಾನೆ ಅರ್ಜುನ 8 ಬಾರಿ ಯಶಸ್ವಿಯಾಗಿ ಅಂಬಾರಿ ಹೊತ್ತಿದ್ದ. ಜಂಬೂಸವಾರಿಯಲ್ಲಿ ನಿಶಾನೆ ಆನೆಯಾಗಿ ಅರ್ಜುನ ಭಾಗಿಯಾಗಿದ್ದ. ಅರ್ಜುನ ಆನೆಗೆ 65 ವರ್ಷ ವಯಸ್ಸಾಗಿತ್ತು. 288ಮೀ ಎತ್ತರ, 5800 ರಿಂದ 6000 ಕೆ.ಜಿ. ತೂಕ ಇರುವುದು ಇತ್ತೀಚೆಗೆ ದಸರಾದಲ್ಲಿ ಭಾಗವಹಿಸಿದ್ದ ಸಂದರ್ಭ ಗೊತ್ತಾಗಿತ್ತು.

# ಬರ ಪರಿಸ್ಥಿತಿ ನಿರ್ವಹಿಸುವುದರಲ್ಲಿ ಸರ್ಕಾರ ವಿಫಲ; ರಾಜ್ಯಪಾಲರಿಗೆ ಹೆಚ್.ಡಿ.ಕುಮಾರಸ್ವಾಮಿ ದೂರು

ಬೆಂಗಳೂರು: ರಾಜ್ಯಾದ್ಯಂತ ಜೆಡಿಎಸ್ ಪಕ್ಷ ನಡೆಸಿದ್ದ ಬರ ಅಧ್ಯಯನ ವರದಿಯನ್ನು ಮಾಜಿ ಮುಖ್ಯಮಂತ್ರಿಗಳು ಹಾಗೂ ಜೆಡಿಎಸ್ ರಾಜ್ಯಾಧ್ಯಕ್ಷ ಹೆಚ್.ಡಿ.ಕುಮಾರಸ್ವಾಮಿ ಅವರು, ಭಾನುವಾರ ರಾಜ್ಯಪಾಲರಾದ ಥಾವರಚಂದ್ ಗೆಹ್ಲೋಟ್ ಅವರಿಗೆ ಸಲ್ಲಿಸಿದರು.

ಪಕ್ಷದ ಶಾಸಕರು, ಮಾಜಿ ಸಚಿವರು, ಮಾಜಿ ಶಾಸಕರು ಹಾಗೂ ಜಿಲ್ಲಾ ಘಟಕಗಳ ಅಧ್ಯಕ್ಷರ ಜತೆ ರಾಜಭವನಕ್ಕೆ ನಿಯೋಗದಲ್ಲಿ ತೆರಳಿದ ಅವರು, ರಾಜ್ಯಪಾಲರಿಗೆ ಮನವಿ ಸಲ್ಲಿಸಿದರು.

ರಾಜ್ಯದಲ್ಲಿ ಬರ ಪರಿಹಾರ ಕಾಮಗಾರಿಗಳನ್ನು ಕೈಗೊಳ್ಳಲು ಕೇಂದ್ರದಿಂದ ಅನುದಾನ ಕೊಡಿಸಲು ಕೂಡಲೇ ಮಧ್ಯಪ್ರವೇಶ ಮಾಡಬೇಕೆಂದು ಮನವಿ ಮಾಡಿದರು.

ಈ ವೇಳೆ ಮನವಿಗೆ ಸಕಾರಾತ್ಮಕವಾಗಿ ಸ್ಪಂದಿಸಿದ ರಾಜ್ಯಪಾಲರು, ನಿಮ್ಮ ಅಹವಾಲನ್ನು ಕೇಂದ್ರ ಸರ್ಕಾರದ ಗಮನಕ್ಕೆ ತರುವುದಾಗಿ ಭರವಸೆ ನೀಡಿದರು. ರಾಜ್ಯ ಎದುರಿಸುತ್ತಿರುವ ತೀವ್ರ ಪರಿಸ್ಥಿತಿಯನ್ನು ಕೇಂದ್ರದ ಗಮನಕ್ಕೆ ತರುವುದಾಗಿ ತಿಳಿಸಿದರು.


ಮಾನ್ಸೂನ್ ವೈಫಲ್ಯದಿಂದ ರಾಜ್ಯದಲ್ಲಿ ಒಟ್ಟು 48.15 ಹೆಕ್ಟೇರ್ ಪ್ರದೇಶದಲ್ಲಿ ಬೆಳೆ ಹಾನಿಯಾಗಿದೆ. ಈ ಪೈಕಿ 46.09 ಲಕ್ಷ ಹೆಕ್ಟೇರ್ ಕೃಷಿ ಬೆಳೆ ಹಾಗೂ 2.06 ಲಕ್ಷ ಹೆಕ್ಟೇರ್ ತೋಟಗಾರಿಕೆ ಬೆಳೆ ನಾಶವಾಗಿದೆ.



ರಾಜ್ಯ ಸರಕಾರವೇ ಅಂದಾಜು ಮಾಡಿರುವಂತೆ ರಾಜ್ಯದಲ್ಲಿ ಒಟ್ಟು 35.162.02 ಕೋಟಿ ರೂಪಾಯಿಯಷ್ಟು ಬೆಳೆ ಹಾನಿ ಆಗಿದ್ದು, ಎನ್ ಸಿಆರ್ ಎಫ್ ಮಾನದಂಡದ ಅಡಿಯಲ್ಲಿ ಕೇಂದ್ರ ಸರಕಾರದಿಂದ 18,171.44 ಕೋಟಿ ರೂಪಾಯಿ ಪರಿಹಾರವನ್ನು ರಾಜ್ಯ ಸರಕಾರ ಕೋರಿದೆ. ಆದರೆ, ಇಷ್ಟು ಮೊತ್ತದ ಪರಿಹಾರದಿಂದ ರಾಜ್ಯದ ರೈತರ ಬವಣೆ ನೀಗುವುದಿಲ್ಲ.

ಕೃಷಿಕರು ಅನುಭವಿಸಿರುವ ಒಟ್ಟಾರೆ ನಷ್ಟದಲ್ಲಿ ಶೇ.10ರಷ್ಟು ಪರಿಹಾರವೂ ಅವರಿಗೆ ಸಿಗುವುದಿಲ್ಲ. ಆದ್ದರಿಂದ ಈ ಹಿಂದೆ ನೀಡದಂತೆ ಪ್ರತಿ ಹೆಕ್ಟೇರ್ ಬೆಳೆ ನಾಶಕ್ಕೆ ಹೆಚ್ಚುವರಿ ಪರಿಹಾರವಾಗಿ 17,500 ರೂಪಾಯಿ ನೀಡಬೇಕು. ಈ ನಿಟ್ಟಿನಲ್ಲಿ ತಾವು ರಾಜ್ಯ ಸರಕಾರಕ್ಕೆ ಕಟ್ಟುನಿಟ್ಟಿನ ನಿರ್ದೇಶನ ನೀಡಬೇಕು ಎಂದು ಕುಮಾರಸ್ವಾಮಿ ಅವರು ಮನವಿ ಮಾಡಿದರು.

# ಗ್ರಾ.ಪಂ ಪಿಡಿಒ ಆತ್ಮಹತ್ಯೆ



ಮುಂಡಗೋಡ: ಹಾವೇರಿ ಜಿಲ್ಲೆಯ ರಾಣೆಬೆನ್ನೂರು ತಾಲ್ಲೂಕಿನ ಹೊನ್ನತ್ತಿ ಗ್ರಾಮ ಪಂಚಾಯಿತಿಯ ಪ್ರಭಾರ ಪಿಡಿಒ ಆಗಿ ಕೆಲಸ ಮಾಡುತ್ತಿದ್ದ ತಾಲ್ಲೂಕಿನ ಸನವಳ್ಳಿ ಗ್ರಾಮದ ರಾಮಲಿಂಗೇಶ್ ಎಸ್.ಕಳಸಗೇರಿ (42) ಆತ್ಮಹತ್ಯೆ ಮಾಡಿಕೊಂಡಿದ್ದಾರೆ.

ಸನವಳ್ಳಿ ಗ್ರಾಮದ ತೋಟದ ಮನೆಯಲ್ಲಿ ಸೋಮವಾರ ಅವರು ನೇಣು ಬಿಗಿದುಕೊಂಡು ಆತ್ಮಹತ್ಯೆ ಮಾಡಿಕೊಂಡಿದ್ದಾರೆ. ಹಾವೇರಿ ಜಿಲ್ಲೆಯ ರಾಣೆಬೆನ್ನೂರು ತಾಲ್ಲೂಕಿನ ಹೊನ್ನತ್ತಿ ಗ್ರಾಮ ಪಂಚಾಯಿತಿಯ ಪ್ರಭಾರಿ ಪಿಡಿಒ ಆಗಿ ಕೆಲಸ ಮಾಡುತ್ತಿದ್ದರು.

ಭಾನುವಾರ ರಜೆ ಇರುವುದರಿಂದ ತನ್ನ ತೋಟಕ್ಕೆ ಬಂದಿದ್ದರು. 'ಲಕ್ಷಾಂತರ ರೂಪಾಯಿ ಸಾಲ ಮಾಡಿಕೊಂಡು, ಸಾಲಕ್ಕೆ ಹೆದರಿ ಆತ್ಮಹತ್ಯೆ ಮಾಡಿಕೊಂಡಿರಬಹುದು' ಎಂದು ಕುಟುಂಬಸ್ಥರು ಶಂಕಿಸಿದ್ದಾರೆ. ಪೊಲೀಸರು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ.

# ಲೋಕಸಭಾ ಚುನಾವಣೆಯಲ್ಲಿ ಸ್ಪರ್ಧಿಸುವುದಿಲ್ಲ: ಕೆ.ಎಸ್. ಈಶ್ವರಪ್ಪ



ಶಿವಮೊಗ್ಗ: ಲೋಕಸಭೆ ಚುನಾವಣೆಗೆ ನಾನು ಸ್ಪರ್ಧಿಸುವುದಿಲ್ಲ ಎಂದು ಮಾಜಿ ಸಚಿವ ಕೆ.ಎಸ್. ಈಶ್ವರಪ್ಪ ಸ್ಪಷ್ಟನೆ ನೀಡಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಚುನಾವಣಾ ರಾಜಕೀಯದಿಂದ ನಾನು ನಿವೃತ್ತಿ ಪಡೆದಿದ್ದೇನೆ.

ಹೀಗಾಗಿ ಮುಂದಿನ ಲೋಕಸಭಾ ಚುನಾವಣೆಯಲ್ಲಿ ನಾನು ಸ್ಪರ್ಧಿಸುವುದಿಲ್ಲ. ಪಕ್ಷದ ವರಿಷ್ಠರ ಸೂಚನೆಯಂತೆ ನಾನು ನಡೆದುಕೊಂಡಿದ್ದೇನೆ ಎಂದು ಮಾಜಿ ಸಚಿವ ಕೆ ಎಸ್ ಈಶ್ವರಪ್ಪ ತಿಳಿಸಿದರು. ಶಾಸಕ ಯತ್ನಾಳ ಅಪಟ್ಟ ಹಿಂದುತ್ವವಾದಿ ಅದರಲ್ಲಿ ಎರಡು ಮಾತಿಲ್ಲ. ವಿಜಯಪುರ ಶಾಸಕ ಯತ್ನಾಳಗೆ ಅಸಮಾಧಾನ ಇರುವುದು ನಿಜ. ನಮ್ಮ ಪಕ್ಷದ ಹಿರಿಯ ನಾಯಕರು ಅಸಮಾಧಾನವನ್ನು ಸರಿಪಡಿಸುತ್ತಾರೆ ಎಂದು ಅವರು ತಿಳಿಸಿದರು.

# ಆಸ್ತಿ ವಿಚಾರಕ್ಕಾಗಿ ರಸ್ತೆಯಲ್ಲೇ ವೃದ್ಧನ ಹತ್ಯೆ



ಧಾರವಾಡ: ಆಸ್ತಿ ವಿಚಾರಕ್ಕಾಗಿ ವ್ಯಕ್ತಿಯೋರ್ವನನ್ನು ನಡುರಸ್ತೆಯಲ್ಲೇ ಮಾರಕಾಸ್ತ್ರಗಳಿಂದ ಕೊಚ್ಚಿ ಕೊಲೆ ಮಾಡಿದ ಘಟನೆ ನಗರದ ಕೊಪ್ಪದಕೇರಿ ಶಿವಾಲಯದ ಬಳಿ ನಡೆದಿದೆ.

ಹೆಬ್ಬಳ್ಳಿ ಗ್ರಾಮದ ನಿಂಗಪ್ಪ ಹಡಪದ (60) ಹತ್ಯೆಗೀಡಾದ ವ್ಯಕ್ತಿ. ಜನದಟ್ಟಣೆ ಇರುವ ಜಾಗದಲ್ಲೇ ಈ ಕೃತ್ಯ ನಡೆದಿದ್ದು, ಆಸ್ತಿ ವಿಚಾರಕ್ಕೆ ಸಂಬಂಧಿಕರೆ ಕೊಲೆ ಮಾಡಿರುವ ಆರೋಪ ಕೇಳಿ ಬಂದಿದೆ. ವೃದ್ಧನ ಹತ್ಯೆಗೈಯುತ್ತಿರುವ ದೃಶ್ಯವನ್ನು ಅಲ್ಲೇ ಇದ್ದ ಯುವಕನೊಬ್ಬ ಮೊಬೈಲ್ನಲ್ಲಿ ಸೆರೆ ಹಿಡಿದಿದ್ದಾನೆ.

ಕೊಲೆ ಮಾಡುತ್ತಿರುವ ಮೊಬೈಲ್ ವೀಡಿಯೋ ಪೊಲೀಸರಿಗೆ ಸಿಕ್ಕಿದ್ದು, ಮೂರು ಅರೋಪಿಗಳು ಕೊಲೆಯಲ್ಲಿ ಭಾಗಿಯಾಗಿರುವುದು ತಿಳಿದು ಬಂದಿದೆ.

ಆರೋಪಿಗಳನ್ನು ಬಂಧಿಸಲು ಕ್ರಮಕೈಗೊಳ್ಳಲಾಗಿದೆ ಎಂದು ಪೊಲೀಸ್ ಆಯುಕ್ತೆ ರೇಣುಕಾ ಸುಕುಮಾರ್ ತಿಳಿಸಿದ್ದಾರೆ. ಸ್ಥಳಕ್ಕೆ ಪೊಲೀಸರು ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ. ಈ ಸಂಬಂಧ ಧಾರವಾಡ ಉಪನಗರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ಮೂರು ರಾಜ್ಯಗಳಿಗೆ ಬಿಜೆಪಿಯೇ ಬಾಸ್: ಶಾಸಕ ಬಾಲಚಂದ್ರ ಜಾರಕಿಹೊಳಿ



ಗೋಕಾಕ: ಮಧ್ಯಪ್ರದೇಶ, ರಾಜಸ್ಥಾನ ಮತ್ತು ಛತ್ತೀಸಗಡ್ ರಾಜ್ಯಗಳ ವಿಧಾನಸಭೆ ಚುನಾವಣೆಗಳಲ್ಲಿ ಬಿಜೆಪಿ ಐತಿಹಾಸಿಕ ಜಯ ಸಾಧಿಸಿರುವುದಕ್ಕೆ ಶಾಸಕ ಬಾಲಚಂದ್ರ ಜಾರಕಿಹೊಳಿ ಅವರು ಹರ್ಷ ವ್ಯಕ್ತಪಡಿಸಿದ್ದಾರೆ.

ಇನ್ನೇನೂ ಲೋಕಸಭೆಯ ಚುನಾವಣೆಯ ಹೊಸ್ತಿನಲ್ಲಿರುವಾಗ ಈ ರಾಜ್ಯಗಳ ಫಲಿತಾಂಶಗಳು ನಮ್ಮ ಕಾರ್ಯಕರ್ತರನ್ನು ಹುರಿದುಂಬಿಸಿದೆ.

ಪ್ರಧಾನಮಂತ್ರಿ ನರೇಂದ್ರ ಮೋದಿಯವರ ಜನಪ್ರಿಯ ಕೇಂದ್ರ ಸರ್ಕಾರದ ಯೋಜನೆಗಳಿಂದ ಮತದಾರರು ಬಿಜೆಪಿಗೆ ಫುಲ್ ಮಾರ್ಕ್ಸ ನೀಡಿದ್ದಾರೆ.

ಅದಕ್ಕಾಗಿ ಮೂರೂ ರಾಜ್ಯಗಳ ಮತದಾರರು, ಕಾರ್ಯಕರ್ತರನ್ನು ಅಭಿನಂದಿಸುತ್ತೇನೆ ಎಂದು ಅವರು ಹೇಳಿದ್ದಾರೆ.

ಬರುವ 2024 ರಲ್ಲಿ ನಡೆಯುವ ಲೋಕಸಭಾ ಚುನಾವಣೆಯಲ್ಲಿ ಮೋದಿ ನೇತೃತ್ವದ ಬಿಜೆಪಿಗೆ ಸ್ಪಷ್ಟ ಬಹುಮತ ನೀಡುವ ಮೂಲಕ ಮೋದಿಯವರನ್ನು ಮತ್ತೊಂದು ಅವಧಿಗೆ ಪ್ರಧಾನಿಯನ್ನಾಗಿ ಕಣ್ತುಂಬಿ ನೋಡುವ ಅವಕಾಶವು ಪ್ರತಿಯೊಬ್ಬ ಭಾರತೀಯನಿಗೆ ಲಭಿಸಲಿದೆ.

ಈ ಮೂಲಕ ದೇಶದಲ್ಲಿ ಬಿಜೆಪಿಯ ಹವಾ ಮುಂದುವರೆಯಲಿದೆ ಎಂದು ಶಾಸಕ ಬಾಲಚಂದ್ರ ಜಾರಕಿಹೊಳಿ ಅವರು ಸಂತಸ ವ್ಯಕ್ತಪಡಿಸಿದ್ದಾರೆ.

# ಕುರಂದವಾಡೆ ಸಹೋದರರ ಸಮಾಜಮುಖಿ ಕೆಲಸ ಶ್ಲಾಘನೀಯ: ಶಾಂತಭೀಷ್ಮ ಚೌಡಯ್ಯ ಶ್ರೀ

ಹುಕ್ಕೇರಿ: ಸುವರ್ಣ ಮಹೋತ್ಸವ ಆಚರಿಸಿಕೊಳ್ಳುತ್ತಿರುವ ಹಿರಿಯ ಪತ್ರಕರ್ತ ದಿಲೀಪ ಕುರಂದವಾಡೆ ಅವರು ಈ ಸಂದರ್ಭದಲ್ಲಿ ತಮ್ಮ ತಂದೆ–ತಾಯಿ ಸ್ಮರಣಾರ್ಥ ಮಂಗಲ ಕಾರ್ಯಾಲಯ ನಿರ್ಮಿಸಿ ಸಾಮೂಹಿಕ ವಿವಾಹ ನೆರವೇರಿಸಿ ಸಮಾಜಮುಖಿ ಕೆಲಸ ಮಾಡುತ್ತಿರುವುದು ಶ್ಲಾಘನೀಯ ಎಂದು ನರಸೀಪುರದ ಅಂಬಿಗರ ಚೌಡಯ್ಯ ಗುರುಪೀಠದ ಶಾಂತಭೀಷ್ಮ ಚೌಡಯ್ಯ ಸ್ವಾಮೀಜಿ ಹೇಳಿದರು.

ಪಟ್ಟಣದ ಹೊರವಲಯದಲ್ಲಿ ನಿರ್ಮಿಸಿರುವ ಎಸ್.ಎಸ್.ಕನ್ವೆನ್ಷನಲ್ ಹಾಲ್ ಅನ್ನು ಸೋಮವಾರ ಉದ್ಘಾಟಿಸಿ ಸಾಮೂಹಿಕ ವಿವಾಹದಲ್ಲಿ ಆರು ಜೋಡಿಗೆ ಅಕ್ಷತೆ ಹಾಕಿ, ದಿಲೀಪ (ಸಿದ್ದು) ಕುರಂದವಾಡೆ ಅವರಿಗೆ 50ನೇ ವಸಂತದ ಶುಭ ಹಾರೈಸಿ ಅವರು ಮಾತನಾಡಿದರು.

ಶ್ರೀಮಂತರು ಬಡವರ್ಗದ ಜನರಿಗೆ ಸಹಾಯ ಮಾಡಿದಲ್ಲಿ, ಅದರಿಂದ ಮನಸ್ಸಿಗೆ ನೆಮ್ಮದಿ ಸಿಗುವುದು. ಸಹಾಯ ಪಡೆದವರು ಪರಿಪೂರ್ಣತೆಯತ್ತ ಸಾಗಬೇಕು. ಸಮಾಜ ಸೇವೆ ಎಂದರೆ ಭಗವಂತನ ಸೇವೆ ಮಾಡಿದಂತೆ. ಕುರಂದವಾಡೆ ಸಹೋದರರ ಸಮಾಜಮುಖಿ ಕಾರ್ಯದ ಬಗ್ಗೆ ಅವರು ಮೆಚ್ಚುಗೆ ವ್ಯಕ್ತಪಡಿಸಿದರು.

ಸಾನಿಧ್ಯ ವಹಿಸಿದ್ದ ಗೋಣಿಬೀಡು ಶೀಲ ಸಂಪಾದನಾಮಠದ ಸಿದ್ಧಲಿಂಗ ಸ್ವಾಮೀಜಿ ಮಾತನಾಡಿ, ಮಾನವ ಜನ್ಮ ಶಾಶ್ವತವಲ್ಲ. ಅದು ನೀರ ಮೇಲಿನ ಗುರುಳೆ ಇದ್ದ ಹಾಗೆ. ಇರುವಷ್ಟು



ದಿನ ಸಾರ್ಥಕವಾಗಿ ಬದುಕಬೇಕಾದರೆ ಜನರಿಗೆ ಸಹಾಯ ಮಾಡಿ, ಅವರ ಕಷ್ಟ, ನೋವಿಗೆ ಸ್ಪಂದಿಸಬೇಕು ಎಂದರು.

ಹಿರೇಮಠದ ಚಂದ್ರಶೇಖರ ಶಿವಾಚಾರ್ಯ ಸ್ವಾಮೀಜಿ ಮಾತನಾಡಿ, ಕುರಂದವಾಡೆ ಸಹೋದರರು ತಂದೆ–ತಾಯಿ ಸ್ಮರಣಾರ್ಥ ಮಾಡಿದ ಕಾರ್ಯ ಶ್ಲಾಘನೀಯ ಎಂದರು. ಬೈಲಹೊಂಗಲ ಡಾ.ಮಹಾಂತೇಶ ಶಾಸ್ರೊಥ ಮತ್ತು ಹಿರೇಮಠದ ಸಂಸ್ಕೃತ ಗುರುಕುಲದ ಶಿಕ್ಷಕ ಸಂಪತಕುಮಾರ ಶಾಸ್ರೊ ಅವರು ವಿವಾಹ ಕಾರ್ಯ ನೆರವೇರಿಸಿದರು.

ಇದೇ ಸಂದರ್ಭದಲ್ಲಿ ನರಸೀಪುರದ ಅಂಬಿಗರ ಚೌಡಯ್ಯ ಗುರುಪೀಠದ ಶಾಂತಭೀಷ್ಮ ಚೌಡಯ್ಯ ಸ್ವಾಮೀಜಿ ಅವರು ನರಸೀಪುರದಲ್ಲಿ ಜ.14 ಮತ್ತು 15 ರಂದು ಜರುಗುವ ಅಂಬಿಗರ ಚೌಡಯ್ಯ ಉತ್ಸವ ಮತ್ತು ಜಾತ್ರೆಯ ಭಿತ್ತಿಪತ್ರವನ್ನು ಬಿಡುಗಡೆ ಮಾಡಿದರು.

ಕ್ಯಾರಗುಡ್ಡದ ಅಭಿನವ ಮಂಜುನಾಥ ಸ್ವಾಮೀಜಿ, ಸುರಪುರ ಕೇರವಾಡದ ಪ್ರಭು ಅಡವಿಸಿದ್ಧೇಶ್ವರ ಸ್ವಾಮೀಜಿ, ಮಾಜಿ ಸಚಿವ ಎ.ಬಿ.ಪಾಟೀಲ, ಮಾಜಿ ಶಾಸಕ ಕಾಕಾಸಾಹೇಬ ಪಾಟೀಲ, ನಿವೃತ್ತ ಅಧಿಕಾರಿಗಳಾದ ಎಂ.ಜಿ.ಹಿರೇಮಠ, ಬಿ.ವೈ.ಪವಾರ, ಮುಖಂಡರಾದ ಸರ್ವೋತ್ತಮ ಜಾರಕಿಹೊಳಿ, ಮಾಜಿ ಮೇಯರ ವಿಜಯ ಮೋರೆ, ಆರ್ಟಿಐ ಕಾರ್ಯಕರ್ತ ಭೀಮಶಿ ಗಡಾದ, ಮಹಾಂತೇಶ ಕಡಾಡಿ, ಪ್ರಜ್ವಲ ನಿಲಜಗಿ, ಕಿಶೋರ ಶಿರಗೆ, ಮಲ್ಲಪ್ಪ ಬಿಸಿರೊಟ್ಟಿ, ರೋಹಿತ್ ಚೌಗಲಾ, ಪಂಚಮಸಾಲಿ ಸಮಾಜದ ಜಿಲ್ಲಾಧ್ಯಕ್ಷ ಕೆ.ಬಿ.ಪಾಟೀಲ ಮತ್ತಿತರರು ಉಪಸ್ಥಿತರಿದ್ದರು.

ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಜಿಲ್ಲಾ ಅಧ್ಯಕ್ಷರೂ ಆದ ಗಂಗಾಮತ ಸಮಾಜದ ಜಿಲ್ಲಾಧ್ಯಕ್ಷ ದಿಲೀಪ ಕುರಂದವಾಡೆ ಸ್ವಾಗತಿಸಿದರು. ಖಾಸಗಿ ವಾಹಿನಿ ನಿರೂಪಕಿ ನಮಿತಾ ಜೈನ್ ನಿರೂಪಿಸಿದರು. ಕನ್ವೆನ್ಸನ್ ಹಾಲ್ ಮಾಲಿಕ ರಾಜು ಕುರಂದವಾಡೆ ವಂದಿಸಿದರು.

# ಗ್ಯಾರಂಟಿಗಳಿಂದ ಚುನಾವಣೆ ಗೆಲ್ಲುತ್ತೇವೆಂದು ಹೇಳಲು ಆಗಲ್ಲ: ಸಚಿವ ಸತೀಶ್ ಜಾರಕಿಹೊಳಿ

ಬೆಳಗಾವಿ: ಛತ್ತೀಸ್‌ಘಡ್, ಮಧ್ಯಪ್ರದೇಶದಲ್ಲಿ ಕಾಂಗ್ರೆಸ್ ಪಕ್ಷ ಗೆಲ್ಲಬೇಕಿತ್ತು. ಆದರೆ ಜನರ ತೀರ್ಮಾಣವೇ ಅಂತಿಮ. ಅದನ್ನು ನಾವು ಒಪ್ಪುತ್ತೇವೆ. ಸೋಲಿನ ಹೊಣೆ ಯಾರು ಹೊರಬೇಕಿಲ್ಲ.

ಎಲ್ಲರೂ ಪ್ರಾಮಾಣಿಕರಾಗಿ ಕೆಲಸ ಮಾಡಿದ್ದಾರೆ. ತೆಲಂಗಾಣದಲ್ಲಿ ಮಾತ್ರ ಕಾಂಗ್ರೆಸ್ ಪಕ್ಷಕ್ಕೆ ಗೆಲುವಾಗಿದೆ ಎಂದು ಲೋಕೋಪಯೋಗಿ ಇಲಾಖೆ ಸಚಿವ ಸತೀ ಜಾರಕಿಹೊಳಿ ಅವರು ಹೇಳಿದರು.

ನಗರದ ಕಾಂಗ್ರೆಸ್ ಕಚೇರಿಯಲ್ಲಿ ಮಾತನಾಡಿದ ಅವರು, ಪಂಚರಾಜ್ಯ ಫಲಿತಾಂಶ ಕಾಂಗ್ರೆಸ್ ಪಕ್ಷಕ್ಕೆ ಎಚ್ಚರಿಕೆ ಗಂಟೆ, ಜನಪರ ಕೆಲಸ ಮಾಡಿದಾಗ ಚುನಾವಣೆ ಗೆಲ್ಲಲು ಸಾಧ್ಯವಿದೆ. ಗ್ಯಾರಂಟಿ ಯೋಜನೆಗಳಿಂದಲೇ ಚುನಾವಣೆ ಗೆಲ್ಲುತ್ತೇವೆ ಎಂದು ಹೇಳಲು ಆಗುವುದಿಲ್ಲ. ರಾಜಸ್ಥಾನದಲ್ಲಿ ಕಾಂಗ್ರೆಸ್ ಗೆ ಏಕೆ ಸೋಲಾಗಿದೆ ಎಂಬುವುದಕ್ಕೆ ಸಮಿತಿ ರಚಿಸಿದರೆ ತಿಳಿಯುತ್ತದೆ ಎಂದು ಮಾಧ್ಯಮದವರ ಪ್ರಶ್ನೆಗೆ ಉತ್ತರಿಸಿದರು.

ಪಂಚರಾಜ್ಯ ಚುನಾವಣಾ ಪಲಿತಾಂಶವು ಬರುವ ಲೋಕಸಭೆಯ ಚುನಾವಣೆಗೆ ದಿಕ್ಸೂಚಿ ಆಗುತ್ತದೆಯೇ ಎಂಬ ಪ್ರಶ್ನೆಗೆ ಪ್ರತಿಕ್ರಿಯೆ



ನೀಡಿದ ಅವರು, ಈ ಚುನಾವಣೆಗಳಲ್ಲಿ ವೋಟ್ ಬ್ಯಾಂಕ್ ಹೆಚ್ಚಾಗಿರಬಹುದು. ಅದು ಲೋಕಸಭಾ ಚುನಾವಣೆವರೆಗೆ ಇಂಟ್ಯಾಕ್ಟ್ ಆಗಿ ಇಟ್ಟುಕೊಳ್ಳಬೇಕಾಗುತ್ತದೆ ಎಂದು ಫಲಿತಾಂಶವನ್ನು ಸಮರ್ಥಿಸಿಕೊಂಡರು. ಲೋಕಸಭೆ, ವಿಧಾನಸಭೆಗೆ ಮತದಾರನ ಮೆಂಟ್ಯಾಲಿಟಿ ಬೇರೆ ಇರುತ್ತದೆ. ಒಂದಕ್ಕೊಂದು ಹೋಲಿಕೆ ಮಾಡಲು ಆಗಲ್ಲ ಎಂದರು.

ನಮ್ಮ ಕೈ ವಶ ಆಗುತ್ತದೆ ಅನ್ನೋ ಆಶಯ ಇತ್ತು. ಆದರೆ ಅಲ್ಲಿಯ ಜನರ ತೀರ್ಮಾನ ಸ್ವಾಗತಿಸುತ್ತೇವೆ. ಕಾಂಗ್ರೆಸ್ ಊಹಿಸಿದಷ್ಟು ಫಲಿತಾಂಶ ಸಿಕ್ಕಿಲ್ಲ. ಹೆಚ್ಚಿನ ಫಲಿತಾಂಶ ಪಡೆಯಲಿಕ್ಕೆ ನಾವು ಜನರನ್ನು ಮುಟ್ಟಲಿಕ್ಕೆ ಸಾಧ್ಯವಾಗಿಲ್ಲ. ನಮ್ಮ ರಾಜ್ಯದಲ್ಲಿ ಕಾಂಗ್ರೆಸ್ ಜನರಿಗೆ ತಲುಪಿತ್ತು. ಬಿಜೆಪಿಯ ಭ್ರಷ್ಟಾಚಾರ ಜನತೆಗೆ ಮನವರಿಕೆ ಆಗಿತ್ತು. ಆದರೆ, ಇಂದು ಫಲಿತಾಂಶ ಹೊರಬಿದ್ದ ರಾಜ್ಯಗಳಲ್ಲಿ ನಮ್ಮ ಪ್ರಣಾಳಿಕೆ ಕೆಳಹಂತದ ಜನರಿಗೆ ತಲುಪಿಲ್ಲ. ಆದರೆ, ಕಳೆದ ಚುನಾವಣೆ ನೋಡಿದರೆ ಈ ಭಾರೀ ಮತಗಳ ಸಂಖ್ಯೆ ಹೆಚ್ಚಿದೆ, ಅದು ಸಂತೋಷದ ವಿಷಯ ಎಂದರು.

ಪ್ರತಿ ಬಾರಿ ಅಧಿವೇಶನ ನಡೆದರೂ ಉತ್ತರ ಕರ್ನಾಟಕ ಸಮಸ್ಯೆಗಳ ಬಗ್ಗೆ ಚರ್ಚಿಸಲು ಸಾಧ್ಯವಾಗಿಲ್ಲ. ಈ ಬಾರಿಯಾದರೂ ವಿಶೇಷವಾಗಿ ಉತ್ತರ ಕರ್ನಾಟಕದ ಸಮಸ್ಯೆಗಳ ಬಗ್ಗೆ ಚರ್ಚಿಸಲಾಗುವುದು ಎಂದರು.

## ಅರ್ಜಿ ಆಹ್ವಾನ

ಬೆಳಗಾವಿ: 2023–24ನೇ ಸಾಲಿನ ದೀನ್‌ದಯಾಳ್ ಅಂತ್ಯೋದಯ ಯೋಜನೆ–"ರಾಷ್ಟ್ರೀಯ ನಗರ ಜೀವನೋಪಾಯ ಅಭಿಯಾನ **(DAY-NULM)** ಯೋಜನೆಯಲ್ಲಿ ವಿವಿಧ ಘಟಕಗಳಡಿಯಲ್ಲಿ ಫಲಾನುಭವಿಗಳಿಂದ ಅರ್ಜಿಗಳನ್ನು ಅಹ್ವಾನಿಸಲಾಗಿದೆ.

ಆಸಕ್ತರು ಡಿಸೆಂಬರ್ 08, 2023ರ ಒಳಗಾಗಿ ಅಗತ್ಯ ದಾಖಲಾತಿಗಳೊಂದಿಗೆ ಈ ಕಾರ್ಯಾಲಯಕ್ಕೆ ಅರ್ಜಿ ಸಲ್ಲಿಸಬಹುದಾಗಿದೆ.

ಅವಧಿ ಮೀರಿ ಬಂದಂತಹ ಹಾಗೂ ಅಪೂರ್ಣ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

ಹೆಚ್ಚಿನ ಮಾಹಿತಿಗಾಗಿ ಕಚೇರಿ ವೇಳೆಯಲ್ಲಿ ಡೇ–ನಲ್ಮ್ ಶಾಖೆ, ಮಹಾನಗರ ಪಾಲಿಕೆ, ಬೆಳಗಾವಿ ಇಲ್ಲಿ ಸಂಪರ್ಕಿಸಬಹುದಾಗಿದೆ ಎಂದು ಮಹಾನಗರ ಪಾಲಿಕೆ ಉಪ ಆಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಶಿನೋಳಿಯಲ್ಲಿ ಎಂಇಎಸ್ ಮುಖಂಡರಿಂದ ಪ್ರತಿಭಟನೆ

ಬೆಳಗಾವಿ: ಶಿವಸೇನೆ ಮತ್ತು ಎಂಇಎಸ ಸಮಿತಿಯ ಸದಸ್ಯರು ಮಹಾರಾಷ್ಟ್ರ ಗಡಿಭಾಗದ ಶಿನೋಳಿಯಲ್ಲಿ ಪ್ರತಿಭಟನೆ ನಡೆಸುವ ಮೂಲಕ ಕೇಂದ್ರ, ಕರ್ನಾಟಕ ಹಾಗೂ ಮಹಾರಾಷ್ಟ್ರ ಸರ್ಕಾರದ ವಿರುದ್ಧ ಆಕ್ರೋಶ ವ್ಯಕ್ತಪಡಿದರು.

ಈ ವರ್ಷ ಬೆಳಗಾವಿ ಜಿಲ್ಲಾಡಳಿತ ನಗರದಲ್ಲಿ ನಿಷೇಧಾಜ್ಞೆ ಜಾರಿಗೊಳಿಸಿ ಕಾನೂನು ಸುವ್ಯವಸ್ಥೆ ಹಿನ್ನೆಲೆಯಲ್ಲಿ ಮಹಾಮೇಳಕ್ಕೆ ಅನುಮತಿ ನಿರಾಕರಿಸಿದೆ. ಆದ್ದರಿಂದ ಎಂ.ಇಸಮಿತಿಯು ನಿನ್ನೆ ಭಾನುವಾರ ಸಭೆ ನಡೆಸಿ ಮಹಾರಾಷ್ಟ್ರದ ಬೆಳಗಾವಿ ಗಡಿ ಸಮೀಪದ ಶಿನೋಳಿಯಲ್ಲಿ ರಸ್ತೆ ತಡೆ ನಡೆಸಲು ನಿರ್ಧರಿಸಿತ್ತು ಅದರಂತೆ ಇಂದು ಈ ಪ್ರತಿಭಟನೆ ನಡೆಸಲಾಯಿತು.

ಸಮಿತಿಯ ,ಶಿವಸೇನೆ ಮುಖಂಡರು ಹಾಗೂ



ಕಾರ್ಯಕರ್ತರು ಹಿಂಡಲಗಾದ ಹುತಾತ್ಮರ ಸ್ಮಾರಕಕ್ಕೆ ಆಗಮಿಸಿ ಗಡಿ ವಿವಾದದಲ್ಲಿ ಮಡಿದ ಹುತಾತ್ಮರಿಗೆ ನಮನ ಸಲ್ಲಿಸಿದರು. ಈ ಸಂದರ್ಭದಲ್ಲಿ ಬೆಳಗಾವಿ, ಖಾನಾಪುರ, ನಿಪ್ಪಾಣಿ ಮೊದಲಾದ ಗಡಿ ಭಾಗಗಳಿಂದ ಸಮಿತಿ–ಶಿವಸೇನೆ ಮುಖಂಡರು, ಪದಾಧಿಕಾರಿಗಳು, ಕಾರ್ಯಕರ್ತರು ಭಾಗಿಯಾಗಿದ್ದರು.

ಹುತಾತ್ಮರಿಗೆ ನಮನ ಸಲ್ಲಿಸಿದ ನಂತರ ಸಮಿತಿ–ಶಿವಸೇನೆ ಮುಖಂಡರು, ಪದಾಧಿಕಾರಿಗಳು, ಕಾರ್ಯಕರ್ತರು ಶಿನೋಳಿ ಕಡೆಗೆ ಮೆರವಣಿಗೆ ನಡೆಸಿದರು. ಶಿವಸೇನೆ ಕೊಲ್ಹಾಪುರ ಜಿಲ್ಲಾ ಮುಖಂಡ ವಿಜಯ ದೇವಾನೆ, ಕೇಂದ್ರ ಎಂ.ಡಿ.ಎ. ಮಾಜಿ ಶಾಸಕ ಮನೋಹರ ಕಿಣೇಕರ, ತಹಶೀಲ್ದಾರ ಪ್ರಕಾಶ ಮಾರ್ಗಳೆ, ರಾಜಭಾವು ಪಾಟೀಲ, ಮಾಜಿ ಶಾಸಕ ದಿಗಂಬರ ಪಾಟೀಲ ಮತ್ತಿತರರ ನೇತೃತ್ವದಲ್ಲಿ ಕೇಸರಿ ಧ್ವಜ ಹಿಡಿದು ಮಹಾರಾಷ್ಟ್ರದ ಗಡಿ ಪ್ರವೇಶಿಸಿದರು.

ಪ್ರತಿಭಟನೆಯಲ್ಲಿ ಶಿವಸೇನೆ ಕೊಲ್ಹಾಪುರ ಜಿಲ್ಲಾಧ್ಯಕ್ಷ ವಿಜಯ ದೇವಾಣೆ, ಮಾಜಿ ಶಾಸಕ ಮನೋಹರ ಕಿಣೇಕರ, ದಿಗಂಬರ ಪಾಟೀಲ, ರಾಜಭಾವು ಪಾಟೀಲ ಸೇರಿದಂತೆ ಇತರರು ಇದ್ದರು.

# ಅಕ್ರಮವಾಗಿ ಮದ್ಯ ಸಾಗಾಣಿಕೆ: ಆರೋಪಿಗಳ ಬಂಧನ

ಬೆಳಗಾವಿ: ಬೆಳಗಾವಿ ತಾಲೂಕಿನ ಬಿಜಗರ್ಣಿ ಗ್ರಾಮದಿಂದ ಕವಳೆವಾಡಿ ಗ್ರಾಮಕ್ಕೆ ಹೋಗುವ ರಸ್ತೆಯಲ್ಲಿ ಡಿಸೆಂಬರ್ 2, 2023 ರಂದು ಬೆಳಿಗ್ಗೆ 9 ಗಂಟೆಯ ಸುಮಾರಿಗೆ ಬೆಳಗಾವಿಯ ಅಬಕಾರಿ ಉಪ ಅಧೀಕ್ಷಕರು, ಅಬಕಾರಿ ನಿರೀಕ್ಷಕರು ಹಾಗೂ ಸಿಬ್ಬಂದಿ ಕೂಡಿಕೊಂಡು ರಸ್ತೆಗಾವಲು ಹಾಗೂ ವಾಹನ ತಪಾಸಣೆ ಮಾಡುತ್ತಿರುವಾಗ ಬಿಳಿ ಬಣ್ಣದ ಒಂದು ಅಶೋಕ ಲೆಲ್ಯಾಂಡ ಕಂಪನಿಯ ನಾಲ್ಕು ಚಕ್ರ ಗೂಡ್ಸ್ ವಾಹನ ಸಂಖ್ಯೆ ಕೆಎ–22 ಸಿ–9398 ವಾಹನವನ್ನು ತಪಾಸಣೆ ಮಾಡಿದಾಗ ವಾಹನದ ಹಿಂದುಗಡೆ ಪಾರ್ಟಿಷನ್ ಮಾಡಿ



ಬಚ್ಚಿಟ್ಟು 09 ವಿವಿಧ ನಮೂನೆಯ ಗೋವಾ ರಾಜ್ಯದಲ್ಲಿ ಮಾರಾಟಕ್ಕೆ ಅಂತಾ ನಮೂದಿರುವ 760 ಬಾಟಲಿಗಳಲ್ಲಿ ಒಟ್ಟು 239.400.ಲೀ ಗೋವಾ ಮದ್ಯವನ್ನು ತಾಬಾ ಹೊಂದಿ ಅಕ್ರಮವಾಗಿ ಸಾಗಾಣಿಕೆ ಮಾಡುತ್ತಿರುವಾಗ ಪತ್ತೆಯಾಗಿರುತ್ತದೆ.

ಆರೋಪಿತರಾದ ನಾಗೇಶ ನಾರಾಯಣ ಪಾಟೀಲ(34), ಸಾಹಿಲ್ ಲಕ್ಷ್ಮಣ ಪಾಟೀಲ(19) ಇವರುಗಳನ್ನು ಸ್ಥಳದಲ್ಲಿಯೇ ಬಂದಿಸಲಾಗಿರುತ್ತದೆ. ಬಿಳಿ ಬಣ್ಣದ ಅಶೋಕ ಲೆಲ್ಯಾಂಡ ಕಂಪನಿಯ ನಾಲ್ಕು ಚಕ್ರ ಗೂಡ್ಸ್ ವಾಹನ ಸಂಖ್ಯೆ ಕೆಎ–22 ಸಿ–9398 ನೇದ್ದರ ವಾಹನದ ಮಾಲೀಕನನ್ನು ಪತ್ತೆ ಹಚ್ಚಿ ಬಂಧಿಸಬೇಕಾಗಿದೆ. ಗುನ್ನೆಯ ಮುಂದಿನ ಕ್ರಮಕ್ಕಾಗಿ ವಾಹನ ಹಾಗೂ ಮುದ್ದೆಮಾಲನ್ನು ಪಂಚನಾಮೆ ಪ್ರಕಾರ ಜಪ್ತು ಮಾಡಿಕೊಂಡು ಸರ್ಕಾರದ ವಶಕ್ಕೆ ತೆಗೆದುಕೊಳ್ಳಲಾಯಿತು.

ಅಬಕಾರಿ ನಿರೀಕ್ಷಕರಾದ ಮಂಜುನಾಥ ಗಲಗಲಿ, ಸುನೀಲ ಪಾಟೀಲ, ಮಹಾದೇವಪ್ಪ ಕಟಗೆನ್ನವರ ಹಾಗೂ ಸಿಬ್ಬಂದಿ ಸದರಿ ದಾಳಿಯಲ್ಲಿ ಪಾಲ್ಗೊಂಡಿರುತ್ತಾರೆ. ಸದರಿ ಗುನ್ನೆಯಲ್ಲಿ ಜಪ್ತುಪಡಿಸಿದ ವಾಹನದ ಮೌಲ್ಯ ರೂ: 5,00,000/– ಹಾಗೂ ಮುದ್ದೇಮಾಲು ಹಾಗೂ ಆರೋಪಿತರ ಎರಡು ಮೊಬೈಲಗಳು ಸೇರಿ ಒಟ್ಟು ಮೌಲ್ಯ ರೂ. 3,50,000/– ಹೀಗೆ ಒಟ್ಟು 8,50,000/– ಆಗಿರುತ್ತದೆ ಎಂದು ಅಬಕಾರಿ ಉಪ ಅಧೀಕ್ಷಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಲೀಲಾವತಿ ಆಸ್ಪತ್ರೆ ಚಿಕಿತ್ಸಾ ವೆಚ್ಚ ಸರ್ಕಾರವೇ ಭರಿಸಲಿದೆ: ಸಿಎಂ ಸಿದ್ದರಾಮಯ್ಯ



ನೆಲಮಂಗಲ: ಹಿರಿಯ ಕಲಾವಿದೆ ಲೀಲಾವತಿಯವರನ್ನು ಆಸ್ಪತ್ರೆಗೆ ಸೇರಿಸಿದಲ್ಲಿ ಅವರ ಚಿಕಿತ್ಸಾ ವೆಚ್ಚವನ್ನು ಸರ್ಕಾರವೇ ಭರಿಸಲಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು. ಸೋಲದೇವನಹಳ್ಳಿಯಲ್ಲಿ ಇರುವ ಕನ್ನಡ ಚಲನಚಿತ್ರ ಹಿರಿಯ ನಟಿ ಲೀಲಾವತಿ ಅವರ ನಿವಾಸಕ್ಕೆ ಭೇಟಿ ನೀಡಿ ಅವರ ಆರೋಗ್ಯವನ್ನು ವಿಚಾರಿಸಿ ನಂತರ ಮಾಧ್ಯಮದವರೊಂದಿಗೆ ಮಾತನಾಡಿದರು. ಲೀಲಾವತಿ ಯವರು ಚೆನ್ನಾಗಿದ್ದ ಸಂದರ್ಭದಲ್ಲಿ ಜಮೀನು ವಿಚಾರವಾಗಿ ಇದ್ದ ತೊಂದರೆ ಬಗೆಹರಿಸಲು ಭೇಟಿಯಾಗುತ್ತಿದ್ದರು. ಈಗ ವಯೋಸಹಜವಾಗಿ ಕಾಯಿಲೆಗಳಿಂದ ಹಾಸಿಗೆ ಹಿಡಿದಿದ್ದಾರೆ. ಆಸ್ಪತ್ರೆಗೆ ಸೇರಿಸಿದರೆ ಅವರ ಚಿಕಿತ್ಸಾ ವೆಚ್ಚವನ್ನು ಸರ್ಕಾರವೇ ಭರಿಸುವುದಾಗಿ ತಿಳಿಸಿದ್ದೇನೆ ಎಂದರು. ಲೀಲಾವತಿ ಯವರು ಒಬ್ಬ ನೈಜ ಪ್ರತಿಭೆಯಿದ್ದ ಕಲಾವಿದೆ. ಅವರ ಮಗ ವಿನೋದ್ ರಾಜ್ ಕೂಡ ಚೆನ್ನಾಗಿ ನೋಡಿಕೊಳ್ಳಲಿ ಎಂದು ಹೇಳಿದ್ದೇನೆ. ಸರ್ಕಾರದಿಂದ ಏನೇ ಸಹಾಯದ ಅಗತ್ಯವಿದ್ದರು ಒದಗಿಸುವುದಾಗಿ ತಿಳಿಸಿದ್ದೇನೆ ಎಂದರು. ರೈತರ ಪರವಾಗಿ ಲೀಲಾವತಿ ಗಟ್ಟಿಯಾದ ನಿಲುವು ಹೊಂದಿದ್ದರು. ಈಗಾಲೂ ಅವರಿಗೆ ರಕ್ಷಣೆ ನೀಡುವ ಕೆಲಸ ಮಾಡುತ್ತೇವೆ ಎಂದು ಮುಖ್ಯ ಮಂತ್ರಿಗಳು ಭರವಸೆ ನೀಡಿದರು.

# ಎಪಿಡಿಯಿಂದ ಅಂತಾರಾಷ್ಟ್ರೀಯ ವಿಶಿಷ್ಟ ಚೇತನರ ದಿನಾಚರಣೆ

## • Say Yes to Access ಧ್ಯೇಯದೊಂದಿಗೆ ವಿಶೇಷವಾದ ಆಚರಣೆ

ಬೆಂಗಳೂರು: ಅಸೋಸಿಯೇಶನ್ ಆಫ್ ಪೀಪಲ್ ವಿತ್ ಡಿಸೇಬಿಲಿಟಿ (APD) ಭಾನುವಾರ ಬೆಂಗಳೂರಿನ ಕಬ್ಬನ್ ಪಾರ್ಕ್ ನ ಬಾಲಭವನದಲ್ಲಿ ಅಂತಾರಾಷ್ಟ್ರೀಯ ವಿಶಿಷ್ಟ ಚೇತನರ ದಿನಾಚರಣೆಯನ್ನು ವಿಶೇಷವಾಗಿ ಆಯೋಜಿಸಿತ್ತು. ಸಂಸ್ಥೆಯ 'Yes to Access' ಯೋಜನೆಯ ಭಾಗವಾಗಿ ವಿಶಿಷ್ಟ ಚೇತನರಿಗೆ ಇನ್ನೂ ಹೆಚ್ಚಿನ ಸೌಲಭ್ಯಗಳು ದೊರೆಯುವಂತೆ ಮಾಡುವ ಉದ್ದೇಶದಿಂದ ಈ ಕಾರ್ಯಕ್ರಮವನ್ನು ಆಯೋಜಿಸಲಾಗಿತ್ತು. ಈ ಯೋಜನೆಯ ಭಾಗವಾಗಿ ವಿಶಿಷ್ಟ ಚೇತನರಿಗೆ ಬೆಂಬಲವಾಗಿ ನಿಲ್ಲುವ ಪ್ರತಿಜ್ಞೆ ಕೈಗೊಳ್ಳಲಾಯಿತು.

ಶಿಕ್ಷಣ, ಉದ್ಯೋಗ, ಸಮಾನ ಅವಕಾಶಗಳು ಮತ್ತು ತೊಂದರೆಮುಕ್ತ ಜಗತ್ತಿಗೆ ವಿಶಿಷ್ಟ ಚೇತನರನ್ನು ಒಡ್ಡಿಕೊಳ್ಳುವಂತೆ ಮಾಡುವ ನಿಟ್ಟಿನಲ್ಲಿ ಅರಿವು ಮೂಡಿಸಲಾಯಿತು. ಈ ಕಾರ್ಯಕ್ರಮದಲ್ಲಿ ಶ್ರದ್ಧಾಂಜಲಿ ಇಂಟಗ್ರೇಟೆಡ್ ಶಾಲೆಯ ವಿದ್ಯಾರ್ಥಿಗಳು, ಎಪಿಡಿ ಫಲಾನುಭವಿಗಳು ತಮ್ಮ ಅದ್ಭುತ ಪ್ರದರ್ಶನವನ್ನು ನೀಡಿದರು.

ಎಚ್ ಸಿಎಲ್ ಫೌಂಡೇಶನ್ ನ ಆರೋಗ್ಯ ವಿಭಾಗದ ಮುಖ್ಯಸ್ಥೆ ಡಾ.ಚೇತನಾ ತೀರ್ಥಹಳ್ಳಿ ಮುಖ್ಯ ಅತಿಥಿಗಳಾಗಿ ಈ ಕಾರ್ಯಕ್ರಮಕ್ಕೆ ಮೆರಗು ತಂದರು. ಇದೇ ವೇಳೆ, ರಾಷ್ಟ್ರೀಯ ಪ್ರಶಸ್ತಿ ವಿಜೇತ ನಟಿ ಮತ್ತು ವಿಧಾನಪರಿಷತ್ತಿನ ಮಾಜಿ ಸದಸ್ಯೆ ತಾರ, ಲೇಖಕ ಮತ್ತು



ನಿರ್ದೇಶಕ ಗುರುರಾಜ್ ಕುಲಕರ್ಣಿ ನಾಡಗೌಡ ಅವರು ಈ ಸಂದರ್ಭದಲ್ಲಿ ಹಾಜರಿದ್ದರು.

ಈ ವೇಳೆ ಮಾತನಾಡಿದ ಡಾ.ಚೇತನಾ, ವಿಶಿಷ್ಟ ಚೇತನ ವ್ಯಕ್ತಿಗಳಿಗೆ ಸುಧ್ಥಿರ ಅಭಿವೃದ್ಧಿ ಗುರಿಗಳನ್ನು ಸಾಧಿಸಲು ಸಹಕಾರ ಅತ್ಯಗತ್ಉವಾಗಿದೆ. ಈ ದಿಸೆಯಲ್ಲಿ ಎಲ್ಲರೂ ಒಗ್ಗಟ್ಟಾಗಿ ಶ್ರಮಿಸಬೇಕು ಎಂದು ಕರೆ ನೀಡಿದರು.

"ಸುಸ್ಥಿರ ಅಭಿವೃದ್ಧಿ ಗುರಿಗಳನ್ನು ಸಾಧಿಸುವ ನಿಟ್ಟಿನಲ್ಲಿ ವಿಶಿಷ್ಟ ಚೇತನರ ಆರೋಗ್ಯ ಮತ್ತು ಯೋಗಕ್ಷೇಮವನ್ನು ಉತ್ತಮಗೊಳಿಸುವುದು ಅಗತ್ಯವಾಗಿದೆ. ಅಂಗವೈಕಲ್ಯದ ಅನುಭವವು ಜೀವನದಲ್ಲಿ ಸಾರ್ವತ್ರಿಕವಾಗಿದೆ ಮತ್ತು ಮಾನವ ಜೀವನದ ಎಲ್ಲಾ ಕ್ಷೇತ್ರಗಳ ಮೇಲೆ ಇದು ಪರಿಣಾಮ ಬೀರಯತ್ತದೆ. ಈ ಹಿನ್ನೆಲೆಯಲ್ಲಿ ಸುಸ್ಥಿರ ಅಭಿವೃದ್ಧಿ ಗುರಿಗಳ ಅನುಷ್ಠಾನಕ್ಕೆ ಒತ್ತು ನೀಡಬೇಕಿದೆ. ಈ ಮೂಲಕ ವಿಶಿಷ್ಟ ಚೇತನರನ್ನು ಎಲ್ಲಾ ರೀತಿಯಲ್ಲಿಯೂ ತಮ್ಮನ್ನು ತಾವು ತೊಡಗಿಸಿಕೊಳ್ಳುವಂತೆ ಮಾಡಬೇಕಿದೆ" ಎಂದರು.

ಇನ್ನು ಈ ಕಾರ್ಯಕ್ರಮದ ಕುರಿತು ಮಾತನಾಡಿದ ನಟಿ ತಾರಾ ಅವರು "ಈ ಮಕ್ಕಳು ದೇವರಿದ್ದಂತೆ. ಇವರಿಗೆ ವಿದ್ಯೆ ಹೇಳಿ ಕೊಡುವ ಶಿಕ್ಷಕ ಶಿಕ್ಷಕಿಯರ ತಾಳ್ಮೆಗೆ ನನ್ನ ದೊಡ್ಡ ನಮನ.ಪ್ರಾಥಮಿಕ ಶಿಕ್ಷಣ ಅದು ಪಿಎಚ್ ಡಿಗಿಂತ ದೊಡ್ಡದು. ಯಾಕೆಂದರೆ ಮಕ್ಕಳ ಭವಿಷ್ಯಕ್ಕೆ ಒಂದು ಅಡಿಪಾಯ ಹಾಕುವುದು ಅದುವೇ ಪ್ರಾಥಮಿಕ ಶಿಕ್ಷಣ.ಮಕ್ಕಳಿಗೆ ಇದೊಂದು ಒಳ್ಳೆಯ ಕಾರ್ಯಕ್ರಮ" ಎಂದು ಹೇಳಿದರು.

ಇದೇ ವೇಳೆ ಮಾತನಾಡಿದ ಅಸೋಸಿಯೇಶನ್ ಆಫ್ ಪೀಪಲ್ ವಿತ್ ಡಿಸೇಬಿಲಿಟಿ ಸಿಇಒ ಡಾ.ಸೆಂಥಿಲ್ ಎನ್‌ಎಸ್ ಕುಮಾರ್ ಅವರು ಮಾತನಾಡಿ, "ಭಾರತದಲ್ಲಿ 22 ಕೋಟಿಗೂ ಅಧಿಕ ಜನರು ವಿಶಿಷ್ಟ ಚೇತನರಿದ್ದಾರೆ. ಇವರಿಗೆ ಹೆಚ್ಚು ಅಂತರ್ಗತ ಮತ್ತು ತಡೆಮುಕ್ತ ಪರಿಸರಕ್ಕೆ ಪ್ರವೇಶ ಒದಗಿಸುವುದರಿಂದ ಸಮಾಜದಲ್ಲಿ ಉತ್ತಮ ಜೀವನ ಸಾಗಿಸುತ್ತಾರೆ ಮತ್ತು ಗೌರವ ಹೆಚ್ಚುತ್ತದೆ" ಎಂದರು.

# ಡಿ:5ರಂದು ಎಐಯುಟಿಯುಸಿ ಯಿಂದ ಸುವರ್ಣಸೌಧ ಚಲೋ

ಬೆಂಗಳೂರು: ಎಐಯುಟಿಯುಸಿ ಕೇಂದ್ರ ಕಾರ್ಮಿಕ ಸಂಘಟನೆಗೆ ಸೇರಿದ ಕರ್ನಾಟಕ ರಾಜ್ಯ ಸಂಯುಕ್ತ ಅಕ್ಷರ ದಾಸೋಹ ಕಾರ್ಮಿಕರ ಸಂಘದ ರಾಜ್ಯ ಸಮಿತಿ ವತಿಯಿಂದ ವಿವಿಧ ಸರಕಾರಿ ಹಾಗೂ ಅನುದಾನಿತ ಶಾಲೆಗಳಲ್ಲಿ ಅಡುಗೆ ಮಾಡುತ್ತಿರುವ ಅಡುಗೆ ಸಿಬ್ಬಂದಿಗಳನ್ನು ರಾಜ್ಯ ಸರ್ಕಾರದ ಕನಿಷ್ಠ ವೇತನ ಕಾಯ್ದೆಯ ಶೆಡ್ಯೂಲ್ ಗೆ ಒಳಪಡಿಸಿ ಕನಿಷ್ಠ ವೇತನ, ಇಎಸ್‌ಐ, ಪಿಎಫ್ ಒದಗಿಸಲು, ಬೆಲೆಯೇರಿಕೆಗೆ ತಕ್ಕಂತೆ ವೇತನ ಹಚ್ಚಳ ಮಾಡಲು ಹಾಗೂ ಇನ್ನಿತರ ಬೇಡಿಕೆಗಳನ್ನು ಈಡೇರಿಸಲು ಆಗ್ರಹಿಸಿ ಚಳಿಗಾಲದ ಅಧಿವೇಶನದ ಸಂದರ್ಭದಲ್ಲಿ ಸುವರ್ಣಸೌಧ ಚಲೋ ಚಳುವಳಿಯನ್ನು ಇದೇ ದಿನಾಂಕ 5.12.2023 ರಂದು ಹಮ್ಮಿಕೊಳ್ಳಲಾಗಿದೆ.

ವಿವಿಧ ಸರಕಾರಿ ಹಾಗೂ ಅನುದಾನಿತ ಪ್ರಾಥಮಿಕ ಹಾಗೂ ಪ್ರೌಢಶಾಲೆಗಳಲ್ಲಿ ರಾಜ್ಯದಾದ್ಯಂತ ಲಕ್ಷಾಂತರ ವಿದ್ಯಾರ್ಥಿಗಳ ಅಪೌಷ್ಟಿಕತೆಯನ್ನು ನೀಗಿಸಲು ಬಿಸಿಯೂಟ ಕಾರ್ಯಕ್ರಮ ಅತ್ಯಂತ ಪರಿಣಾಮಕಾರಿಯಾಗಿದೆ. ಈ ಕಾರ್ಯಕ್ರಮ ಯಶಸ್ವಿಯಾಗಲು ಬೆನ್ನೆಲುಬಾಗಿರುವವರು ಬಿಸಿಯೂಟದ ಮಹಿಳಾ ಸಿಬ್ಬಂದಿಗಳು. ಅಪೌಷ್ಟಿಕತೆಯಿಂದ ಬಳಲುತ್ತಿರುವ ಎಲ್ಲಾ ಮಕ್ಕಳಿಗೆ ಅಡಿಗೆ ಮಾಡಿ ಬಡಿಸುವುದು, ಹಾಲು ಕಾಯಿಸಿ ನೀಡುವುದು, ಮೊಟ್ಟೆ, ಬಾಳೆಹಣ್ಣು ಕೊಟ್ಟು ಅತ್ಯಂತ ಜತನದಿಂದ ಕೆಲಸ ನಿರ್ವಹಿಸುತ್ತಿರುವ ಈ ಮಹಿಳೆಯರು ಮಕ್ಕಳ ಪಾಲಿಗೆ ಮಹಾತಾಯಂದಿರಾಗಿದ್ದಾರೆ. ಹಾಗೂ ಮಾತೃಹೃದಯದಿಂದ ಮಕ್ಕಳು ಚೆನ್ನಾಗಿರಲಿ ಎಂದು ನಿಷ್ಠೆಯಿಂದ ಕೆಲಸ ಮಾಡುತ್ತಿದ್ದಾರೆ.

ನಮ್ಮ ರಾಜ್ಯದಲ್ಲಿ ಮುಖ್ಯ ಅಡುಗೆಯವರು ಹುದ್ದೆಯಲ್ಲಿ 47,250 ಮತ್ತು ಅಡುಗೆ ಸಹಾಯಕರಾಗಿ 71,336 ಪ್ರಸ್ತುತ ಒಟ್ಟಾರೆ 1,18,586 ಅಡುಗೆ ತಯಾರಕರು ಶಾಲೆಗಳಲ್ಲಿ ಕೆಲಸ ಮಾಡುತ್ತಿದ್ದಾರೆ. ಕೇವಲ ರೂ.3700–3600/ಮಾಸಿಕ ದಷ್ಟು ಕಡಿಮೆ ವೇತನಕ್ಕೆ ದುಡಿಯುವ ಇವರ ವೇತನ ಕೂಡ ಸಕಾಲದಲ್ಲಿ ಪಾವತಿಯಾಗುತ್ತಿಲ್ಲ. ಎಷ್ಟೋ ಸಲ 2–3 ತಿಂಗಳಿಗೊಮ್ಮೆ ವೇತನ ಪಾವತಿ ಮಾಡುವಂತಾಗುತ್ತದೆ.ವರ್ಷದ ಕೇವಲ 10 ತಿಂಗಳು ಮಾತ್ರ ಕೆಲಸ ನೀಡಲಾಗುವ ಇವರಿಗೆ ಸೇವಾ ಹಿರಿತನದ ಭತ್ಯೆ ಇಲ್ಲ. ಕೆಲಸದ ನಿಯಮಾವಳಿಗಳ ಸ್ಪಷ್ಟ ನಿರ್ದೇಶನವಿದ್ದರೂ ಶಾಲೆಗಳ 'ಆಯಾ'ಗಳ ತರಹ 'ಡಿ'ಗ್ರೂಪ್ ದರ್ಜೆ ನೌಕರರ ತರಹ ದುಡಿಸಿಕೊಳ್ಳಲಾಗುತ್ತಿದೆ. ಇದೀಗ ವಯೋನಿವೃತ್ತಿಯಾಗುತ್ತಿರುವವರಿಗೆ ಯಾವುದೇ ಇಡಿಗಂಟಿನ ಸಹಕಾರವಾಗಲಿ, ನಿವೃತ್ತಿ ವೇತನವಾಗಲಿ ಇಲ್ಲ. ಶಾಸನಬದ್ಧವಾಗಿ ದೊರಕಬೇಕಾದ ವೇತನ ಸಹಿತ ಹೆರಿಗೆ ರಜೆ, ವೈದ್ಯಕೀಯ ಸೌಲಭ್ಯಗಳೂ ದೊರಕುತ್ತಿಲ್ಲ.

ಈ ಬಿಸಿಯೂಟ ತಯಾರಕರ ಸುರಕ್ಷತೆಗೆ ಬೇಕಾಗಿರುವ ಸಾಮಾಗ್ರಿಗಳಾದ, ಹತ್ತಿಬಟ್ಟೆ ಸೀರೆ, ಏಪ್ರಾನ್, ಕೈಗವಸು, ತಲೆಗೆ ಸ್ಕಾರ್ಫ್‌ನೊಂದಿಗೆ ಕೆಲಸ ನಿರ್ವಹಿಸಬೇಕೆಂದು ನಿರ್ದೇಶನವಿದೆ, ಆದರೆ ಇದನ್ನು ಪಾಲಿಸುತ್ತಿಲ್ಲ. ಬಹುತೇಕ ಕಡೆಗಳಲ್ಲಿ ಇವರದಲ್ಲದ ಕೆಲಸಗಳನ್ನು, ಹೆಚ್ಚುವರಿಯಾಗಿ ದುಡಿಸಿಕೊಳ್ಳುತ್ತಿದ್ದಾರೆ. ದಿನದ ಮುಖ್ಯವಾದ ಸಮಯವನ್ನು ಶಾಲೆಗಳಲ್ಲಿ ಕಳೆಯಬೇಕಾಗಿದೆ. ಎಷ್ಟೋ ಬಿಸಿ ಊಟ ತಯಾರಿಸುವ ಹೆಣ್ಣು ಮಕ್ಕಳು ಶಿಕ್ಷಣದಿಂದ ವಂಚಿತರು, ಒಬ್ಬಂಟಿ ಮಹಿಳೆಯರು, ಬಡವರು, ಇಡೀ ಕುಟುಂಬ ನಿರ್ವಹಿಸುವ ಜವಾಬ್ದಾರಿ ಇರುವಂತಹವರು.

ಅಷ್ಟೇ ಅಲ್ಲ ಅಪೌಷ್ಟಿಕತೆಯನ್ನು ನೀಗಿಸಿ ಭವಿಷ್ಯದ ನಾಗರಿಕರನ್ನು ರೂಪಿಸುವ ಮಹತ್ತರ ಜವಾಬ್ದಾರಿ ಹೊತ್ತಿರುವ ಇವರ ಮಕ್ಕಳಿಗೆ ಮಾತ್ರ ಶಿಕ್ಷಣ, ಆರೋಗ್ಯ, ಭವಿಷ್ಯಗಳು ಮಂಕಾಗಿವೆ. ಕಾನೂನಾತ್ಮಕವಾಗಿ ಮಧ್ಯಾಹ್ನದ ಬಿಸಿಯೂಟ ಜಾರಿಯಲ್ಲಿದ್ದು ಇದು ನಿರಂತರವಾಗಿ ಇರುವಂತದ್ದಾದ್ದರಿಂದ ಇವರನ್ನು ಸರ್ಕಾರಿ ನೌಕರರನ್ನಾಗಿ ನೇಮಿಸಿಕೊಳ್ಳಬೇಕು, ಅವರ ಹುದ್ದೆಯನ್ನು ಖಾಯಂಗೊಳಿಸಬೇಕು, ಕಾರ್ಮಿಕರೆಂದು ಪರಿಗಣಿಸಿ ಕನಿಷ್ಠ ವೇತನ ,ಆರೋಗ್ಯ ರಕ್ಷಣೆ, ಇಪಿಎಫ್, ಇಎಸ್‌ಐ, ನಿವೃತ್ತಿಯ ಪಿಂಚಣಿ , ಹೆರಿಗೆ ರಜೆ, ಸಮವಸ್ತ್ರ, ಗುರುತಿನ ಚೀಟಿ ಇತ್ಯಾದಿ ಸೌಲಭ್ಯಗಳನ್ನು ನೀಡಬೇಕಾಗಿದೆ. ರಾಜ್ಯದ ಕಾರ್ಮಿಕ ಇಲಾಖೆ ಎಲ್ಲಾ ದುಡಿಯುವ ಕಾರ್ಮಿಕರಿಗೆ ಕನಿಷ್ಠ ವೇತನ ನಿಗದಿ ಕಾಯ್ದೆಯನ್ನು ಜಾರಿಗೊಳಿಸಿದೆ. ಅದರಂತೆ ಸರ್ಕಾರಿ ಹಾಸ್ಟೆಲ್‌ಗಳಲ್ಲಿ, ಮದುವೆ ಛತ್ರಗಳಲ್ಲಿ, ಹೋಟೆಲ್ ಗಳಲ್ಲಿ ಕೆಲಸ ಮಾಡುವ ಅಡುಗೆಯವರಿಗೆ ಮತ್ತು ಸಹಾಯಕರಿಗೂ ವೇತನ ನಿಗದಿಗೊಳಿಸಿದೆ. ಆದರೆ ಅದೇ ಹುದ್ದೆಯಲ್ಲಿ ಕೆಲಸ ಮಾಡುತ್ತಿರುವ ಈ ಕಾರ್ಮಿಕರನ್ನು ಶೆಡ್ಯೂಲ್‌ನಿಂದ ಹೊರಗಿಡಲಾಗಿದೆ.

ಹಿಂದಿನ ಸರ್ಕಾರ ಬಜೆಟ್‌ನಲ್ಲಿ ಘೋಷಿಸಿದ ಒಂದು ಸಾವಿರ ರೂ.ನಷ್ಟು ಹೆಚ್ಚಿಸಿ ಘೋಷಿಸಿದ್ದು ಕೇವಲ ಚುನವಣೆ ಕಾಲದಲ್ಲಿ ಮೂಗಿಗೆ ತುಪ್ಪ ಸವರಿದ್ದಷ್ಟೇ ಆಗಿದೆ. ಈಗ ದೊರೆಯುತ್ತಿರುವ ಬಹಳೇ ಕನಿಷ್ಠ ಮಾಸಿಕ ಗೌರವಧನದಲ್ಲಿ ಪಟ್ಟಣಗಳಲ್ಲಿ ಒಂದು ತಿಂಗಳ ಬಾಡಿಗೆಯನ್ನೂ ಕಟ್ಟಲು ಆಗುವುದಿಲ್ಲ.ಅಲ್ಲದೇ ಈಗಿರುವ ಗ್ಯಾರಂಟಿಗಳಿಂದ ಜೀವನ ಬದಲಾಗಿಲ್ಲ.ಇಂದಿನ ಬೆಲೆಯೇರಿಕೆಗೆ ತಕ್ಕಂತೆ ಇವರ ವೇತನ ಹೆಚ್ಚಿಸಬೇಕಾಗಿದೆ.

ಆದ್ದರಿಂದ ಈ ಕೆಳಗಿನ ಬೇಡಿಕೆಗಳನ್ನು ಈಡೇರಿಸಬೇಕೆಂದು ಆಗ್ರಹಿಸಿ ಎಐಯುಟಿಯುಸಿ ಗೆ ಸಂಯೋಜಿತ, ಕರ್ನಾಟಕ ರಾಜ್ಯ ಸಂಯುಕ್ತ ಅಕ್ಷರ ದಾಸೋಹ ಕಾರ್ಮಿಕರ ಸಂಘಟನೆಯ ಕರ್ನಾಟಕ ರಾಜ್ಯಸಮಿತಿಯು ರಾಜ್ಯಮಟ್ಟದ ಪ್ರತಿಭಟನೆಯನ್ನು ಚಳಿಗಾಲದ ಅಧಿವೇಶನದ ಸಂದರ್ಭದಲ್ಲಿ ಹಮ್ಮಿಕೊಂಡಿದೆ.ಎಲ್ಲ ಹಂತಗಳಲ್ಲಿ ಬಿಸಿಯೂಟ ಕಾರ್ಮಿಕರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಳ್ಳಬೇಕೆಂದು ಸಂಘಟನೆಯು ಕರೆ ನೀಡುತ್ತದೆ. ಹೆಚ್ಚಿನ ಮಾಹಿತಿಗೆ 8277251890 ಗೆ ಸಂಪರ್ಕಿಸಲು ಕೋರಲಾಗಿದೆ.

# ಎಂಎಸ್ಎಂಇ ಗಳ ಬೆಳವಣಿಗೆಗೆ ನೆರವಾಗಲು ಗೋದ್ರೇಜ್ ಪಾಲುದಾರಿಕೆ

ಹುಬ್ಬಳ್ಳಿ: ಭಾರತದಲ್ಲಿನ ಸಣ್ಣ ಉದ್ದಿಮೆಗಳಿಗೆ ಕಳೆದ ದಶಕದಲ್ಲಿ ಸಾಲ ಸೌಲಭ್ಯ ಅಂತರ ಕಡಿಮೆ ಮಾಡಲು ಹಲವಾರು ದಿಟ್ಟ ಕ್ರಮಗಳನ್ನು ಕೈಗೊಳ್ಳಲಾಗಿದೆ. ಸಣ್ಣ ಉದ್ಯಮಗಳು ಎದುರಿಸುತ್ತಿರುವ ಹಲವಾರು ಸವಾಲುಗಳಲ್ಲಿ ಸಾಲ ಪಡೆದುಕೊಳ್ಳುವುದೂ ಒಂದಾಗಿದೆ. ಸಣ್ಣ ಉದ್ಯಮಗಳ ಮುಂದಿರುವ ಸವಾಲುಗಳ ಪಟ್ಟಿ ದೀರ್ಘವಾಗಿದೆ. ತೀವ್ರ ಸ್ಪರ್ಧೆ, ನಗದು ಹರಿವಿನ ದಕ್ಷ ನಿರ್ವಹಣೆ, ಪರಿಣತ ಮಾನವಶಕ್ತಿಯ ಕೊರತೆ, ನಿರಂತರವಾಗಿ ಬದಲಾಗುತ್ತಿರುವ ತಂತ್ರಜ್ಞಾನದ ಸವಾಲು, ಉತ್ತಮ ನಿಯಮಗಳಡಿ ಸಕಾಲದಲ್ಲಿ ಸಾಲ ಸೌಲಭ್ಯ, ಸೀಮಿತ ಸಂಪನ್ಮೂಲಗಳು ಮತ್ತು ತಿಳಿವಳಿಕೆ ಕೊರತೆಯ ಕಾರಣದಿಂದಾಗಿ ಕಾನೂನು ಮತ್ತು ನಿಯಮಗಳ ಪಾಲನೆಗೆ ಸಂಬಂಧಿಸಿದಂತೆ ನಡೆಯುವ ಹೋರಾಟ ಮುಂತಾದ ಸವಾಲುಗಳನ್ನು ಎಂಎಸ್‌ಎಂಇಗಳು ಎದುರಿಸುತ್ತಿವೆ.

ಭಾರತದ ಉದ್ದಿಮೆ ಲೋಕದಲ್ಲಿ 125 ವರ್ಷಗಳ ಪರಂಪರೆ ಹೊಂದಿರುವ ಗೋದ್ರೇಜ್ ಸಮೂಹವು ಈ ಸವಾಲುಗಳನ್ನು ಸಮರ್ಥವಾಗಿ ಎದುರಿಸಲು ಈಗ ಸಜ್ಜಾಗಿದೆ. 'ರಾಷ್ಟ್ರ–ನಿರ್ಮಾಣ'ದ ನೀತಿಯಲ್ಲಿ ಬೇರೂರಿರುವ ಮತ್ತು ಗೋದ್ರೇಜ್ ಬ್ರ್ಯಾಂಡ್‌ನಲ್ಲಿ ಭಾರತದ ಗ್ರಾಹಕರು ಇರಿಸಿರುವ ನಂಬಿಕೆಯಿಂದ ಉತ್ತೇಜನಗೊಂಡಿರುವ ಗೋದ್ರೇಜ್ ಕ್ಯಾಪಿಟಲ್, ತನ್ನ ಪಾಲುದಾರರ ಜಾಲವನ್ನು ಗಮನಾರ್ಹವಾಗಿ ವಿಸ್ತರಿಸುವ ಮೂಲಕ ತನ್ನ ನಿರ್ಮಾಣ್ ಪ್ಲಾಟ್‌ಫಾರ್ಮ್‌ನಲ್ಲಿ ಹೆಚ್ಚಿನ ನಂಬಿಕೆ ಇರಿಸಿದೆ. ಡಿಬಿಎಸ್ ಬ್ಯಾಂಕ್ ಇಂಡಿಯಾ, ವೀಸಾ, ಅಮೆಜಾನ್ ಮತ್ತಿತರ ಕಂಪನಿಗಳ ಜೊತೆಗಿನ ಪಾಲುದಾರಿಕೆಗಳು ಎಂಎಸ್‌ಎಂಇ ಮಾಲೀಕರಿಗೆ ಬೆಳವಣಿಗೆಯ ಅವಕಾಶಗಳನ್ನು ಒದಗಿಸುವ ಗೋದ್ರೇಜ್ ಕ್ಯಾಪಿಟಲ್‌ನ ಬದ್ಧತೆಯನ್ನು ಸೂಚಿಸುತ್ತವೆ. ಈ ಸಹಯೋಗಗಳನ್ನು 'ಎಂಎಸ್‌ಎಂಇ' ಗಳನ್ನು ಸಬಲೀಕರಣಗೊಳಿಸುವ ರೀತಿಯಲ್ಲಿ ವಿನ್ಯಾಸಗೊಳಿಸಲಾಗಿದೆ. 'ಎಂಎಸ್‌ಎಂಇ"ಗಳ ವಹಿವಾಟಿನ ಪಯಣದ ಉದ್ದಕ್ಕೂ ಮೌಲ್ಯವರ್ಧಿತ ಸೇವೆಗಳ ವೈವಿಧ್ಯಮಯ ಶ್ರೇಣಿಯನ್ನು ಮತ್ತು ಸಮಗ್ರ ಬೆಂಬಲ ನೀಡಲಿದೆ. ತನ್ನ ಬದ್ಧತೆಗೆ ಪುರಾವೆಯಾಗಿ, ಭಾರತದ ಹಣಕಾಸು ಸೇವಾ ವಲಯದಲ್ಲಿ 'ಎಂಎಸ್‌ಎಂಇ' ಗಳ ಬೆಳವಣಿಗೆಗೆ ಸಕ್ರಿಯವಾಗಿ ಕೊಡುಗೆ ನೀಡಲು 13ಕ್ಕೂ ಹೆಚ್ಚು ಪಾಲುದಾರರನ್ನು ಸೇರಿಸಲು ನಿರ್ಮಾಣ್ ತನ್ನ ಸಹಯೋಗದ ಮಾದರಿಯನ್ನು ವಿಸ್ತರಿಸಿದೆ. ಈ ವೇದಿಕೆಯು ಎಂಎಸ್‌ಎಂಇ ಗಳಿಗೆ ಮೂರು ನಿರ್ಣಾಯಕ ಕ್ಷೇತ್ರಗಳ ಸುತ್ತ ಸುತ್ತುವ ಬೆಳವಣಿಗೆ ಉತ್ತೇಜಿಸುವ ಗುರಿ ಹೊಂದಿದೆ.

ಈ ಪಾಲುದಾರಿಕೆ ಕುರಿತು ಮಾತನಾಡಿರುವ, ಗೋದ್ರೇಜ್ ಕ್ಯಾಪಿಟಲ್‌ನ ವ್ಯವಸ್ಥಾಪಕ ನಿರ್ದೇಶಕ ಮತ್ತು ಸಿಇಒ ಮನೀಶ್ ಶಾ,'ನಿರ್ಮಾಣ್"ದ ಮೂಲಕ 'ಎಂಎಸ್‌ಎಂ'ಗಳ ಬೆಳವಣಿಗೆಗೆ ಸಹಾಯ ಮಾಡುವ ನಮ್ಮ ಬದ್ಧತೆಯನ್ನು ಬಲಪಡಿಸುತ್ತಿದ್ದೇವೆ. 'ಎಂಎಸ್‌ಎಂಇ'ಗಳ ಉದ್ಯಮದ ಬೆಳವಣಿಗೆಯ ಪಯಣದ ಭಾಗವಾಗಿರುವ ಮೂಲಕ ಸಾಲವನ್ನು ಮೀರಿ ನಾವು ಸಹಾಯ ಮಾಡಲಿದ್ದೇವೆ. ಭಾರತವನ್ನು 5 ಲಕ್ಷ ಕೋಟಿ ಡಾಲರ್ ಆರ್ಥಿಕತೆಯನ್ನಾಗಿ ಮಾಡಲು ಕೊಡುಗೆ ನೀಡಬಹುದು ಎಂದು ನಾವು ದೃಢವಾಗಿ ನಂಬಿದ್ದೇವೆ' ಎಂದು ಹೇಳಿದ್ದಾರೆ.

ಡಿಜಿಟಲ್ ಪಾವತಿಯಲ್ಲಿ ಜಾಗತಿಕವಾಗಿ ಮುಂಚೂಣಿಯಲ್ಲಿರುವ ವೀಸಾ, ನಿರ್ಮಾಣ್ ವೇದಿಕೆ ಮೂಲಕ ಎಂಎಸ್‌ಎಂಇಗಳಿಗೆ ಸಮಗ್ರ ಪಾವತಿ ಪರಿಹಾರಗಳನ್ನು ಒದಗಿಸಲಿದೆ. ಇದರ ವ್ಯಾಪಕವಾದ ಜಾಲ ಮತ್ತು ಜಾಗತಿಕ ಸ್ವೀಕಾರವು ಡಿಬಿಎಸ್ ಬ್ಯಾಂಕ್ ಇಂಡಿಯಾದ ನಿರ್ಮಾಣ್ ಬಳಕೆದಾರರಿಗಾಗಿ ವಿಶೇಷವಾಗಿ ರೂಪಿಸಿರುವ ಕೊಡುಗೆಗಳನ್ನು ಬೆಂಬಲಿಸುತ್ತದೆ.

ನಿರ್ಮಾಣ್ ಜೊತೆಗಿನ ಅಮೆಜಾನ್ ಪಾಲುದಾರಿಕೆಯ ನೆರವಿನಿಂದ ಎಂಎಸ್‌ಎಂಇ ಗಳು ಅಮೆಜಾನ್‌ಡಾಟ್‌ಇನ್ ತಾಣದಲ್ಲಿ ತಮ್ಮ ಉದ್ಯಮವನ್ನು ನೋಂದಾಯಿಸುವ ಮೂಲಕ ಭಾರತದಾದ್ಯಂತ ಗ್ರಾಹಕರಿಗೆ ತಮ್ಮ ಉತ್ಪನ್ನಗಳನ್ನು ಪ್ರದರ್ಶಿಸಲು ಮತ್ತು ಮಾರಾಟ ಮಾಡಲು ಸಹಾಯ ಮಾಡುತ್ತದೆ. ಅಮೆಜಾನ್‌ನ ಇ–ಕಾಮರ್ಸ್ ರಫ್ತು ಕಾರ್ಯಕ್ರಮದ ಅಮೆಜಾನ್ ಜಾಗತಿಕ ಮಾರಾಟಕ್ಕೆ ಮೂರು ತಿಂಗಳ ಚಂದಾದಾರಿಕೆಯೊಂದಿಗೆ ಜಾಗತಿಕ ಮಾರುಕಟ್ಟೆಗಳಿಗೆ ಬಾಗಿಲು ತೆರೆಯಲು ಇದು ಹೆಚ್ಚುವರಿಯಾಗಿ ಸಹಾಯ ಮಾಡುತ್ತದೆ. 2024ರ ಮಾರ್ಚ್‌ವರೆಗೆ ಅಮೆಜಾನ್‌ನ ಸ್ಮಾರ್ಟ್ ಕಾಮರ್ಸ್‌ನಿಂದ ಅಂತರ್ಜಾಲ ತಾಣ ನಿರ್ಮಾಣ ಮತ್ತು ಬಹುಬಗೆಯ ಸರಕು ನಿರ್ವಹಣೆ ಪರಿಹಾರಗಳಿಗೆ ನಿರ್ಮಾಣ್ ಬಳಕೆದಾರರು ಉಚಿತ ಪ್ರವೇಶ ಪಡೆಯಲು ಸಾಧ್ಯವಾಗಲಿದೆ.

# ಮಾಜಿ ಸಂಸದ ಶಿವರಾಮೇಗೌಡ ವಿರುದ್ಧ ಎಫ್‌ಐಆರ್

ಬೆಂಗಳೂರು: ಮಾಜಿ ಸಂಸದ ಎಲ್. ಆರ್. ಶಿವರಾಮೇಗೌಡ ವಿರುದ್ಧ ಕೇಂದ್ರೀಯ ತನಿಖಾ ದಳ ಎಫ್‌ಐಆರ್ ದಾಖಲಿಸಿದೆ.



ನಕಲಿ ದಾಖಲೆ ಸೃಷ್ಟಿಸಿ 12.48 ಕೋಟಿ ಲೋನ್ ಪಡೆದು ವಂಚನೆ ಮಾಡಿರುವ ಆರೋಪದ ಎಲ್ ಆರ್ ಶಿವರಾಮೇಗೌಡ ಸೇರಿ ಏಳು ಮಂದಿ ವಿರುದ್ಧ ಕೇಸ್ ಹಾಕಲಾಗಿದೆ.

ಎಂಜಿ ರಸ್ತೆಯ ಪಂಜಾಬ್ ನ್ಯಾಷನಲ್ ಬ್ಯಾಂಕ್ ನಲ್ಲಿ ಶಿವರಾಮೇಗೌಡರು ಲೋನ್ ಪಡೆದಿದ್ದರು. ಇದೀಗ ಈ ಸಾಲದ ಹಣ ಬೇರೆಡೆ ವರ್ಗಾಯಿಸಿ ಅನ್ಯ ಉದ್ದೇಶಕ್ಕೆ ಬಳಕೆ ಮಾಡಿರುವ ಕುರಿತು ಬ್ಯಾಂಕ್ ನ ಅಸಿಸ್ಟೆಂಟ್ ಜನರಲ್ ಮ್ಯಾನೇಜರ್ ದೂರು ಸಲ್ಲಿಸಿದ್ದರು.

ಈ ದೂರಿನ ಮೇರೆಗೆ ಶಿವರಾಮೇಗೌಡ, ಪತ್ನಿ ಸುಧಾ, ಮಗ ಚೇತನ್ ಗೌಡ, ಶಿವರಾಮೇಗೌಡ ಸೊಸೆ ಹಾಗೂ ರಾಯಲ್ ಕಂಕರ್ಡ್ ಎಜುಕೇಷನಲ್ ಟ್ರಸ್ಟ್ ವಿರುದ್ಧ ಸಿಬಿಐ ಎಫ್‌ಐಆರ್ ದಾಖಲಿಸಿದೆ.

ಐಪಿಸಿ ಸೆಕ್ಷನ್ 120**b** (ಕ್ರಿಮಿನಲ್ ಪಿತೂರಿ), 420 (ವಂಚನೆ), 468 (ಮೋಸ ಮಾಡುವ ಉದ್ದೇಶದಿಂದ ಫೋರ್ಜರಿ) ಹಾಗೂ ಭ್ರಷ್ಟಾಚಾರ ನಿಯಂತ್ರಣ ಕಾಯ್ದೆಯಡಿ ಪ್ರಕರಣ ದಾಖಲಾಗಿದ್ದು, ಸಿಬಿಐ ಇನ್ಸ್ ಪೆಕ್ಟರ್ ಸಿದ್ದಪ್ಪ ಪ್ರಕರಣದ ತನಿಖೆ ನಡೆಸುತ್ತಿದ್ದಾರೆ.

ಸಂಪುಟ: 4 ಸಂಚಿಕೆ: 256 ಪುಟ: 4 RNI: KARKAN/2020/79084 Regn,No:G-2/PMG/KA/NK/BM/139/2021-23

BELAGAVI VARADI KANNADA DAILY MORNING : Editor, Printer, Publisher & Owned By : **Satish Basavani Gudagenatti,** Basavani House No.53, Ashray Colony, Sarathi Nagar, Tv Center - 590019, TQ & DIST Belagavi, Karnataka.

Printed At : LAXMI PRINTERS, No.627. Auto Nagar - 590016.TQ & DIST Belagavi, Karnataka Mob : 9900332089